ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 90
23–9–2025 ಮಂಗಳವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 90

# ನಾಡಿನ ಕಲೆ, ಸಂಸ್ಕೃತಿ ಬಿಂಬಿಸುವ ನಾಡಹಬ್ಬ ದಸರಾಗೆ ಚಾಲನೆ

**ಮೈಸೂರು:** ವಿಶ್ವದ ಲಕ್ಷಾಂತರ ಪ್ರವಾಸಿಗರನ್ನು ಆಕರ್ಷಿಸುವ, ನಾಡಿನ ಕಲೆ, ಸಂಸ್ಕೃತಿ, ಪರಂಪರೆ, ಇತಿಹಾಸ ಬಿಂಬಿಸುವ ವಿಶ್ವವಿಖ್ಯಾತ ನಾಡಹಬ್ಬ ದಸರಾ ಮಹೋತ್ಸವಕ್ಕೆ ಇಂದು ಅಧಿಕೃತ ಚಾಲನೆ ದೊರೆತಿದೆ. ಈ ಮೂಲಕ ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ 11 ದಿನಗಳ ಕಾಲ ದಸರಾ ವೈಭವ ಕಳೆಗಟ್ಟಲಿದೆ.

ನಾಡದೇವತೆ ಚಾಮುಂಡೇಶ್ವರಿ ದೇವಿಗೆ ಅಗ್ರಪೂಜೆ ಸಲ್ಲಿಸುವ ಮೂಲಕ ಬೂಕರ್ ಪ್ರಶಸ್ತಿ ಪುರಸ್ಕೃತ ಸಾಹಿತಿ ಬಾನು ಮುಷ್ತಾಕ್ ಬೆಳಗ್ಗೆ 10.10ರಿಂದ 10.40ರೊಳಗೆ ಸಲ್ಲುವ ಶುಭ ವೃಶ್ಚಿಕ ಲಗ್ನದಲ್ಲಿ ದಸರಾ ಮಹೋತ್ಸವಕ್ಕೆ ಚಾಲನೆ ನೀಡಿದರು.

ದಸರಾ ಉದ್ಘಾಟಕಿ ಬಾನು ಮುಷ್ತಾಕ್ ಹಾಗೂ ಗಣ್ಯರನ್ನು ಬೆಳಗ್ಗೆ ಚಾಮುಂಡಿಬೆಟ್ಟದಲ್ಲಿ ನಂದಿಧ್ವಜ, ಮಂಗಳವಾದ್ಯ, ವೀರಗಾಸೆ, ತಮಟೆ, ನಗಾರಿ ಮೇಳ ಮುಂತಾದ ಜಾನಪದ ತಂಡಗಳ ಮೆರವಣಿಗೆಯ ಮೂಲಕ ಅದ್ಧೂರಿಯಾಗಿ ಬರಮಾಡಿಕೊಳ್ಳಲಾಯಿತ್ತು. ನಂತರ ಪೂರ್ಣಕುಂಭ ಸ್ವಾಗತ ನೀಡಿದ ಬಳಿಕ ಚಾಮುಂಡಿಬೆಟ್ಟದಲ್ಲಿ ಮೊದಲಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಸೇರಿದಂತೆ ಸಚಿವರ ಉಪಸ್ಥಿತಿಯಲ್ಲಿ ನಾಡ ಅಧಿದೇವತೆ ಚಾಮುಂಡೇಶ್ವರಿದೇವಿಯ ಅಗ್ರ ಪೂಜೆ ನಡೆಸಲಾಯಿತು. ದೇವಿಗೆ ವಿಶೇಷ ಪೂಜೆ ನಂತರ ವಿಶೇಷ ವೇದಿಕೆಯಲ್ಲಿ ಬೆಳ್ಳಿರಥದಲ್ಲಿ ವಿರಾಜಮಾನವಾಗಿರುವ ಚಾಮುಂಡೇಶ್ವರಿಗೆ ಪುಷ್ಪಾರ್ಚನೆಗೈಯ್ಯುವ ಮೂಲಕ ದಸರಾ ಮಹೋತ್ಸವವನ್ನು ಬಾನು ಮುಷ್ತಾಕ್ ವಿದ್ಯುಕ್ತವಾಗಿ ಉದ್ಘಾಟಿಸಿದರು.

ಈ ಬಾರಿ 11 ದಿನಗಳ ಕಾಲ ನಡೆಯುವ ವೈಭವದ ದಸರಾ ಉತ್ಸವಕ್ಕೆ ಸಾಂಸ್ಕೃತಿಕ ನಗರಿ ಮೈಸೂರು ನವವಧುವಿನಂತೆ ಸಜ್ಜಾಗಿದ್ದು, ಈ ಬಾರಿ ದಸರಾ ಉದ್ಘಾಟಕರ ವಿವಾದ ಹೊರತು ಪಡಿಸಿದರೆ ಉಳಿದಂತೆ ದಸರೆ ಅತ್ಯಂತ ಸಂಭ್ರಮ ಸಡಗರದಿಂದ ಆಚರಿಸಲು ಎಲ್ಲಾ ರೀತಿಯಲ್ಲೂ ಸಿದ್ಧತೆ ಭರ್ಜರಿಯಾಗಿಯೇ ನಡೆಯಲಿದೆ.

ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ, ಸಚಿವರಾದ ಕೆ.ವೆಂಕಟೇಶ್, ಹೆಚ್.ಕೆ.ಪಾಟೀಲ್, ಶಾಸಕರಾದ ರಮೇಶ್ ಬಂಡಿಸಿದ್ದೇಗೌಡ, ಅನೀಲ್ ಚಿಕ್ಕಮಾದು, ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಷ್ಣುವರ್ಧನ, ಮೈಸೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಕೆ. ಆರ್.ರಕ್ಷಿತ್ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

ನವವಧುವಿನಂತೆ ಕಂಗೊಳಿಸುತ್ತಿದೆ ಮೈಸೂರು: ನಾಡಹಬ್ಬ ದಸರಾ ಮಹೋತ್ಸವಕ್ಕಾಗಿ ಸಾಂಸ್ಕೃತಿಕ ನಗರಿ ಮೈಸೂರು ನವವಧುವಿನಂತೆ ಸಿಂಗಾರಗೊಂಡಿದ್ದು, ದೇಶ ವಿದೇಶದ ಲಕ್ಷಾಂತರ ಪ್ರವಾಸಿಗರನ್ನು



ಸೆಳೆಯಲು ಸಜ್ಜಾಗಿದೆ. ವಿಶ್ವವಿಖ್ಯಾತ ಅಂಬಾವಿಲಾಸ ಅರಮನೆ ಸೇರಿದಂತೆ ಜಂಬೂಸವಾರಿ ಸಾಗುವ ರಾಜಮಾರ್ಗ, ನಗರದ ಪ್ರಮುಖ ರಸ್ತೆಗಳು ವಿದ್ಯುತ್ ದೀಪಾಲಂಕಾರದಿಂದ ಝಗಮಗಿಸುತ್ತಿವೆ. ದಸರಾ ಮಹೋತ್ಸವದ ಪ್ರಮುಖ ಆಕರ್ಷಣೆಗಳಾದ ಫಲಪುಷ್ಪ ಪ್ರದರ್ಶನ, ಆಹಾರ ಮೇಳ, ರೈತ ದಸರಾ, ಸಾಂಸ್ಕೃತಿಕ ಕಾರ್ಯಕ್ರಮ, ಕುಸ್ತಿ ಪಂದ್ಯಾವಳಿ, ಮಹಿಳಾ ದಸರಾ, ದಸರಾ ಪುಸ್ತಕ ಮೇಳ, ರಾಜ್ಯ ದಸರಾ ಕ್ರೀಡಾಕೂಟ, ರಂಗಾಯಣ ನಾಟಕೋತ್ಸವ, ವಸ್ತುಪ್ರದರ್ಶನ ಸೇರಿದಂತೆ ಹತ್ತು ಹಲವು ಕಾರ್ಯಕ್ರಮಗಳು ಉದ್ಘಾಟನೆಗೊಂಡು ಸಾರ್ವಜನಿಕರನ್ನು ರಂಜಿಸಲಿವೆ. ಈ ಮೂಲಕ 11 ದಿನಗಳ ಕಾಲ ಮೈಸೂರು ನವರಾತ್ರಿ ಸಂಭ್ರಮದಲ್ಲಿ ಮಿಂದೇಳಲಿದೆ.

**ಚಾಮುಂಡಿ ತಾಯಿಯ ಸೀರೆ ಪಡೆದ ಮುಷ್ತಾಕ್:**

ದಸರಾ ಉದ್ಘಾಟನೆಗೆ ಆಗಮಿಸಿದ ಬಾನು ಮುಷ್ತಾಕ್ ಚಾಮುಂಡಿ ತಾಯಿಯ ದರ್ಶನ ಪಡೆದು ಮಂಗಳಾರತಿ ಸ್ವೀಕರಿಸಿದರು.

ಹಸಿರು ಬಾರ್ಡರ್ ಇರುವ ಹಳದಿ ಮೈಸೂರು ರೇಷ್ಮೆ ಸೀರೆ, ತಲೆಗೆ ಮೈಸೂರು ಮಲ್ಲಿಗೆ ಮುಡಿದು ಬಾನು ಮುಷ್ತಾಕ್ ದೇವಸ್ಥಾನಕ್ಕೆ ಆಗಮಿಸಿದರು. ಗರ್ಭಗುಡಿ ಮುಂಭಾಗದ ಆವರಣದಲ್ಲಿ ನಿಂತು ತಾಯಿ ಚಾಮುಂಡಿ ದರ್ಶನ ಪಡೆದರು. ನಂತರ ಗಣಪತಿಗೆ ಕೈ ಮುಗಿದು, ಮಂಗಳಾರತಿ ಪಡೆದು ಪ್ರಸಾದ ಸ್ವೀಕರಿಸಿದ್ದಾರೆ. ಚಾಮುಂಡಿ ಬೆಟ್ಟಕ್ಕೆ ಬಾನು ಮುಷ್ತಾಕ್ ಇಡೀ ಕುಟುಂಬವೇ ಹಾಜರಾಗಿದ್ದು ವಿಶೇಷ ಖಾಸಗಿ ಹೋಟೆಲಿನಿಂದ ಕಾರಿನಲ್ಲಿ ಚಾಮುಂಡಿ ಬೆಟ್ಟಕ್ಕೆ ಬಾನು ಮುಷ್ತಾಕ್ ಆಗಮಿಸಿದರೆ ಸಿಎಂ ಮತ್ತು ಸಚಿವರು ಐರಾವತ ಬಸ್ಸಿನಲ್ಲಿ ಆಗಮಿಸಿದರು.

**ಹತ್ತು ಹಲವು ಕಾರ್ಯಕ್ರಮ:**

ಮೈಸೂರಿನಲ್ಲಿ ದಸರಾ ಉತ್ಸವಕ್ಕೆ ಕ್ಷಣಗಣನೆ ಆರಂಭವಾಗಿದ್ದು, ಬೆಟ್ಟದಲ್ಲಿ ದಸರಾ ಉದ್ಘಾಟನೆಯಾಗುತ್ತಿದ್ದಂತೆ ನಗರದ ವಿವಿಧ ವೇದಿಕೆಗಳಲ್ಲಿ ದಸರಾ ಅಂಗವಾಗಿ ನಡೆಯುವ ಕಾರ್ಯಕ್ರಮಗಳಿಗೆ ಚಾಲನೆ ಸಿಗಲಿದೆ. ಮೊದಲ ದಿನವಾದ ಸೋಮವಾರ ಕುಪ್ಪಣ್ಣ ಪಾರ್ಕ್‌ನಲ್ಲಿ ಫಲಪುಷ್ಪ ಪ್ರದರ್ಶನ, ಮಹಾರಾಜ ಕಾಲೇಜು ಮೈದಾನದಲ್ಲಿ ಆಹಾರ ಮೇಳ, ದೇವರಾಜ ಅರಸು ವಿವಿಧೋದ್ದೇಶ ಕ್ರೀಡಾಂಗಣದಲ್ಲಿ ದಸರಾ ಕುಸ್ತಿ, ಕಾವಾ ಕಾಲೇಜಿನಲ್ಲಿ ಚಿತ್ರಕಲಾ ಶಿಬಿರ, ಸ್ಕೌಟ್ಸ್ ಅಂಡ್ ಗೈಡ್ಸ್ ಮೈದಾನದಲ್ಲಿ ಪುಸ್ತಕ ಮೇಳ, ಚಾಮುಂಡಿವಿಹಾರ ಕ್ರೀಡಾಂಗಣದಲ್ಲಿ ದಸರಾ ಸಿಎಂ ಕಪ್ ಕ್ರೀಡಾಕೂಟ, ಜೆ.ಕೆ.ಮೈದಾನದಲ್ಲಿ ಯೋಗ ದಸರಾ, ನ್ಯೂ ಸಯ್ಯಾಜಿರಾವ್ ರಸ್ತೆಯಲ್ಲಿರುವ ಹಸಿರು ಚಪ್ಪರದಲ್ಲಿ ದಸರಾ ವಿದ್ಯುತ್ ದೀಪಾಲಂಕಾರ, ಕರ್ನಾಟಕ ವಸ್ತು ಪ್ರದರ್ಶನದ ಪ್ರಾಧಿಕಾರದ ಆವರಣದಲ್ಲಿ ವಸ್ತುಪ್ರದರ್ಶನ ಹಾಗೂ ಅರಮನೆ ಆವರಣದ ವೇದಿಕೆಯಲ್ಲಿ ದಸರಾ ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ರಾಜ್ಯ ಸಂಗೀತ ವಿದ್ವಾನ್ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಿತು.

**ಬಿಗಿ ಪೊಲೀಸ್ ಭದ್ರತೆ:**

ದಸರಾ ಉದ್ಘಾಟಕಿಯಾಗಿ ಬೂಕರ್ ಪ್ರಶಸ್ತಿ ವಿಜೇತ ಬಾನು ಮುಷ್ತಾಕ್ ಆಯ್ಕೆ ವಿವಾದಕ್ಕೆ ಎಡೆ ಮಾಡಿಕೊಟ್ಟಿತ್ತು. ಅವರು ಕನ್ನಡಾಂಬೆ ಕುರಿತು ನೀಡಿದ್ದ ಹೇಳಿಕೆಗೆ ವ್ಯಾಪಕ ಆಕ್ರೋಶ ವ್ಯಕ್ತವಾಗಿತ್ತು. ಪ್ರತಿಪಕ್ಷಗಳು ಸೇರಿದಂತೆ, ಸಾರ್ವಜನಿಕರು ಅವರ ಆಯ್ಕೆಯನ್ನು ವಿರೋಧಿಸಿದ್ದರಲ್ಲದೆ ನ್ಯಾಯಾಲಯದ ಮೆಟ್ಟಿಲೇರಿದ್ದರು. ಆದರೆ, ನ್ಯಾಯಾಲಯ ಅರ್ಜಿ ವಜಾ ಮಾಡಿ ಅವರ ಆಯ್ಕೆಯನ್ನು ಸಮರ್ಥಿಸಿದ್ದರೂ ವಿರೋಧ ಮುಂದುವರಿದಿದೆ. ಹೀಗಾಗಿ ದಸರಾ ಉದ್ಘಾಟನಾ ಕಾರ್ಯಕ್ರಮದ ವೇಳೆ ಸಾರ್ವಜನಿಕರು ಅನಿರೀಕ್ಷಿತವಾಗಿ ಪ್ರತಿಭಟನೆ, ಗಲಾಟೆ ಮಾಡುವ ನಿರೀಕ್ಷೆಯಲ್ಲಿ ಬಿಗಿ ಪೊಲೀಸ್ ಭದ್ರತೆ ಮಾಡಿಕೊಳ್ಳಲಾಗಿದೆ. ಬೆಟ್ಟದ ಎಲ್ಲಾ ದ್ವಾರಗಳಲ್ಲೂ ಪೊಲೀಸರನ್ನು ನಿಯೋಜಿಸಿದ್ದು, ಯಾವುದೇ ಅಹಿತಕರ ಘಟನೆ ನಡೆಯದಂತೆ ಮುನ್ನೆಚ್ಚರಿಕೆ ವಹಿಸಲಾಗಿದೆ.

## ಶ್ರೀ ಶಾರದಾಂಬ ದೇವಸ್ಥಾನದಲ್ಲಿ ಶರನ್ನವರಾತ್ರಿ ಉತ್ಸವ

**ದಾವಣಗೆರೆ:** ದಾವಣಗೆರೆ: ನಗರದ ನಿಜಲಿಂಗಪ್ಪ ಬಡಾವಣೆಯಲ್ಲಿರುವ ಶ್ರೀ ಗಣಪತಿ ಶ್ರೀ ಶಾರದಾಂಬ ಶ್ರೀ ಚಂದ್ರಮೌಳೇಶ್ವರ ಮತ್ತು ಶ್ರೀ ಶಂಕರಾಚಾರ್ಯರ ದೇವಸ್ಥಾನದಲ್ಲಿ ಸೋಮವಾರದಿಂದ ಅ.3ರವರೆಗೆ ಶರನ್ನವರಾತ್ರಿ ಮಹೋತ್ಸವವನ್ನು ಆಯೋಜಿಸಲಾಗಿದೆ.

ಪ್ರತಿದಿನ ಬೆಳಗ್ಗೆ 7.30 ರಿಂದ ದೇವಸ್ಥಾನದ ಸನ್ನಿಧಿಯಲ್ಲಿ ರುದ್ರಾಭಿಷೇಕ, ಶ್ರೀ ಶಾರದಾಂಬ ಸನ್ನಿಧಿಯಲ್ಲಿ ಶ್ರೀಚಕ್ರ ಪೂಜೆ ಮತ್ತು ಸಹಸ್ರನಾಮರ್ಚನೆ ಜರುಗಲಿದೆ.

ಶ್ರೀದೇವಿಗೆ ಪ್ರತಿದಿನ ವಿವಿಧ ಅಲಂಕಾರಗಳಲ್ಲಿ ಪೂಜಿಸಲಾಗುತ್ತದೆ ಮತ್ತು ಸಂಜೆ 6ರಿಂದ ಉಪನ್ಯಾಸ ಕಾರ್ಯಕ್ರಮವು ನಡೆಯಲಿದೆ. ಅ.1ರಂದು ಮಹಾನವಮಿ ಆಯುಧ ಪೂಜೆ ಹಾಗೂ ಅ.2ರಂದು ವಿಜಯದಶಮಿ ಕಾರ್ಯಕ್ರಮ ಇರಲಿದೆ. ಅ.3 ರಂದು ಶುಕ್ರವಾರ ಏಕಾದಶಿಯಂದು ಹಗಲು ಪೂಜೆಯೊಂದಿಗೆ ಶರನ್ನವರಾತ್ರಿ ಕಾರ್ಯಕ್ರಮ ಸಂಪನ್ನಗೊಳ್ಳಲಿದೆ.

## ಜಾತಿ, ಉಪಜಾತಿ ಕಾಲಂನಲ್ಲಿ ಮಡಿವಾಳ ಎಂದು ಬರೆಸಿ: ಯರಬಳ್ಳಿ ಉಮಾಪತಿ

ದಾವಣಗೆರೆ: ರಾಜ್ಯ ಸರ್ಕಾರದ ಹಿಂದುಳಿದ ವರ್ಗಗಳ ಆಯೋಗವು ಸೋಮವಾರದಿಂದ ಆರಂಭಿಸಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಲ್ಲಿ ಮಡಿವಾಳ ಸಮಾಜದವರು ಜಾತಿ ಮತ್ತು ಉಪಜಾತಿ ಉಭಯ ಕಾಲಂ ಗಳಲ್ಲೂ ಮಡಿವಾಳ ಎಂದು ಬರೆಸಬೇಕೆಂದು ದಾವಣಗೆರೆ ಜಿಲ್ಲಾ ಮಡಿವಾಳರ ಸಂಘದ ಅಧ್ಯಕ್ಷ ಯರಬಳ್ಳಿ ಉಮಾಪತಿ ತಿಳಿಸಿದ್ದಾರೆ.

ಸರ್ಕಾರದಿಂದ ನೀಡಲಾಗುವ ಶೈಕ್ಷಣಿಕ, ಆರ್ಥಿಕ, ಔದ್ಯೋಗಿಕ, ಇತ್ಯಾದಿಗಳಲ್ಲಿ ಮೀಸಲಾತಿ ಸೌಲಭ್ಯಗಳು ಪಡೆಯಲು ಸಮಾಜದವರು ಕಡ್ಡಾಯವಾಗಿ ಜಾತಿ ಮತ್ತು ಉಪಜಾತಿ ಕಾಲಂ ಗಳಲ್ಲಿ ಮಡಿವಾಳ ಎಂದು ಮಾತ್ರ ನಮೂದಿಸಿ, ಇನ್ನಿತರ ಯಾವುದೇ ಪರ್ಯಾಯ ಜಾತಿಗಳನ್ನು ಬರೆಸಬಾರದು ಎಂದು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

## ಎಸ್ ಎಸ್ ಮಲ್ಲಿಕಾರ್ಜುನ್ ಹುಟ್ಟುಹಬ್ಬದ ಪ್ರಯುಕ್ತ ಅನ್ನಸಂತರ್ಪಣೆ

**ದಾವಣಗೆರೆ:** ಜಿಲ್ಲಾ ಉಸ್ತುವ ಎಸ್ ಎಸ್ ಮಲ್ಲಿಕಾರ್ಜುನ ಅವರ 58 ನೇ ಹುಟ್ಟುಹಬ್ಬದ ಪ್ರಯುಕ್ತ ನಗರದ ರಾಮ್ ಅಂಡ್ ಕೋ ವೃತ್ತದಲ್ಲಿರುವ ವರಸಿದ್ಧಿ ವಿನಾಯಕ ದೇವಸ್ಥಾನದಲ್ಲಿ ರಾಂ & ಕೋ ಗೆಳೆಯರ ಬಳಗದಿಂದ ವಿಶೇಷ ಕುಂಕುಮಾಭಿಷೇಕ, ಪೂಜೆ ನೆರವೇರಿಸಲಾಯಿತು.

ಪೂಜೆಯ ನಂತರ ಸಾರ್ವಜನಿಕ ಅನ್ನ ಸಂತರ್ಪಣೆ ಕಾರ್ಯಕ್ರಮಕ್ಕೆ ಯುವ ಉದ್ಯಮಿ ಶ್ರೀನಿವಾಸ ಶಿವಗಂಗಾ ಚಾಲನೆ ನೀಡಿ, ಮಾತನಾಡಿ, ಯುವಜನರ ಅಚ್ಚುಮೆಚ್ಚಿನ ನಾಯಕ ನಮ್ಮ ಮಲ್ಲಣ್ಣನವರಿಗೆ ಆಯುಷ್ಯ, ಆರೋಗ್ಯ ಮತ್ತು ಇನ್ನೂ ಹೆಚ್ಚಿನ ರಾಜಕೀಯ ಸ್ಥಾನಮಾನ ದೊರಕಲಿ ಎಂದು ಆಶಿಸಿದರು,

ಕಾರ್ಯಕ್ರಮದಲ್ಲಿ ಬಳಗದ ಅಧ್ಯಕ್ಷರಾದ ನಾಗೇಂದ್ರ ರೆಡ್ಡಿ, ಅಖಿಲ ಭಾರತ ವೀರಶೈವ ಮಹಾಸಭಾ ದಾವಣಗೆರೆ ತಾಲ್ಲೂಕು ಘಟಕ ಅಧ್ಯಕ್ಷ ಶಂಭು ಎಸ್ ಉರೇಕೊಂಡಿ, ಯುವ ಘಟಕ ಅಧ್ಯಕ್ಷರಾದ ಅಜಿತ್ ಆಲೂರು, ಗುತ್ತಿಗೆದಾರರಾದ ಸುಭಾಶ್ಚಂದ್ರ, ಅಭಿಷೇಕ್ ಬೇತೂರು, ಸಂದೀಪ್ ಅಣಬೇರು, ಶಿವಕುಮಾರ್ ಐಗೂರು, ರವಿ ಗಾಂಧಿ, ರಾಜು ಬಂಡಾರಿ, ಸಿದ್ದಲಿಂಗೇಶ್, ಸುನಿಲ್ ಬಾಗೇವಾಡಿ, ಚಿರಂತ್ ವೈ ಎಸ್, ಮಂಜುನಾಥ್ ದೊಡ್ಡಮನಿ, ರಾಘವೇಂದ್ರ ಗೌಡ, ಕುಮಾರ್ ಶಾಮನೂರು, ವಜ್ರಸ್ವಾಮಿ ಇನ್ನಿತರರು ಹಾಜರಿದ್ದರು.

## ಉಪ್ಪಾರ ಎಂದು ಬರೆಸಿ

**ದಾವಣಗೆರೆ:** ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಸೋಮವಾರದಿಂದ ನಡೆಸುತ್ತಿರುವ ಶೈಕ್ಷಣಿಕ ಮತ್ತು ಸಾಮಾಜಿಕ ಸಮೀಕ್ಷೆಯಲ್ಲಿ ಉಪ್ಪಾರ ಸಮಾಜದವರು ಜಾತಿ ಮತ್ತು ಉಪಜಾತಿ ಕಾಲಂಗಳಲ್ಲಿಉಪ್ಪಾರ ಎಂದು ನಮೂದಿಸುವಂತೆ ದಾವಣಗೆರೆ ತಾಲೂಕು ಉಪ್ಪಾರ ಸಂಘದ ಪ್ರಧಾನ ಕಾರ್ಯದರ್ಶಿ ಎಂ. ಎನ್ ಮಂಜುನಾಥ ಮತ್ತು ಖಜಾಂಚಿ ಜಿ.ಹೆಚ್. ಮಹಾಂತೇಶ್ ಕೋರಿದ್ದಾರೆ

## ಬೌದ್ಧ ಧರ್ಮ ಎಂದು ಬರೆಸಿ

ದಾವಣಗೆರೆ ರಾಜ್ಯ ಸರ್ಕಾರದ ಹಿಂದುಳಿದ ವರ್ಗದ ಆಯೋಗದಿಂದ ನಡೆಸುತ್ತಿರುವ ಸಾಮಾಜಿಕ ಶೈಕ್ಷಣಿಕ ಸಮೀಕ್ಷೆಯಲ್ಲಿ ಬುದ್ಧನ ಅನುಯಾಯಿಗಳು ಮತ್ತು ಬಾಬಾ ಸಾಹೇಬ್ ಡಾ. ಬಿ.ಆರ್ ಅಂಬೇಡ್ಕರ್ ಅವರ ಅಭಿಮಾನಿಗಳು ಧರ್ಮದ ಕಾಲಂನಲ್ಲಿ ತಮ್ಮದು ಬೌದ್ಧ ಧರ್ಮ ಎಂದು ಘೋಷಿಸುವಂತೆ ಭಾರತೀಯ ಬೌದ್ಧ ಧರ್ಮ ಸಮಿತಿ ಸದಸ್ಯ ಡಿ.ತಿಪ್ಪಣ್ಣ ಕತ್ತಲಗೆರೆ ಕರೆ ನೀಡಿದ್ದಾರೆ.

# ನಾಗರೀಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಸಮೀಕ್ಷೆ ಆರಂಭ, ಗಣತಿದಾರರಿಗೆ ಮಾಹಿತಿ ಸಹಕರಿಸಿ : ಜಿಲ್ಲಾಧಿಕಾರಿ

**ದಾವಣಗೆರೆ:** ಸೆಪ್ಟೆಂಬರ್ 22 ರಿಂದ ಅಕ್ಟೋಬರ್ 7ವರೆಗೆ ನಾಗರೀಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಸಮೀಕ್ಷೆ ಕಾರ್ಯವನ್ನು ಕೈಗೊಂಡಿದ್ದು, ಗಣತಿದಾರರು ಮನೆಗೆ ಬಂದಾಗ ನಾಗರೀಕರು ಸಹಕರಿಸುವಂತೆ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಅವರು ಮನವಿ ಮಾಡಿದರು.

ಅವರು ಇಂದು ನಗರದ ಎಸ್.ಎಸ್. ಬಡಾವಣೆ ಬಿ ಬ್ಲಾಕ್‌ನಲ್ಲಿನ 12 ನೇ ಕ್ರಾಸ್ ಒಳಾಂಗಣ ಕ್ರೀಡಾಂಗಣದ ಮುಂಭಾಗದ ಮನೆಯಲ್ಲಿ ನಾಗರೀಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಸಮೀಕ್ಷೆ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದರು.

ಜಿಲ್ಲೆಯಲ್ಲಿ ಸುಮಾರು 4462 ಬ್ಲಾಕ್ಸ್‌ಗಳಿದ್ದು, ಅಗತ್ಯತೆಗಳಿಗೆ ಅನುಗುಣವಾಗಿ ಗಣತಿದಾರರನ್ನು ನೇಮಕ ಮಾಡಿಕೊಳ್ಳಲಾಗಿದೆ. ಸಿಬ್ಬಂದಿಗಳಿಗೆ ಸೂಕ್ತ ತರಬೇತಿಯನ್ನು ನೀಡಲಾಗಿದೆ. ಸಮೀಕ್ಷೆಗಾಗಿ ಹಿಂದುಳಿದ ವರ್ಗದ ಆಯೋಗದಿಂದ ಆಪ್ ಸಹ ಅಭಿವೃದ್ಧಿಪಡಿಸಲಾಗಿದೆ. ಇದರಿಂದ



ಜನರಿಗೆ ಸುಲಭವಾಗಿ ಸಮೀಕ್ಷೆಗೆ ಸಹಕರಿಸಲು ಸಾಧ್ಯವಾಗುತ್ತದೆ. ಸಮೀಕ್ಷೆಗೆ ಸಂಬಂಧಿಸಿದಂತೆ ಸಾರ್ವಜನಿಕರಿಗೆ ಯಾವುದೇ ರೀತಿಯ ಗೊಂದಲ ಅಥವಾ ಸಮಸ್ಯೆ ಇದ್ದಲ್ಲಿ ನೋಡೆಲ್ ಅಧಿಕಾರಿಗಳಾದ ಉಪ ವಿಭಾಗಾಧಿಕಾರಿ, ತಹಶೀಲ್ದಾರ್, ಮಹಾನಗರ ಪಾಲಿಕೆ ಆಯುಕ್ತರು ಮತ್ತು ಕಾರ್ಯ ನಿರ್ವಾಹಕ ಅಧಿಕಾರಿಗಳ ಬಳಿ ಪರಿಹರಿಸಿಕೊಳ್ಳುವಂತೆ ತಿಳಿಸಿದರು.

ಗಣತಿದಾರರು ಮನೆ ಬಳಿ ಬಂದಾಗ ಸಾಕು ನಾಯಿಗಳನ್ನು ಸುರಕ್ಷಿತವಾಗಿಟ್ಟುಕೊಂಡು ಸಮೀಕ್ಷೆಗೆ ಸಹಕರಿಸಬೇಕು, 150 ಕುಟುಂಬಗಳಿಗೆ ಒಬ್ಬ ಗಣತಿದಾರರು ಮತ್ತು 20 ಗಣತಿದಾರರಿಗೆ ಒಬ್ಬ ಮೇಲ್ವಿಚಾರಕರುಗಳನ್ನು ನೇಮಕ ಮಾಡಲಾಗಿದೆ. ಗಣತಿದಾರರು ಪ್ರತಿದಿನ 15 ರಿಂದ 20 ಮನೆಗಳ ಸಮೀಕ್ಷಾ ಕಾರ್ಯವನ್ನು ಕೈಗೊಳ್ಳಲಿದ್ದು ಪ್ರತಿ ಮನೆಯ ಗಣತಿ 30 ರಿಂದ 40 ನಿಮಿಷಗಳ ಅವಧಿ ತೆಗೆದುಕೊಳ್ಳಲಿದೆ. ಜಿಲ್ಲೆಯಲ್ಲಿ ನಿಗದಿತ ಅವಧಿಗಿಂತ ಮೊದಲೇ ಸಮೀಕ್ಷಾ ವರದಿಯನ್ನು ನೀಡಲು ಗುರಿ ಹೊಂದಲಾಗಿದೆ ಎಂದು ತಿಳಿಸಿದರು.

ಸಮೀಕ್ಷಾ ಕಾರ್ಯ ಆರಂಭವಾಗುವುದಿಂದ ಈಗಾಗಲೇ ಕುಟುಂಬಗಳ ಸಂಖ್ಯೆ ಹಾಗೂ ಬೆಸ್ಕಾಂ ಇಲಾಖೆ ಸಹಯೋಗದೊಂದಿಗೆ ಆರ್.ಆರ್. ಸಂಖ್ಯೆಗೆ ಅನುಗುಣವಾಗಿ ಚನ್ನಗಿರಿಯಲ್ಲಿ 86,897 ಕುಟುಂಬಗಳು, ದಾವಣಗೆರೆ 2,34,481, ಹರಿಹರದಲ್ಲಿ 69,053 ಜಗಳೂರು 40,192, ಹೊನ್ನಾಳಿ 39,024 ಮತ್ತು ನ್ಯಾಮತಿಯಲ್ಲಿ 22,334 ಸೇರಿದಂತೆ ಒಟ್ಟು 4,91,981 ಆರ್.ಆರ್ ಕುಟುಂಬಗಳಿಗೆ ಜಿಯೋಟ್ಯಾಗ್ ಕಾರ್ಯ ಪೂರ್ಣಗೊಳಿಸಲಾಗಿದೆ ಎಂದರು.

**ಸಮೀಕ್ಷೆಗೆ ಮೊಬೈಲ್ ಆಪ್ :**

ಈ ಸಮೀಕ್ಷೆನ್ನು ಭೌತಿಕವಾಗಿ ಆಪ್‌ಲೈನ್ ಮತ್ತು ಆನ್ಲೈನ್ ಮೂಲಕ ನಡೆಸಲು ಮೊಬೈಲ್ ಆಪ್ ಕೂಡ ಸಿದ್ಧಪಡಿಸಲಾಗಿದೆ. ತುಂಬಾ ಸುಲಭವಾಗಿದ್ದು, ಮೊಬೈಲ್ ಆಪ್‌ನಲ್ಲಿಯೇ ಮಾಹಿತಿಯನ್ನು ಸಲ್ಲಿಸಬಹುದು. ಸರ್ವೇ ಮಾಡುವ ಸಂದರ್ಭದಲ್ಲಿ ಏನಾದರೂ ತಾಂತ್ರಿಕ ದೋಷ ಅಥವಾ ಸಮಸ್ಯೆಗಳು ಉಂಟಾದಲ್ಲಿ ಸ್ಥಳದಲ್ಲಿಯೇ ಪರಿಹರಿಸಲಾಗುವುದು.

ಈ ವೇಳೆ ಉಪ ವಿಭಾಗಾಧಿಕಾರಿ ಸಂತೋಷ್ ಪಾಟೀಲ್, ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕ ಮಹಾಂತೇಶ್, ಪಾಲಿಕೆ ಆಯುಕ್ತೆ ರೇಣುಕಾ ಮತ್ತು ಡಿಡಿಪಿಐ ಕೊಟ್ರೇಶ್, ಹಿಂದುಳಿದ ವರ್ಗಗಳ ಅಧಿಕಾರಿ ರೇಣುಕಾದೇವಿ, ಬಿಇಓ ಉತ್ತರ ವಿಶಾಲಾಕ್ಷಿ, ಗಣತಿ ಸಿಬ್ಬಂದಿ ಭಾಗ್ಯಲಕ್ಷ್ಮಿ ಕೆ.ಆರ್. ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ವಿಕಲಚೇತನ ಹಾಗೂ ಹಿರಿಯ ನಾಗರಿಕರು ಸರ್ಕಾರದ ಸೌಲಭ್ಯ ಸದುಪಯೋಗ ಪಡಿಸಿಕೊಳ್ಳಿ: ಸಂಸದೆ ಪ್ರಭಾ ಮಲ್ಲಿಕಾರ್ಜುನ

**ದಾವಣಗೆರೆ :** ವಿಕಲಚೇತನರು ಹಾಗೂ ಹಿರಿಯ ನಾಗರಿಕರು ಸರ್ಕಾರದ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳುವಂತೆ ಲೋಕಸಭಾ ಸದಸ್ಯರಾದ ಡಾ; ಪ್ರಭಾ ಮಲ್ಲಿಕಾರ್ಜುನ ಅವರು ತಿಳಿಸಿದರು.

ಅವರು ಇಂದು ಸದ್ಯೋಜಾತ ಮಠದಲ್ಲಿ ವಿಕಲಚೇತರು ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಅಲಿಂಕೋ ಸಂಸ್ಥೆ ಹಾಗೂ ಎಸ್.ಎಸ್ ಕೇರ್ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ವಿಕಲಚೇತನರು ಹಾಗೂ ಹಿರಿಯ ನಾಗರಿಕರುಗಳಿಗೆ ಸಾಧನಾ ಸಲಕರಣೆಗಳ ವಿತರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಹಿರಿಯ ನಾಗರಿಕರು ಹಾಗೂ ವಿಕಲಚೇತನರಿಗೆ ಅವಶ್ಯವಿರುವ ಊರುಗೋಲು, ಶ್ರವಣ ಸಾಧನ, ದೃಷ್ಠಿದೋಷವುಳ್ಳವರಿಗೆ ಮೊಬೈಲ್ ಪೋನ್, ತ್ರಿಚಕ್ರ ಸೈಕಲ್, ಬ್ಲೈಂಡ್ ಸ್ಟಿಕ್ ಮತ್ತು ವ್ಹೀಲ್ ಚೇರ್ ಗಳನ್ನು ವಿತರಿಸುವ ಸಲುವಾಗಿ ಸೆಪ್ಟೆಂಬರ್



10 ರಂದು ಪಲಾನುಭವಿಗಳನ್ನು ಆಯ್ಕೆ ಮಾಡಲು ಶಿಬಿರವನ್ನು ಅಯೋಜಿಸಲಾಗಿತ್ತು. ಶಿಬಿರದಲ್ಲಿ ಭಾಗವಹಿಸಿದ್ದ ವಿಕಲಚೇತನರು ಹಾಗೂ ಹಿರಿಯ ನಾಗರಿಕರನ್ನು ಇಲಾಖೆಯ ವೈದ್ಯರು ಪರಿಶೀಲಿಸಿ ಅರ್ಹ 232 ವಿಕಲಚೇತನರು ಇವರಿಗೆ 19.87 ಲಕ್ಷ ರೂ.ಗಳ ವೆಚ್ಚದಲ್ಲಿ ಹಾಗೂ 101 ಹಿರಿಯ ನಾಗರಿಕರು ಇವರಿಗೆ 8.95 ಲಕ್ಷಗಳ ವೆಚ್ಚದಲ್ಲಿ ಒಟ್ಟು 343 ಫಲಾನುಭವಿಗಳಿಗೆ 28.82 ಲಕ್ಷಗಳ ವೆಚ್ಚದಲ್ಲಿ ಸಾಧನ ಮತ್ತು ಸಲಕರಣೆಗಳನ್ನು ಇಂದು ವಿತರಿಸಲಾಗುತ್ತಿದೆ ಎಂದು ಹೇಳಿದರು.

ಈಗಾಗಲೇ ದಾವಣಗೆರೆ ಉತ್ತರ ಮತ್ತು ದಕ್ಷಿಣ ಕ್ಷೇತ್ರ ಮತ್ತು ಮಾಯಕೊಂಡ ಕ್ಷೇತ್ರದಲ್ಲಿ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ಉಳಿದ ವಿಧಾನಸಭಾ ಕ್ಷೇತ್ರಗಳಲ್ಲಿ ಶಿಬಿರಗಳನ್ನು ಆಯೋಜಿಸಿ ಅರ್ಹ ಹಿರಿಯ ನಾಗರಿಕರು ಹಾಗೂ ವಿಕಲಚೇತನರನ್ನು ಆಯ್ಕೆ ಮಾಡಲಾಗುವುದು, ಜಿಲ್ಲೆಯಲ್ಲಿ ಇನ್ನು ಮುಂದೆ ಪ್ರತಿ ವರ್ಷ ಜನವರಿ ಹಾಗೂ ಡಿಸೆಂಬರ್ ಮಾಹೆಗಳಲ್ಲಿ ಕ್ಯಾಂಪನ್ನು ಆಯೋಜಿಸಿ ಅರ್ಹರಿಗೆ ಸಾಧನ ಮತ್ತು ಸಲಕರಣೆಗಳನ್ನು ವಿತರಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಕಲ್ಯಾಣ ಅಧಿಕಾರಿ ಪ್ರಕಾಶ್ ಹಾಗೂ ಇತರರು ಉಪಸ್ಥಿತರಿದ್ದರು.

## ಉಪಲೋಕಾಯುಕ್ತರಿಂದ ಬಾಕಿ ಪ್ರಕರಣಗಳ ವಿಚಾರಣೆ

**ಚಿಕ್ಕಮಗಳೂರು, ಸೆ.22:** ಜಿಲ್ಲೆಗೆ ಸಂಬಂಧಿಸಿದಂತೆ ಲೋಕಾಯುಕ್ತ ಸಂಸ್ಥೆಯಲ್ಲಿ ದಾಖಲಾಗಿರುವ (ಉಪ ಲೋಕಾಯುಕ್ತರ ಕಾರ್ಯ ವ್ಯಾಪ್ತಿಗೆ ಒಳಪಡುವಂತಹವು) ಪ್ರಕರಣಗಳಲ್ಲಿ ತನಿಖೆ, ವಿಚಾರಣೆಗೆ ಬಾಕಿ ಇರುವವುಗಳನ್ನು ದೂರುದಾರರು ಹಾಗೂ ಎದುರುದಾರರ ಸಮ್ಮುಖದಲ್ಲಿ ಜಿ.ಪಂ.ನ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಸೆಪ್ಟಂಬರ್ 25 ರಂದು ಗೌರವಾನ್ವಿತ ನ್ಯಾಯಮೂರ್ತಿ ಉಪಲೋಕಾಯುಕ್ತರಾದ ಶ್ರೀ ಕೆ.ಎನ್.ಫಣೀಂದ್ರ ಅವರು ಕಾನೂನು ರೀತಿಯಲ್ಲಿ ವಿಚಾರಣೆ ನಡೆಸಲಿದ್ದಾರೆ.ಸೆಪ್ಟಂಬರ್ 24 ರಿಂದ 26ರವರೆಗೆ ಜಿಲ್ಲೆಯಲ್ಲಿ ಗೌರವಾನ್ವಿತ ಉಪಲೋಕಾಯುಕ್ತರು ಪ್ರವಾಸ ಕೈಗೊಂಡಿರುವ ಸಂದರ್ಭ 24 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.30 ರವರೆಗೆ ಹಾಗೂ ಮಧ್ಯಾಹ್ನ 2.30 ರಿಂದ ಸಂಜೆ 5 ಗಂಟೆಯವರೆಗೆ ಕುವೆಂಪು ಕಲಾಮಂದಿರದಲ್ಲಿ ಸಾರ್ವಜನಿಕ ಕುಂದುಕೊರತೆಗಳ ಅಹವಾಲು ಸ್ವೀಕಾರ ಹಾಗೂ ವಿಚಾರಣೆಯನ್ನು ಹಮ್ಮಿಕೊಳ್ಳಲಾಗಿದೆ

# ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಅವರು ತಮ್ಮ ವಿಶಿಷ್ಠ ನಾಯಕತ್ವ ಗುಣಗಳಿಂದ ರಾಜ್ಯದ ಮನೆ ಮಾತಾಗಿದ್ದಾರೆ : ಎಚ್.ಬಿ. ಮಂಜಪ್ಪ



**ಹೊನ್ನಾಳಿ :** ದಾವಣಗೆರೆ ಜಿಲ್ಲೆಯ ಸಮಗ್ರ ಅಭಿವೃದ್ಧಿಯ ಹರಿಕಾರರಾದ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಅವರು ತಮ್ಮ ವಿಶಿಷ್ಠ ನಾಯಕತ್ವ ಗುಣಗಳಿಂದ ರಾಜ್ಯದ ಮನೆ ಮಾತಾಗಿದ್ದಾರೆ ಎಂದು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಚ್.ಬಿ. ಮಂಜಪ್ಪ ಹೇಳಿದರು.

ಸೋಮವಾರ ಎಸ್.ಎಸ್. ಮಲ್ಲಿಕಾರ್ಜುನ್ ಹುಟ್ಟು ಹಬ್ಬದ ಅಂಗವಾಗಿ ಪಟ್ಟಣದ ಅಂಧರ ಸಂತೃಪ್ತಿ ಕೇಂದ್ರಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಅವರ ಕುಂದು ಕೊರತೆಗಳನ್ನು ಆಲಿಸಿ ಅವರಿಗೆ ಉಪಹಾರದ ವ್ಯವಸ್ಥೆ ಮಾಡಿದ ಬಳಿಕ ಪಟ್ಟಣದ ಸಾರ್ವಜನಿಕ ಆಸ್ಪತ್ರೆಯ ಒಳ ಹಾಗೂ ಹೊರ ರೋಗಿಗಳಿಗೆ ಹಣ್ಣು, ಹಂಪಲು, ಬ್ರೆಡ್‌ಗಳನ್ನು ವಿತರಿಸಿದ ಸಂದರ್ಭದಲ್ಲಿ ಅವರು ಮಾತನಾಡಿದರು.

ಎಸ್.ಎಸ್. ಮಲ್ಲಿಕಾರ್ಜುನ್ ಅವರು ತಮ್ಮ ತಂದೆ ಶಾಮನೂರು ಶಿವಶಂಕರಪ್ಪ ಅವರ ಹಾದಿಯಲ್ಲಿ ಸಾಗುತ್ತಿದ್ದು, ಜಿಲ್ಲೆಯಲ್ಲಿ ಅನೇಕ ಶಿಕ್ಷಣ ಸಂಸ್ಥೆಗಳನ್ನು ಆಸ್ಪತ್ರೆಗಳನ್ನು ಸ್ಥಾಪಿಸುವ ಮೂಲಕ ತಮ್ಮ ಸೇವಾ ನೆಲೆಯನ್ನು ವಿಸ್ತರಿಸಿದ್ದಾರೆ ಎಂದರು. ಬಡ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡುವ ಮೂಲಕ ಅವರ ಶಿಕ್ಷಣಕ್ಕೆ ಪ್ರೋತ್ಸಾಹ ನೀಡಿದ ಹಿರಿಮೆ ಅವರಿಗೆ ಸಲ್ಲುತ್ತಿದೆ ಎಂದರು. ಅನೇಕ ಕೈಗಾರಿಕೆಗಳನ್ನು ಸ್ಥಾಪಿಸುವ ಮೂಲಕ ಸಾವಿರಾರು ಜನರಿಗೆ ಉದ್ಯೋಗ ನೀಡಿದ ಕೀರ್ತಿ ಅವರ ಕುಟುಂಬಕ್ಕೆ ಸಲ್ಲುತ್ತದೆ ಎಂದರು. ಆದ್ದರಿಂದ ನಾವೆಲ್ಲರೂ ಎಸ್.ಎಸ್. ಮಲ್ಲಿಕಾರ್ಜುನ್ ಅವರಿಗೆ ಇನ್ನಷ್ಟು ಬಲ ತುಂಬುವ ಮೂಲಕ ಅವರ ಬೆನ್ನಿಗೆ ನಿಲ್ಲಬೇಕಾಗಿದೆ ಎಂದರು.

ಡಾ. ಪ್ರಭಾ ಮಲ್ಲಿಕಾರ್ಜುನ್ ಕೂಡ ದಾವಣಗೆರೆ ಸಂಸದರಾಗಿ ಅನೇಕ ಜನಕಲ್ಯಾಣ ಕೆಲಸದಲ್ಲಿ ತೊಡಗಿಸಿಕೊಂಡಿದ್ದಾರೆ. ಅವರ ಜನಪರ ಕಾಳಜಿಯಿಂದಾಗಿ ಅಲ್ಪ ಅವಧಿಯಲ್ಲಿಯೇ ಅವರು ಕ್ಷೇತ್ರದ ಜನಮನ ಗೆದ್ದಿದ್ದಾರೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಹೊನ್ನಾಳಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಣ್ಣಕ್ಕಿ ಬಸವನಗೌಡ, ಸಾಸ್ವೆಹಳ್ಳಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಆರ್. ನಾಗಪ್ಪ, ಪುರಸಭೆ ಸದಸ್ಯ ಧರ್ಮಪ್ಪ, ಮುಖಂಡ ಮಧುಗೌಡ, ಎ.ಜಿ.ಪ್ರಕಾಶ್, ಎಚ್.ಬಿ.ಅಣ್ಣಪ್ಪ, ವಿಜೇಂದ್ರಪ್ಪ, ರೇವಣಸಿದ್ದಪ್ಪ ಮೂಲಿ, ವಸಂತನಾಯ್ಕ, ಮಾಜಿ ಸೈನಿಕ ಎಂ. ವಾಸಪ್ಪ, ತಾ ಯುವ ಕಾಂಗ್ರೆಸ್ ಅಧ್ಯಕ್ಷ ಮನುವಾಲಜ್ಜಿ ಸೇರಿದಂತೆ ನೂರಾರು ಜನ ಪಕ್ಷದ ಕಾರ್ಯಕರ್ತರು ಭಾಗಿಯಾಗಿದ್ದರು.

## ಹುಬ್ಬಳ್ಳಿ–ಕೊಲ್ಲಂ ನಡುವೆ ವಿಶೇಷ ರೈಲು

ದಸರಾ ಹಬ್ಬ ಮತ್ತು ಶಬರಿಮಲೆ ಯಾತ್ರೆಯ ಪ್ರಯುಕ್ತ ಪ್ರಯಾಣಿಕರ ಹೆಚ್ಚುವರಿ ದಟ್ಟಣೆಯನ್ನು ನಿವಾರಿಸಲು, ನೈಋತ್ಯ ರೈಲ್ವೆಯು ಹುಬ್ಬಳ್ಳಿ ಮತ್ತು ಕೊಲ್ಲಂ ನಡುವೆ 14 ಟ್ರಿಪ್ ವಿಶೇಷ ಎಕ್ಸ್ ಪ್ರೆಸ್ ರೈಲನ್ನು ಓಡಿಸಲಿದೆ.

ರೈಲು ಸಂಖ್ಯೆ 07313 ಎಸ್‌ಎಸ್‌ಎಸ್ ಹುಬ್ಬಳ್ಳಿ – ಕೊಲ್ಲಂ ವಿಶೇಷ ಎಕ್ಸ್‌ಪ್ರೆಸ್ ರೈಲು ಸೆಪ್ಟೆಂಬರ್ 28, 2025 ರಿಂದ ಡಿಸೆಂಬರ್ 28, 2025 ರವರೆಗೆ ಪ್ರತಿ ಭಾನುವಾರ ಸಂಜೆ 3:15ಕ್ಕೆ ಹುಬ್ಬಳ್ಳಿಯಿಂದ ಹೊರಟು, ಮರುದಿನ ಮಧ್ಯಾಹ್ನ 12:55 ಕ್ಕೆ ಕೊಲ್ಲಂ ತಲುಪಲಿದೆ. ವಾಪಸು, ರೈಲು ಸಂಖ್ಯೆ 07314 ಕೊಲ್ಲಂ – ಎಸ್‌ಎಸ್‌ಎಸ್ ಹುಬ್ಬಳ್ಳಿ ವಿಶೇಷ ಎಕ್ಸ್‌ಪ್ರೆಸ್ ರೈಲು ಸೆಪ್ಟೆಂಬರ್ 29, 2025 ರಿಂದ ಡಿಸೆಂಬರ್ 29, 2025 ರವರೆಗೆ ಪ್ರತಿ ಸೋಮವಾರ ಸಂಜೆ 5:00ಕ್ಕೆ ಕೊಲ್ಲಂನಿಂದ ಹೊರಟು, ಮರುದಿನ ಸಂಜೆ 6:30ಕ್ಕೆ ಹುಬ್ಬಳ್ಳಿ ಆಗಮಿಸಲಿದೆ.

ಈ ವಿಶೇಷ ರೈಲು ಒಟ್ಟು 22 ಬೋಗಿಗಳನ್ನು ಒಳಗೊಂಡಿದ್ದು, ಇದರಲ್ಲಿ 01 ಎಸಿ 2–ಟೈರ್, 02 ಎಸಿ 3–ಟೈರ್, 12 ಸ್ಲೀಪರ್ ಕ್ಲಾಸ್, 05 ಜನರಲ್ ಸೆಕೆಂಡ್ ಕ್ಲಾಸ್ ಮತ್ತು 02 ಸೆಕೆಂಡ್ ಕ್ಲಾಸ್ ಲಗೇಜ್–ಕಮ್–ಬ್ರೇಕ್ ವ್ಯಾನ್'ಗಳು ಇರಲಿವೆ. ಮಾರ್ಗಮಧ್ಯೆ, ಈ ವಿಶೇಷ ರೈಲು, ಹಾವೇರಿ, ದಾವಣಗೆರೆ, ಬೀರೂರು, ಅರಸೀಕೆರೆ, ತುಮಕೂರು, ಎಸ್‌ಎಂವಿಟಿ ಬೆಂಗಳೂರು, ಕೃಷ್ಣರಾಜಪುರಂ, ಬಂಗಾರಪೇಟೆ, ಸೇಲಂ, ಈರೋಡ್, ತಿರುಪ್ಪೂರು, ಪೊದನೂರು, ಪಾಲಕ್ಕಾಡ್, ತ್ರಿಶೂರ್, ಆಲುವಾ, ಎರ್ನಾಕುಲಂ ಟೌನ್, ಕೊಟ್ಟಾಯಂ, ಚಂಗನಸ್ಸೇರಿ, ತಿರುವಲ್ಲ, ಚೆಂಗನ್ನೂರು, ಮಾವೆಲಿಕರ, ಕಾಯಂಕುಲಂ, ಕರುನಾಗಪಳ್ಳಿ ಮತ್ತು ಸಂಸ್ಥಾನಕೋಟ ನಿಲ್ದಾಣಗಳಲ್ಲಿ ನಿಲುಗಡೆ ನೀಡಲಿದೆ.

ದಸರಾ ಹಬ್ಬ ಮತ್ತು ಶಬರಿಮಲೆ ಯಾತ್ರಾ ಅವಧಿಯಲ್ಲಿ ಪ್ರಯಾಣಿಕರಿಗೆ ಅನುಕೂಲಕರ ಪ್ರಯಾಣ ಸೌಲಭ್ಯ ಒದಗಿಸುವ ಉದ್ದೇಶದಿಂದ ಈ ವಿಶೇಷ ರೈಲು ಸೇವೆ ಆರಂಭಿಸಲಾಗಿದೆ.

## ರಾಶಿ ಭವಿಷ್ಯ

### ಮೇಷ ರಾಶಿ

ಫಿಟ್ ನೆಸ್ ಮತ್ತು ತೂಕ ನಷ್ಟ ಕಾರ್ಯಕ್ರಮಗಳು ನೀವು ಒಳ್ಳೆಯ ದೇಹರಚನೆ ಹೊಂದಲು ಸಹಾಯ ಮಾಡುತ್ತದೆ. ಇಂದು ನೀವು ನಿಮ್ಮ ಹಣವನ್ನು ಖರ್ಚು ಮಾಡುವ ಅಗತ್ಯವಿಲ್ಲ, ಏಕೆಂದರೆ ಮನೆಯ ಯಾವುದೇ ಹಿರಿಯ ಸದಸ್ಯ ಇಂದು ನಿಮಗೆ ಹಣವನ್ನು ನೀಡಬಹುದು. ಕುಟುಂಬದ ಸದಸ್ಯರ ಖುಷಿಯ ಸ್ವಭಾವ ಮನೆಯಲ್ಲಿನ ವಾತಾವರಣವನ್ನು ಹಗುರಗೊಳಿಸುತ್ತದೆ.ನೀವು ನಿಮ್ಮ ಪ್ರೀತಿಪಾತ್ರರನ್ನು ಅವಳ ಹಿಂದಿನ ಉದಾಸೀನತೆಯನ್ನು ಮನ್ನಿಸುವ ಮೂಲಕ ನಿಮ್ಮ ಜೀವನವನ್ನು ಮೌಲ್ಯಯುತವಾಗಿಸುತ್ತೀರಿ.

### ವೃಷಭ ರಾಶಿ

ನಿಮ್ಮ ನೀಡುವ ವರ್ತನೆ ಪರೋಕ್ಷವಾಗಿ ನಿಮಗೆ ಆಶೀರ್ವಾದವೇ ಆಗುತ್ತದೆ, ಏಕೆಂದರೆ ನೀವು ಅನುಮಾನ, ನಿರಾಸೆ, ವಿಶ್ವಾಸರಾಹಿತ್ಯ ಅಹಂಭಾವ ಮತ್ತು ಅಸೂಯೆಯಂಥ ಅನೇಕ ದುರ್ಗುಣಗಳಿಂದ ಮುಕ್ತಿ ಹೊಂದುವ ಸಾಧ್ಯತೆಗಳಿವೆ. ನಿಮ್ಮ ಖರ್ಚುಗಳಲ್ಲಿ ಅನಿರೀಕ್ಷಿತ ಏರಿಕೆ ನಿಮ್ಮ ಮನಸ್ಸಿನ ಶಾಂತಿಗೆ ಭಂಗ ತರುತ್ತದೆ. ಎಲ್ಲರನ್ನೂ ನಿಮ್ಮ ದೊಡ್ಡ ಪಾರ್ಟಿಗೆ ಕರೆಯಿರಿ ನೀವು ಇಂದು ಆ ಹೆಚ್ಚುವರಿ ಚೈತನ್ಯವನ್ನು ಹೊಂದಿರುತ್ತೀರಿ ಹಾಗೂ ಇದು ನಿಮ್ಮನ್ನು ನಿಮ್ಮ ಗುಂಪಿಗಾಗಿ ಸಮಾರಂಭವನ್ನು ಸಂಯೋಜಿಸುವಂತೆ ಮಾಡುತ್ತದೆ.

### ಮಿಥುನ ರಾಶಿ

ಒಬ್ಬ ಆಧ್ಯಾತ್ಮಿಕ ವ್ಯಕ್ತಿ ಆಶೀರ್ವಾದ ಮಾಡುತ್ತಾರೆ ಮತ್ತು ಮನಸ್ಸಿನ ಶಾಂತಿ ತರುತ್ತಾರೆ. ಸಣ್ಣ ಉದ್ಯೋಗವನ್ನು ಮಾಡುವ ಜನರು, ಇಂದು ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು. ಇದರಿಂದ ಅವರಿಗೆ ಆರ್ಥಿಕವಾಗಿ ಲಾಭ ಪಡೆಯುವ ಸಾಧ್ಯತೆ ಇದೆ. ನಿಮ್ಮ ಮಗುವಿನ ಒಂದು ಪ್ರಶಸ್ತಿ ಪ್ರದಾನ ಕಾರ್ಯಕ್ರಮಕ್ಕೆ ಆಮಂತ್ರಣ ಸಂತೋಷದ ಮೂಲವಾಗಬಹುದು.

### ಕರ್ಕ ರಾಶಿ

ಸ್ವಯಂ ಸುಧಾರಣೆಯ ಯೋಜನೆಗಳು ಒಂದಕ್ಕಿಂತ ಹೆಚ್ಚು ರೀತಿಯಲ್ಲಿ ಫಲ ನೀಡುತ್ತವೆ – ನಿಮ್ಮ ಬಗ್ಗೆ ನಿಮಗೇ ಒಳ್ಳೆಯದೆನಿಸುತ್ತದೆ ಮತ್ತು ವಿಶ್ವಾಸ ಮೂಡುತ್ತದೆ. ನೀವು ಸ್ವಲ್ಪ ಹೆಚ್ಚುವರಿ ಹಣ ಮಾಡಲು ಯೋಜಿಸುತ್ತಿದ್ದಲ್ಲಿ ಸುಭದ್ರ ಆರ್ಥಿಕ ಯೋಜನೆಗಳಲ್ಲಿ ಹೂಡಿಕೆ ಮಾಡಿ. ಮನೆಯ ಸದಸ್ಯರೊಬ್ಬರ ವರ್ತನೆಯಿಂದ ನೀವು ತೊಂದರೆಗೊಳಗಾಗಬಹುದು. ನೀವು ಅವರೊಂದಿಗೆ ಮಾತನಾಡುವ ಅಗತ್ಯವಿದೆ. ಪ್ರಣಯಕ್ಕೆ ಒಳ್ಳೆಯ ದಿನ. ನಿಮ್ಮ ಶ್ರಮ ಕೆಲಸದಲ್ಲಿ ಇಂದು ಫಲ ನೀಡುತ್ತದೆ.

### ಸಿಂಹ ರಾಶಿ

ಕ್ರೀಡೆಗಳು ಸಾರ್ವಕಾಲಿಕ ಯೌವನದ ರಹಸ್ಯವಾಗಿದ್ದರಿಂದ ಯಾವುದಾದರೂ ಆಟಗಳಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ಇಂದು ನೀವು ನಿಮ್ಮ ಹಣವನ್ನು ಧಾರ್ಮಿಕ ಚಟುವಟಿಕೆಗಳಲ್ಲಿ ಹೂಡಿಕೆ ಮಾಡಬಹುದು, ಇದರಿಂದ ನೀವು ಮಾನಸಿಕ ಶಾಂತಿಯನ್ನು ಪಡೆಯುವ ಸಂಪೂರ್ಣ ಸಾಧ್ಯತೆ ಇದೆ. ಹಳೆಯ ಸಂಪರ್ಕಗಳು ಮತ್ತು ಸಂಬಂಧಗಳ ಪುನಶ್ಚೇತನಕ್ಕೆ ಒಳ್ಳೆಯ ದಿನ.

### ಕನ್ಯಾ ರಾಶಿ

ಕಣ್ಣಿನ ಪೋರೆ ರೋಗಿಗಳಿಗೆ ಧೂಮಪಾನವು ಅವರ ಕಣ್ಣುಗಳಿಗೆ ಮತ್ತಷ್ಟು ಹಾನಿಯುಂಟುಮಾಡಬಹುದಾದ್ದರಿಂದ ಅವರು ಕಲುಷಿತ ಪರಿಸರದಲ್ಲಿ ಹೋಗಬಾರದು. ಸಾಧ್ಯವಾದರೆ ಸೂರ್ಯನ ಬೆಳಕಿಗೆ ಅತಿಯಾದ ಒಡ್ಡಿಕೊಳ್ಳುವಿಕೆಯನ್ನು ತಪ್ಪಿಸಿ. ನೀವು ಪ್ರಯಾಣ ಮಾಡುವ ಮತ್ತು ಹಣ ಖರ್ಚು ಮಾಡುವ ಮನಸ್ಥಿತಿಯಲ್ಲಿರುತ್ತೀರಿ. ಆದರೆ ಹಾಗೆ ಮಾಡಿದಲ್ಲಿ ನೀವು ವಿಷಾದಿಸುತ್ತೀರಿ. ಥಿಯೇಟರ್ ಅಥವಾ ನಿಮ್ಮ ಸಂಗಾತಿಯ ಜೊತೆಗಿನ ಊಟ ನಿಮ್ಮನ್ನು ಒಂದು ಶಾಂತವಾದ ಮತ್ತು ಅದ್ಭುತ ಲಹರಿಯಲ್ಲಿರಿಸುವಂತೆ ತೋರುತ್ತದೆ.

### ತುಲಾ ರಾಶಿ

ನೀವು ಬಹಳ ವಿಚಿತ್ರವಾದ ಪರಿಸ್ಥಿತಿಯಲ್ಲಿ ಸಿಲುಕಿದರೂ ಅದನ್ನು ಎದುರಿಸಲು ನಿಮ್ಮ ಇಚ್ಛಾಶಕ್ತಿ ಇಂದು ಸಹಾಯ ಮಾಡಬಹುದು. ಒಂದು ಅತ್ಯಂತ ಭಾವನಾತ್ಮಕ ನಿರ್ಧಾರ ಕೈಗೊಳ್ಳುವಾಗ ನೀವು ಸ್ತಿಮಿತ ಕಳೆದುಕೊಳ್ಳಬಾರದು. ದುರ್ಬಲ ಆರ್ಥಿಕ ಸ್ಥಿತಿಯಿಂದ ಕೆಲವು ಪ್ರಮುಖ ಕೆಲಸಗಳು ಸ್ಥಗಿತಗೊಳ್ಳುತ್ತವೆ. ಕೌಟುಂಬಿಕ ಜೀವನ ಸರಾಗವಾಗಿ ನಡೆಯುತ್ತಿರುವಂತೆ ತೋರುತ್ತದೆ ಮತ್ತು ನಿಮ್ಮ ಯೋಜನೆಗಳಿಗೆ ಪೂರ್ಣ ಬೆಂಬಲವನ್ನು ನೀವು ನಿರೀಕ್ಷಿಸಬಹುದು.

### ವೃಶ್ಚಿಕ ರಾಶಿ

ತಂದೆಯು ನಿಮ್ಮನ್ನು ಆಸ್ತಿಯ ಉತ್ತರಾಧಿಕಾರಿತ್ವದಿಂದ ತಪ್ಪಿಸಬಹುದು. ಆದರೆ ಧೃತಿಗೆಡಬೇಡಿ. ಅಭ್ಯುದಯ ಮನಸ್ಸಿಗೆ ಮುದ ನೀಡಿದರೆ ಅಭಾವ ಅದನ್ನು ಬಲಗೊಳಿಸುತ್ತದೆಂದು ನೆನಪಿಡಿ. ಜೀವನದ ವಾಹನವನ್ನು ಚೆನ್ನಾಗಿ ಚಲಾಯಿಸಲು ಬಯಸುತ್ತಿದ್ದರೆ, ಇಂದು ನೀವು ಹಣದ ಬಗ್ಗೆ ವಿಶೇಷ ಗಮನ ಹರಿಸಬೇಕು. ಹಳೆಯ ಸಂಪರ್ಕಗಳು ಮತ್ತು ಸಂಬಂಧಗಳ ಪುನಶ್ಚೇತನಕ್ಕೆ ಒಳ್ಳೆಯ ದಿನ.

### ಧನು ರಾಶಿ

ನಿಮ್ಮ ವಿಶ್ವಾಸ ಮತ್ತು ಚೈತನ್ಯ ಇಂದು ಅಧಿಕವಾಗಿರುತ್ತದೆ. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ – ಆದರೆ ವೆಚ್ಚಗಳಲ್ಲಿ ನಿಮಗೆ ಉಳಿಸಲು ಕಷ್ಟವಾಗಿಸುತ್ತದೆ. ನೀವು ಬಯಸುವ ಲ್ಲಾ ಗಮನವನ್ನೂ ನೀವು ಪಡೆಯುವ ಒಳ್ಳೆಯ ದಿನ ನಿಮ್ಮ ಮನಸ್ಸಿನಲ್ಲಿ ಅನೇಕ ವಿಷಯಗಳಿರುತ್ತವೆ ಹಾಗೂ ನೀವು ಯಾವುದನ್ನು ಅನುಸರಿಸಬೇಕೆನ್ನುವ ಸಮಸ್ಯೆ ಹೊಂದಿರುತ್ತೀರಿ. ಪ್ರೀತಿಯ ಶಕ್ತಿ ನಿಮಗೆ ಪ್ರೀತಿಸಲು ಒಂದು ಕಾರಣ ನೀಡುತ್ತದೆ. ಅರ್ಹ ನೌಕರರಿಗೆ ಬಡ್ತಿ ಅಥವಾ ಆರ್ಥಿಕ ಲಾಭ.

### ಮಕರ ರಾಶಿ

ಸಂತಸದ ಪ್ರಯಾಣ ಮತ್ತು ಸಾಮಾಜಿಕ ಕಾರ್ಯಕ್ರಮಗಳು ನಿಮಗೆ ಆರಾಮ ಮತ್ತು ಸಂತೋಷ ತರುತ್ತದೆ. ಸಮಯ ಮತ್ತು ಹಣದ ಕಾತರ ನೀವು ಮಾಡಬೇಕು ಇಲ್ಲದಿದ್ದರೆ ಮುಂಬರುವ ಸಮಯ ತೊಂದರೆಗಳಿಂದ ತುಂಬಿರಬಹುದು ನಿಮ್ಮ ಸಂಗಾತಿ ಬೆಂಬಲ ನೀಡುತ್ತಾರೆ ಹಾಗೂ ಸಹಾಯ ಮಾಡುತ್ತಾರೆ. ಇಂದು, ನೀವು ನಿಮ್ಮ ಪ್ರಿಯತಮೆ ನಿಮ್ಮನ್ನು ಎಷ್ಟು ಪ್ರೀತಿಸುತ್ತಾರೆಂದು ತಿಳಿದುಕೊಳ್ಳುತ್ತೀರಿ.

### ಕುಂಭ ರಾಶಿ

ಕೆಲವು ಮಾನಸಿಕ ಒತ್ತಡಗಳ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ತಮ್ಮ ಆಪ್ತರು ಅಥವಾ ಸಂಬಂಧಿಕರೊಂದಿಗೆ ಸೇರಿ ವ್ಯಾಪಾರವನ್ನು ಮಾಡುತ್ತಿರುವ ಜನರು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹೆಜ್ಜೆಯನ್ನು ಹಾಕುವ ಅಗತ್ಯವಿದೆ , ಇಲ್ಲದಿದ್ದರೆ ಆರ್ಥಿಕ ನಷ್ಟವಾಗಬಹುದು ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ. ನೀವು ಅವರ ಸಲುವಾಗಿ ಕಾಳಜಿ ವಹಿಸುತ್ತೀರೆಂದು ಅವರಿಗೆ ಅರ್ಥವಾಗಲಿ

### ಮೀನ ರಾಶಿ

ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ನೀವು ಸಂಪ್ರದಾಯಬದ್ಧ ಹೂಡಿಕೆಗಳನ್ನು ಮಾಡಿದಲ್ಲಿ ಒಳ್ಳೆಯ ಹಣ ಮಾಡುತ್ತೀರಿ. ಕುಟುಂಬದ ಸದಸ್ಯರು ಅಥವಾ ಸಂಗಾತಿ ಕೆಲವು ಆತಂಕಗಳನ್ನು ಉಂಟುಮಾಡುತ್ತಾರೆ. ಕೆಲವರಿಗೆ ಸುಂದರ ಉಡುಗೊರೆಗಳು ಮತ್ತು ಹೂಗಳಿಂದ ತುಂಬಿದ ಪ್ರಣಯದ ಸಂಜೆ.

# ಗೋವರ್ಧನಾ ಟ್ರಸ್ಟ್‌ನಿಂದ ಗೋ– ಪಾಲನಾ ದೀಕ್ಷೆ

ಸನಾತನ ಧರ್ಮದಲ್ಲಿ ಗೋವುಗಳಿಗೆ ವಿಶೇಷ ಪ್ರಾಮುಖ್ಯತೆ ನೀಡಲಾಗಿದ್ದು, ಪೂಜನೀಯ ಸ್ಥಾನ ಪಡೆದಿವೆ. ಭಾರತೀಯ ಪರಂಪರೆಯಲ್ಲಿ ಗೋವಿನ ಮಹತ್ವ ಗೋಚರಿಸುತ್ತದೆ. ದಿನನಿತ್ಯದ ಚಟುವಟಿಕೆಗಳಲ್ಲಿ ಸಮಭಾಗಿಯಾಗಿದ್ದ ಗೋವನ್ನು ಮಾತೃ ಸ್ವರೂಪಿಯಾಗಿ, ದೇವರಾಗಿ ಪೂಜಿಸುವ ಸಂಸ್ಕೃತಿ ನಮ್ಮಲಿದೆ. ಅಲ್ಲದೆ ದೇಸಿ ಆಹಾರ ಪದ್ಧತಿಯಲ್ಲಿ ಹಾಲು, ಹಾಲಿನ ಉತ್ಪನ್ನಗಳಿಂದ ತಯಾರಿಸಿದ ಖಾದ್ಯಗಳಿಗೆ ವಿಶೇಷ ಆದ್ಯತೆ ನೀಡಲಾಗಿದೆ.





ಆದರೆ ಆಧುನಿಕ ಕಾಲಘಟ್ಟದ ಜಂಜಡದ ಬದುಕಿನಲ್ಲಿ ಗೋಸಾಕಾಣಿಕೆ ಕಡಿಮೆಯಾಗುತ್ತಿದೆ. ಅವುಗಳೊಡನೆ ನಿಕಟತೆ ದೂರವಾಗುತ್ತಿದೆ. ಹೈನುಗಾರಿಕೆಯ ಆದಾಯಕ್ಕಾಗಿ ಗೋಸಾಕಾಣಿಕೆ ಸೀಮಿತವಾಗಿದೆ. ಬರಡು, ಅನಾರೋಗ್ಯ ಪೀಡಿತ ಮತ್ತು ವಯಸ್ಸಾದ ರಾಸುಗಳ ಸ್ಥಿತಿ ಶೋಚನೀಯವಾಗಿದ್ದು, ಇವು ಕಸಾಯಿಖಾನೆ ಸೇರುವುದೇ ಹೆಚ್ಚು.

ಇದನ್ನು ತಡೆಗಟ್ಟಲು ಶಿವಮೊಗ್ಗದ ವಿಶಾಲ ಹೃದಯಿ ಸಜ್ಜನರು, ಸಮಾನ ಮನಸ್ಕ ಗೋ ಪ್ರೇಮಿಗಳು ರಾಜ್ಯಕ್ಕೇ ಮಾದರಿಯಾಗುವ ರೀತಿಯಲ್ಲಿ ಗೋಪಾಲನಾ ದೀಕ್ಷೆ ತೊಡಲು ವೇದಿಕೆ ಸಿದ್ಧಪಡಿಸಿದ್ದಾರೆ. ಗೋಮಾತೆಯ ಸಂರಕ್ಷಣೆಯ ವಿಶೇಷ ಚಿಂತನೆಯಿಂದ ಮಾಜಿ ಉಪ ಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪನವರ ನೇತೃತ್ವದಲ್ಲಿ "ಗೋವರ್ಧನ" ಟ್ರಸ್ಟ್‌ಗೆ ಚಾಲನೆ ನೀಡಲಾಗಿದೆ.

ಅನಾಥ, ಅನಾರೋಗ್ಯ ಪೀಡಿತ, ಅಪಘಾತಕ್ಕೀಡಾದ, ವಯಸ್ಸಾದ ಹಾಗೂ ಬರಡು ಹಸುಗಳ ರಕ್ಷಣೆ ಮತ್ತು ಆರೈಕೆಗಾಗಿ ಯೋಜನೆ ಸಿದ್ಧಗೊಂಡಿದೆ. ಗೋಶಾಲೆಗಳ ಸಬಲೀಕರಣ, ಸುಸಜ್ಜಿತ ಪಶುವೈದ್ಯಕೀಯ ಆಸ್ಪತ್ರೆ, ಅಂಬುಲೆನ್ಸ್, ಆಹಾರ ಪೂರೈಕೆ, ನಾಗರೀಕರ ಪಾಲ್ಗೊಳ್ಳುವಿಕೆ, ಜನಜಾಗೃತಿಯ ಆಂದೋಲನ ಮತ್ತಿತರೆ ಅಂಶಗಳು ಈ ಯೋಜನೆಯ ಭಾಗವಾಗಿದೆ.

ಗೋ ಪ್ರೇಮಿಗಳ ಮನೆಯಿಂದ ಗೋವರ್ಧನ ಟ್ರಸ್ಟ್‌ಗೆ ಹೆಸರನ್ನು ನೋಂದಾಯಿಸಿ ಪ್ರತಿ ತಿಂಗಳು 100 ರೂ. ದೇಣಿಗೆ ಪಡೆದು ಅದರಿಂದ ಸಮಾಜವನ್ನೂ ಸಹ ಗೋ ಸೇವೆಯ ಮೂಲಕ ಸಂಘಟಿಸುತ್ತ ಸಮಾಜದ ಎಲ್ಲರೂ ಗೋ ಸೇವೆಯ ಯಜ್ಞದಲ್ಲಿ ಭಾಗಿಯಾಗಲು ಕೋರಲಾಗುತ್ತಿದೆ

ಹೀಗೆ ನೂರು ರೂಪಾಯಿ ನೀಡಿ ನೋಂದಾಯಿಸಿದ ಪ್ರತಿ ಮನೆಯನ್ನು ಗೋ ಸಂರಕ್ಷಣಾ ಗೃಹ ಎಂಬ ಹೆಸರಿನಿಂದ ಕರೆಯಲಾಗುತ್ತದೆ. ಅಲ್ಲದೆ ಆ ಮನೆಯವರು ಗೋಸೇವಾ ಕೈಂಕರ್ಯದಲ್ಲಿ ಪ್ರತ್ಯಕ್ಷವಾಗಿ ಮತ್ತು ಪರೋಕ್ಷವಾಗಿ ಪಾಲ್ಗೊಳ್ಳುವ ಮೂಲಕ ದೇಸಿ ಗೋವುಗಳ ಪಾಲನೆ, ಪೋಷಣೆ ಮತ್ತು ಸಂರಕ್ಷಣೆ ಮಾಡುವ ಕಾರ್ಯ ನಡೆಯುತ್ತಿದೆ.

ಗಾಜನೂರು ಡ್ಯಾಮ್ ಸಮೀಪ ಸಕ್ರೇಬೈಲ್‌ನಲ್ಲಿರುವ ಶ್ರೀ ಜ್ಞಾನೇಶ್ವರಿ ಗೋಶಾಲೆಯ ಆವರಣದಲ್ಲಿ ಗೋವುಗಳ ಆಹಾರಕ್ಕಾಗಿ ಮೇವು ಬೆಳೆಯುವ ಯೋಜನೆ ಮತ್ತು ಗೋಶಾಲೆಯ ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಮಾಜಿ ಉಪಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪನವರು ಸೆಪ್ಟೆಂಬರ್ 13ರಂದು ಚಾಲನೆ ನೀಡಿದ್ದಾರೆ. ಅಲ್ಲದೆ ಅಪಘಾತದಲ್ಲಿ ಗಾಯಗೊಂಡ ಹಾಗೂ ತುರ್ತು ಸಂದರ್ಭಗಳಲ್ಲಿ ಚಿಕಿತ್ಸೆ ನೀಡಲು ಗೋವುಗಳಿಗಾಗಿ ಆಂಬುಲೆನ್ಸ್ ಸೇವೆಗೆ ಸೆಪ್ಟೆಂಬರ್ 19ರಂದು ಹಸಿರು ನಿಶಾನೆ ತೋರಿಸಲಾಗಿದೆ.

ಗೋವಿನ ಬಗ್ಗೆ ಮನೆ–ಮನಗಳಲ್ಲಿ ಜಾಗೃತಿಗಾಗಿ ಅಕ್ಟೋಬರ್ 8ರಂದು ಶಿವಮೊಗ್ಗದ ಫ್ರೀಡಂ ಪಾರ್ಕ್‌ನಲ್ಲಿ ಗೋ ಸೇವಾ ಭಕ್ತರ ಬೃಹತ್ ಸಭೆ ನಡೆಯಲಿದ್ದು, ಶೃಂಗೇರಿ ಪೀಠದ ಜಗದ್ಗುರು ವಿದುಶೇಖರ ಭಾರತಿ ಶ್ರೀಗಳು ಆಶೀರ್ವಚನ ನೀಡಲಿದ್ದಾರೆ. ಪ್ರಮುಖರು ಭಾಗವಹಿಸಲಿದ್ದಾರೆ.

ಗೋವರ್ಧನಾ ಟ್ರಸ್ಟ್ ಮೂಲಕ ಕೆ.ಎಸ್. ಈಶ್ವರಪ್ಪನವರೊಂದಿಗೆ ಅವರ ಮಗ, ಮಾಜಿ ಜಿಪಂ ಸದಸ್ಯ ಕೆ.ಇ. ಕಾಂತೇಶ್, ವಿ.ಕೆ.ಜೈನ್, ನವ್ಯಶ್ರೀ ನಾಗೇಶ್, ಎಸ್.ಕೆ. ಶೇಷಾಚಲ, ಹಸೂಡಿ ಸತ್ಯನಾರಾಯಣ್, ನರೇಶ್ ಜೈನ್, ಉದ್ಯಮಿ ಶಿವಶಂಕರ್, ಎನ್. ಉಮಾಪತಿ, ಯೋಗಗುರು ರುದ್ರಾರಾಧ್ಯರು, ಉಮೇಶ್ ಆರಾಧ್ಯ, ಶೃಂಗೇರಿ ನಾಗರಾಜ್, ಕುಬೇರಪ್ಪ, ಸೋಮಣ್ಣ, ವಿನೋದ್, ಜ್ಞಾನೇಶ್ವರಿ ಗೋಶಾಲೆ ಹಾಗೂ ಇನ್ನಿತರೆ ಗೋಶಾಲೆಯ ಸದಸ್ಯರು, ಸಮಸ್ತ ಗೋ ಪ್ರೇಮಿಗಳು ಸಂಘಟಿತರಾಗಿ ಈ ಕಾರ್ಯದಲ್ಲಿ ಕೈಜೋಡಿಸಿದ್ದಾರೆ.

ಈ ಜನಾಂದೋಲನವು ಸಂಪೂರ್ಣ ಯಶಸ್ಸು ಕಂಡು ರಾಜಕ್ಕೆ ಮಾದರಿಯಾಗಲಿ ಎಂಬುವುದು ಗೋಪ್ರೇಮಿಗಳ ಆಶಯವಾಗಿದೆ.

**ಲೇಖಕರು:**
**ಮಮತಾ ಟಿ.ಜಿ., ಶಿವಮೊಗ್ಗ.**
**ಮೊ:9845235432**

# ನಾಳೆ ಮಹಾಸಭೆ, ಪ್ರತಿಭಾ ಪುರಸ್ಕಾರ– ನಿವೃತ್ತ ಶಿಕ್ಷಕರಿಗೆ ಸನ್ಮಾನ

**ಶಿವಮೊಗ್ಗ:** ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸೌಹಾರ್ದ ಸಹಕಾರ ಸಂಘ ನಿ., ವತಿಯಿಂದ 24-09-2025ರ ಬುಧವಾರ ಬೆಳಿಗ್ಗೆ 10 ಗಂಟೆಗೆ ತೀರ್ಥಹಳ್ಳಿಯ ಶಿಕ್ಷಕರ ಸೌಹಾರ್ದ ಭವನದ ಟಿಎಸ್‌ಟಿ ಕನ್ವೆನ್ಷನ್ ಹಾಲ್‌ನಲ್ಲಿ ಸಂಘದ 11ನೇ ಮಹಾಸಭೆ, ಪ್ರತಿಭಾ ಪುರಸ್ಕಾರ ಹಾಗೂ ನಿವೃತ್ತ ಶಿಕ್ಷಕರಿಗೆ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.



ಎಂಎಡಿಬಿ ಮತ್ತು ಡಿಸಿಸಿ ಬ್ಯಾಂಕ್ ಅಧ್ಯಕ್ಷ ಡಾ.ಆರ್.ಎಂ. ಮಂಜುನಾಥ್ ಗೌಡ ಕಾರ್ಯಕ್ರಮ ಉದ್ಘಾಟಿಸಲಿದ್ದು, ಮುಖ್ಯ ಅತಿಥಿಗಳಾಗಿ ಶಾಸಕರುಗಳಾದ ಆರಗ ಜ್ಞಾನೇಂದ್ರ, ಗೋಪಾಲಕೃಷ್ಣ ಬೇಳೂರು, ಮಾಜಿ ಸಚಿವ ಕಿಮ್ಮನೆ ರತ್ನಾಕರ್, ಶಿಮುಲ್ ಅಧ್ಯಕ್ಷ ವಿದ್ಯಾಧರ್, ಎ.ಆರ್. ಪ್ರಸನ್ನ ಕುಮಾರ್, ಮ್ಯಾಮ್ಕೋಸ್ ಉಪಾಧ್ಯಕ್ಷ ಹಲ್ಕುಳಿ ಮಹೇಶ್, ಹೆಚ್. ಎನ್. ವಿಜಯದೇವ್, ರೆಹಮತ್ ಉಲ್ಲಾ ಅಸಾದಿ, ಗೀತಾ ರಮೇಶ್ ಆಗಮಿಸುವರು.

ಚಂದ್ರಶೇಖರ್ ನುಗ್ಗಲಿ, ಎಚ್.ಎಸ್. ಚೇತನ್, ಎಸ್. ಆರ್. ಮಂಜುನಾಥ್, ಹೆಚ್. ಆರ್. ಕೃಷ್ಣಮೂರ್ತಿ, ಬಿಇಓಗಳಾದ ಶಿವಮೊಗ್ಗದ ರಮೇಶ್, ಭದ್ರಾವತಿಯ ನಾಗೇಂದ್ರಪ್ಪ, ತೀರ್ಥಹಳ್ಳಿಯ ವೈ. ಗಣೇಶ್, ಸರ್ಕಾರಿ ನೌಕರರ ಸಂಘದ ತೀರ್ಥಹಳ್ಳಿ ತಾಲೂಕು ಅಧ್ಯಕ್ಷ ರಾಘವೇಂದ್ರ ಎಸ್. ಉಪಸ್ಥಿತರಿರುವರು. ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸೌಹಾರ್ದ ಸಹಕಾರ ಸಂಘ ನಿ., ಅಧ್ಯಕ್ಷ ಮಹಾಬಲೇಶ್ವರ ಹೆಗಡೆ ಅಧ್ಯಕ್ಷತೆ ವಹಿಸುವರು ಎಂದು ಸಂಘದ ಅಧ್ಯಕ್ಷ ಮಹಾಬಲೇಶ್ವರ ಹೆಗಡೆ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

# ಸಚಿವ ಎಚ್ ಕೆ ಪಾಟೀಲ ರಿಂದ ಗೌರವ ಘಟಕ ನಿರ್ಮಾಣಕ್ಕೆ ಚಾಲನೆ




**ಗದಗ :** ರಾಜ್ಯದ ಕಾನೂನು, ನ್ಯಾಯ,ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್. ಕೆ. ಪಾಟೀಲ ಅವರು ರವಿವಾರ ಗದಗ ಬೆಟಗೇರಿ ಅವಳಿ ನಗರದ ವಾರ್ಡ ನಂ. 16 ರಲ್ಲಿ ಸಿಸಿ ರಸ್ತೆ , ಹಾಗೂ ವಾರ್ಡ ನಂ. 17 ಮತ್ತು 18 ರಲ್ಲಿ ಗೌರವ ಘಟಕದ ಭೂಮಿ ಪೂಜೆ ನೆರವೇರಿಸಿದರು.

ಈ ವೇಳೆ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ ಆರ್, ಎಸ್ ಎನ್ ಬಳ್ಳಾರಿ, ಕೃಷ್ಣಾ ಪರಾಪೂರ ಸೇರಿದಂತೆ ಸ್ಥಳೀಯ ಗಣ್ಯರು, ಸಾರ್ವಜನಿಕರು ಇದ್ದರು.

# ಜಗದ್ಗುರು ಲಿಂಗೈಕ್ಯ ಶಿವಕುಮಾರ ಶಿವಾಚಾರ್ಯ ಮಹಾ ಸ್ವಾಮಿಗಳ ಶ್ರದ್ಧಾಂಜಲಿ ಕಾರ್ಯಕ್ರಮ

**ದಾವಣಗೆರೆ:** ಇದೇ ಸೆ.24 ರಂದು ಸಾಣೇಹಳ್ಳಿಯ ತರಳಬಾಳು ಶಾಖಾ ಮಠದಲ್ಲಿ ಆಯೋಜಿಸಿರುವ ಹಿರಿಯ ಜಗದ್ಗುರು ಲಿಂಗೈಕ್ಯ ಶಿವಕುಮಾರ ಶಿವಾಚಾರ್ಯ ಮಹಾಸ್ವಾಮಿಗಳ ಶ್ರದ್ಧಾಂಜಲಿ ಕಾರ್ಯಕ್ರಮಕ್ಕೆ ಭಕ್ತಿ ಸಮರ್ಪಣಾ ಕಾರ್ಯಕ್ರಮ ನಗರದ ನಿಜಲಿಂಗಪ್ಪ ಬಡಾವಣೆಯಲ್ಲಿರುವ ಹಿರಿಯ ಸಹಕಾರಿ ಧುರೀಣ ಜೆ.ಆರ್.ಷಣ್ಮುಖಪ್ಪ ಅವರ ಗೃಹದಲ್ಲಿ ಜರುಗಿತು.



ಈ ಸಂದರ್ಭದಲ್ಲಿ ಮಾತನಾಡಿದ ಡಾ॥ ಪಂಡಿತಾರಾಧ್ಯ ಸ್ವಾಮಿಗಳು, ಲಿಂ॥ ಹಿರಿಯ ಜಗದ್ಗುರುಗಳು ಸಮಾಜವನ್ನು ಕಟ್ಟುವ ಕೆಲಸದಲ್ಲಿ ಯಾವುದೇ ಅಡೆತಡೆಗಳು ಬಂದರೂ ಎದೆ ಕೊಟ್ಟು ಎದುರಿಸಿದರು. ದುಗ್ಗಾಣಿ ಮಠವೆಂದು ಅವಹೇಳನಕ್ಕೆ ಗುರಿಯಾಗಿದ್ದ ಮಠ ಮತ್ತು ಶಿಷ್ಯರನ್ನು ದುಡಿಯುವ ಮಠ, ದುಡಿಯುವ ಶಿಷ್ಯರನ್ನಾಗಿ ಮಾಡಿದ ಕೀರ್ತಿ ಪೂಜ್ಯರಿಗೆ ಸಲ್ಲುತ್ತದೆ ಎಂದರು.

ಭಕ್ತಿ ಸಮರ್ಪಿಸಿದ ಜೆ.ಆರ್.ಷಣ್ಮುಖಪ್ಪ ಮಾತನಾಡಿ, ಇಂದಿನ ನನ್ನ ಸ್ಥಾನಮಾನಗಳಿಗೆ ಹಿರಿಯ ಲಿಂಗೈಕ್ಯ ಜಗದ್ಗುರುಗಳ ಆಶೀರ್ವಾದವೇ ಕಾರಣ, ಅವರು ನಮ್ಮ ಸಮಾಜದ ಶಿಷ್ಯರನ್ನು ದುಡಿಯುವ ಶಿಷ್ಯರನ್ನಾಗಿ ಜೀವನಕ್ಕೆ ಮಾರ್ಗದರ್ಶನ ಮಾಡಿದ ಪುಣ್ಯಾತ್ಮರು. ಅವರ ಕಾರ್ಯಗಳಿಗೆ ನಾವು ಎಷ್ಟು ಕೊಟ್ಟರು ಸಾಲದು, ಸಮಾಜ ಅವರ ಋಣ ತೀರಿಸಲಾಗದಷ್ಟು ಮಾಡಿ ಹೋಗಿದ್ದಾರೆ. ಈ ಪುಣ್ಯ ಕೆಲಸದಲ್ಲಿ ಎಲ್ಲರೂ ತನು–ಮನ–ಧನಗಳನ್ನು ನೀಡಿ ಭಾಗಿಯಾಗೋಣ ಎಂದರು.

ಅಧ್ಯಕ್ಷತೆ ವಹಿಸಿದ್ದ ಉದ್ಯಮಿ ಅಣಬೇರು ರಾಜಣ್ಣ ಮಾತನಾಡಿ, ಲಿಂ. ಹಿರಿಯ ಜಗದ್ಗುರುಗಳು ಈ ನಾಡು ಕಂಡ ಶತಮಾನದ ಶ್ರೇಷ್ಠರು, ಹಾಗೆಯೇ ಅವರು ಹಾಕಿ ಕೊಟ್ಟ ಮಾರ್ಗ ಇಂದಿಗೂ ಪ್ರಸ್ತುತವಾಗಿದೆ. ಅವರು ಸಮಾಜದ ಒಳಿತಿಗಾಗಿ ಮಾಡಿದ ಕೆಲಸಗಳು ಇಂದಿನ ಎಲ್ಲಾ ಮಠದ ಸ್ವಾಮಿಗಳಿಗೆ ಮಾದರಿ. ತಮ್ಮ 60ನೇ ವರ್ಷಕ್ಕೆ ಪೀಠ ತ್ಯಾಗ ಮಾಡಿದ್ದು ಪ್ರಶಂಸನೀಯ ಅವರಂತೆ ಎಲ್ಲಾ ಮಠಾಧೀಶರು ಬದುಕಿ–ಬಾಳಿ ತೋರಿಸಬೇಕಾಗಿದೆ. ಸಾಣೇಹಳ್ಳಿಯಲ್ಲಿ ಅವರ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಭಕ್ತರು ಸಾವಿರ ಸಾವಿರ ಸಂಖ್ಯೆಯಲ್ಲಿ ಭಾಗವಹಿಸುವುದರ ಮೂಲಕ ಅವರ ಋಣ ತೀರಿಸಬೇಕಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬಾಳ್ಕಿಯ ಡಾ.ಬಸವಲಿಂಗ ಪಟ್ಟದೇವರು, ಪಾಂಡೋಮಟ್ಟಿಯ ಡಾ.ಗುರುಬಸವ ಮಹಾಸ್ವಾಮಿಗಳು ಮತ್ತು ನಾಡಿನ ವಿವಿಧ ಲಿಂಗಾಯತ ಮಠಗಳ ಹರಗುರು ಚರಮೂರ್ತಿಗಳು, ಜೆ.ಆರ್.ಷಣ್ಮುಖಪ್ಪನವರ ಕುಟುಂಬ ವರ್ಗದವರು, ಮಳ್ಳೇಕಟ್ಟೆ ಸಂತೋಷ್, ಮಳ್ಳೇಕಟ್ಟೆ ಶ್ರೀನಿವಾಸ್, ಕೆ.ಬಿ. ಬಸವಲಿಂಗಪ್ಪ, ಪಲ್ಲಾಗಟ್ಟೆ ನಾಗರಾಜ್ ಮುಂತಾದವರು ಉಪಸ್ಥಿತರಿದ್ದರು.

# ಕಾಳಿಕಾದೇವಿ ವಿಶ್ವಕರ್ಮ ದೇವಸ್ಥಾನದಲ್ಲಿ ಇಂದಿನಿಂದ ದಸರಾ ಮಹೋತ್ಸವ

**ದಾವಣಗೆರೆ :** ನವರಾತ್ರಿ ಪ್ರಯುಕ್ತ ನಗರದ ಕಾಳಿಕಾದೇವಿ ರಸ್ತೆಯಲ್ಲಿರುವ ಶ್ರೀ ಕಾಳಿಕಾ ದೇವಿ ವಿಶ್ವಕರ್ಮ ದೇವಸ್ಥಾನದಲ್ಲಿ ಸೆ. 22ರ ಸೋಮವಾರ ಪ್ರಾತಃಕಾಲ ಗಣಪತಿ ಪೂಜೆ, ಪುಣ್ಯಾಹ ವಾಚನ ಘಟಸ್ಥಾಪನೆ ಮತ್ತು ಧ್ವಜಾರೋಹಣ ನಡೆಯುವುದು.



ಇಂದಿನಿಂದ ಬರುವ ಅ. 02ರ ಗುರುವಾರದವರೆಗೆ ಶ್ರೀ ಅಮ್ಮನವರಿಗೆ ವೇದೋಕ್ತ ಪಂಚಾಮೃತಾಭಿಷೇಕ, ದುರ್ಗಾಹೋಮ ಮತ್ತು ಪುಷ್ಪಾಲಂಕಾರ, ವಿಶೇಷ ಅಲಂಕಾರ ಪೂಜಾ ಕಾರ್ಯಕ್ರಮಗಳು ನಡೆಯಲಿವೆ. ದಿನಾಂಕ 30ರ ಮಂಗಳವಾರ ದುರ್ಗಾಷ್ಟಮಿ, ಅ. 01ರ ಬುಧವಾರ ಆಯುಧ ಪೂಜೆ, 02ರ ಗುರುವಾರ ವಿಜಯದಶಮಿ ಹಾಗೂ ಸಂಜೆ 6.30ಕ್ಕೆ ಪಾಲಕಿ ಉತ್ಸವದೊಂದಿಗೆ ಬನ್ನಿ ಮುಡಿಯುವುದು ನಂತರ ಪ್ರಸಾದ ವಿನಿಯೋಗವಿರುತ್ತದೆ. ಪ್ರತಿ ದಿನ ಸಂಜೆ 6 ರಿಂದ 7 ರವರೆಗೆ ಶ್ರೀ ಕಾಳಿಕಾದೇವಿ ಮಹಿಳಾ ಭಜನಾ ಮಂಡಳಿಯಿಂದ ಲಲಿತಾ ಸಹಸ್ರನಾಮ ಪಾರಾಯಣ ಮತ್ತು ಸಂಜೆ 7 ರಿಂದ 9 ರವರೆಗೆ ಕೆ.ಹೆಚ್. ಕುಮಾರಾಚಾರ್ ಮತ್ತು ಸಂಗಡಿಗರಿಂದ ಶ್ರೀ ದೇವಿಯ ಪಾರಾಯಣ ನಡೆಯಲಿದೆ.

ಅ.1ರ ಬುಧವಾರ ರಾತ್ರಿ 8ಕ್ಕೆ ಅನ್ನ ಸಂತರ್ಪಣೆ ಏರ್ಪಡಿಸಲಾಗಿದೆ ಎಂದು ಶ್ರೀ ಕಾಳಿಕಾದೇವಿ ವಿಶ್ವಕರ್ಮ ದೇವಸ್ಥಾನ ಆಡಳಿತ ಸಮಿತಿ ಟ್ರಸ್ಟ್ ತಿಳಿಸಿದೆ.

# 25 ಲಕ್ಷ ಅನುದಾನದಲ್ಲಿ ನಡೆಯುವ ಸಿ.ಸಿ. ರಸ್ತೆ ಕಾಮಗಾರಿಗೆ ಗುದ್ದಲಿಪೂಜೆ

**ಹೊನ್ನಾಳಿ :** ಗ್ರಾಮಸ್ಥರು ತಮ್ಮ ವ್ಯಾಪ್ತಿಯಲ್ಲಿ ನಡೆಯುವ ರಸ್ತೆ, ಚರಂಡಿ, ಇನ್ನಿತರೆ ಯಾವುದೇ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಇದು ತಮ್ಮದೆಂಬ ಭಾವನೆಯಿಂದ ಕೆಲಸಗಳು ಕಳಪೆಯಾಗದಂತೆ ಗಮನಹರಿಸಬೇಕು ಇಂತಹ ಕೆಲಸಗಳು ಸರಕಾರದ ಅನುದಾನ ಅಂದರೆ ಸಾರ್ವಜನಿಕರು ತೆರಿಗೆ ರೂಪದಲ್ಲಿ ಕೊಟ್ಟ ಹಣದಿಂದಲೇ ನಡೆಯುತ್ತವೆ ಎಂದು ಶಾಸಕ ಡಿ.ಜಿ.ಶಾಂತನಗೌಡ ಹೇಳಿದರು.

ಅವರು ತಾಲೂಕಿನ ಕುಂದೂರು ಮರುಳ ಸಿದ್ದೇಶ್ವರ ಬಡಾವಣೆಯಲ್ಲಿ ಭಾನುವಾರ ಸುಮಾರು 25 ಲಕ್ಷ ಅನುದಾನದಲ್ಲಿ ನಡಯುವ ಸಿ.ಸಿ. ರಸ್ತೆ ಕಾಮಗಾರಿಗೆ ಗುದ್ದಲಿಪೂಜೆ ನೆರವೇರಿಸಿ ಮಾತನಾಡಿದರು.



ಈ ಕಾಮಗಾರಿಯು ಕೆ.ಆರ್. ಐ.ಡಿ,ಎಲ್. ಇಲಾಖೆವತಿಯಿಂದ ನಡೆಯಲಿದ್ದು, ರಸ್ತೆಯ ಉದ್ದ ಸುಮಾರು 297 ಮೀಟರ್ ಇದೆ ಎಂದು ಮಾಹಿತಿ ನೀಡಿದರು. ಸರಕಾರದ ಅಭಿವೃದ್ಧಿ ವಿಚಾರದಲ್ಲಿ ಗುತ್ತಿಗೆದರರೊಂದಿಗೆ ಯಾವುದೇ ರಾಜಿ ಮಾಡಿಕೋಳ್ಳುವುದಿಲ್ಲ ಉತ್ತಮ ಕಾಮಗಾರಿ ಮಾತ್ರ ನನ್ನ ಕ್ಷೇತ್ರದಲ್ಲಿ ಮಾಡಬೇಕು ಗ್ರಾಮಸ್ಥರಿಂದ ದೂರು ಬಂದರೆ ನಾನು ಸಯಿಸುವುದಿಲ್ಲ ಎಂದರು.

ಈ ಸಂದರ್ಭದಲ್ಲಿ ಕೆ.ಆರ್.ಐ.ಡಿ.ಎಲ್.ನ ಇಂಜಿನಿಯರ್ ರಾಘವೇಂದ್ರ, ಕಾಂಗ್ರೇಸ್ ನ ಹಿರಿಯ ಮುಖಂಡರಾದ ವರದರಾಜಪ್ಪಗೌಡ, ಹೊನ್ನಾಳಿ ಬ್ಲಾಕ್ ಕಾಂಗ್ರೇಸ್ ಅಧ್ಯಕ್ಷ ಸಣ್ಣಕ್ಕಿ ಬಸವನಗೌಡ, ಸಾಸ್ವೇಹಳ್ಳಿ ಬ್ಲಾಕ್ ನ ಅಧ್ಯಕ್ಷ ಆರ್. ನಾಗಪ್ಪ, ಗ್ರಾಮದ ಮುಖಂಡರಾದ ಸಿ.ಬಿ.ಅಂಜನೇಯ, ಆಕಾಶ್ ಪಾಟೀಲ್, ಮಂಜುನಾಥ, ವಿಕ್ರಂ ಪಾಟೀಲ್, ವಿಶ್ವನಾಥ, ಸಿದ್ದೇಶ್, ಕರಿಬಸಪ್ಪ ಹಾಗೂ ಅನೇಕ ಮುಖಂಡರು ಇದ್ದರು.

ತಾಲೂಕಿನ ಕುಂದೂರು ಗ್ರಾಮದ ಮರುಳಸಿದ್ದೇಶ್ವರ ಬಡಾವಣೆಯಲ್ಲಿ 25 ಲಕ್ಷ ಅನುದಾನದಲ್ಲಿ ಸಿ.ಸಿ. ರಸ್ತೆ ಕಾಮಗಾರಿಗೆ ಶಾಸಕ ಡಿ.ಜಿ.ಶಾಂತನಗೌಡ ಅವರು ಗುದ್ದಲಿ ಪೂಜೆ ನೆರವೇರಿಸಿದರು.

# ಪ್ರಾಮಾಣಿಕತೆಯಿಂದ ಸೇವೆ ಸಲ್ಲಿಸಿ: ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್



**ಬಳ್ಳಾರಿ:** ಸರ್ಕಾರಿ ಹುದ್ದೆಗೆ ನೇಮಕಗೊಂಡಿರುವ ಅಧಿಕಾರಿಗಳು ಪ್ರಾಮಾಣಿಕತೆಯಿಂದ ಸೇವೆ ಸಲ್ಲಿಸುವ ಮೂಲಕ ಸರ್ಕಾರಕ್ಕೆ ಗೌರವ ತರಬೇಕು ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್ ಅವರು ಹೇಳಿದರು.

ಶನಿವಾರ, ನಗರದ ಜಿಲ್ಲಾಧಿಕಾರಿ ಕಚೇರಿಯ ಕೆಸ್ವಾನ್ ಸಭಾಂಗಣದಲ್ಲಿ ಜಿಲ್ಲಾ ತರಬೇತಿ ಸಂಸ್ಥೆಯ 88 ನೇ ಸಾಮಾನ್ಯ ಬುನಾದಿ ತರಬೇತಿಯ ಅಭ್ಯರ್ಥಿಗಳನ್ನು ಉದ್ದೇಶಿಸಿ ಅವರು ಮಾತನಾಡಿದರು.

ಸರ್ಕಾರಿ ಕೆಲಸ–ಕಾರ್ಯಗಳಲ್ಲಿ ದಕ್ಷತೆಯಿಂದ ಕಾರ್ಯನಿರ್ವಹಿಸಬೇಕು. ಸಮಯ ಪಾಲನೆ ಹೊಂದಬೇಕು. ನಿಸ್ವಾರ್ಥ ಸೇವೆ ಸಲ್ಲಿಸಬೇಕು ಎಂದು ಕಿವಿಮಾತು ಹೇಳಿದ ಅವರು, ಶುಭವಾಗಲಿ ಎಂದು ಆಶಿಸಿದರು.

ಈ ವೇಳೆ ಜಿಲ್ಲಾ ತರಬೇತಿ ಸಂಸ್ಥೆಯ ಉಪಪ್ರಾಚಾರ್ಯ ಶೇಷಗಿರಿ ನಾಯ್ಕ ಸೇರಿದಂತೆ ಅಭ್ಯರ್ಥಿಗಳು ಉಪಸ್ಥಿತರಿದ್ದರು.

# ಕಾಲೇಜುಗಳಲ್ಲಿ ಶ್ರಮದಾನಕ್ಕಾಗಿ ಯುವಜನರ ದಂಡೆ ಸಿದ್ಧವಾಗಬೇಕು

**ಚಿತ್ರದುರ್ಗ:** ಶಾಲಾ ಕಾಲೇಜುಗಳಲ್ಲಿರುವ ಯುವ ಜನಾಂಗ ಶ್ರಮದಾನದ ಮುಖಾಂತರ ಸೇವೆ ಸಲ್ಲಿಸುತ್ತಾ, ಸ್ವಚ್ಛತೆಯನ್ನ ಸಾಧಿಸುತ್ತಾ, ತಮ್ಮ ಆರೋಗ್ಯದ ಜೊತೆಗೆ ಸಮಾಜದ ಆರೋಗ್ಯವನ್ನು ಸುಧಾರಿಸಲು ಸಹಾಯ ಮಾಡಬೇಕು, ಅದಕ್ಕಾಗಿ ಯುವಜನರ ದಂಡು, ಸೈನ್ಯವೇ ಸಿದ್ಧವಾಗಬೇಕಾಗಿದೆ ಎಂದು ಸರ್ಕಾರಿ ವಿಜ್ಞಾನ ಕಾಲೇಜಿನ ಎನ್ ಎಸ್ ಎಸ್ ಅಧಿಕಾರಿಗಳಾದ ಡಾ.ರಾಜೇಶ್ವರಿಯವರು ಮಾತನಾಡಿದರು.

ಅವರು ಚಿತ್ರದುರ್ಗ ನಗರದ ಕೇಂದ್ರ ಭಾಗದಲ್ಲಿರುವ ಸರ್ಕಾರಿ ವಿಜ್ಞಾನ ಕಾಲೇಜಿನಲ್ಲಿ ಎನ್ ಎಸ್ ಎಸ್ ನ ಮೂರು ಘಟಕಗಳಿಂದ ಸ್ವಚ್ಛತಾ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದ ವಿದ್ಯಾರ್ಥಿಗಳಿಗೆ ಶ್ರಮಾಧಾನದ ಮಹತ್ವವನ್ನು ತಿಳಿಸುತ್ತಾ ಮಾತನಾಡುತ್ತಿದ್ದರು.

ಯುವಜನತೆಯಲ್ಲಿರುವ ಶಕ್ತಿ ಅನಾವಶ್ಯಕವಾಗಿ ಸಮಾಜದಲ್ಲಿ ದುರ್ಬಳಕೆಯಾಗುತ್ತಿದ್ದು, ಅದನ್ನು ಸರಿದಾರಿಗೆ ತರಲು ಎಸ್ ಎಸ್ ಸ್ ಸಹಕಾರಿಯಾಗಿದೆ, ಮಾನವ ಶಕ್ತಿಯನ್ನು ಬಳಕೆ ಮಾಡಿ ಸಮಾಜವನ್ನು ಸ್ವಚ್ಛತೆಗೊಳಿಸುವುದೇ ಅತ್ಯುತ್ತಮ



ಕೆಲಸವಾಗಿದೆ ಎಂದರು.

ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ರವಿಕಾಂತ್ ರವರು ಮಾತನಾಡುತ್ತಾ ಇಂದೆಲ್ಲಾ ಸರ್ಕಾರಿ ಕಾಲೇಜುಗಳಿಗೆ ವಿಸ್ತೀರ್ಣವಾದ ಜಾಗ ನೀಡುತ್ತಿದ್ದರು, ಈಗ ಕಾಲೇಜುಗಳ ಆವರಣದ ವಿಸ್ತೀರ್ಣ ಕಮ್ಮಿ ಆಗುತ್ತಿದ್ದು, ಅದನ್ನು ಸುಸ್ಥಿತಿಯಲ್ಲಿ ಇಡುವುದು ಸುಲಭವಾಗಿದೆ ಹಳೆಯ ಕಾಲೇಜುಗಳಲ್ಲಿ ವಿಸ್ತೀರ್ಣವಾದ ಭೂಮಿಯನ್ನು ಸ್ವಚ್ಛಗೊಳಿಸುವುದಕ್ಕಾಗಿ ಯುವ ಜನಾಂಗದ ಶ್ರಮ ಅವಶ್ಯಕತೆ ಇದೆ ಎಂದರು.

ಎನ್ ಎಸ್ ಎಸ್ ಒಂದನೇ ಘಟಕದ ಕಾರ್ಯಕ್ರಮಾಧಿಕಾರಿಗಳಾದ ಡಾ. ನಾಗರಾಜ್ ಜೆ, ಮಾತನಾಡುತ್ತಾ ರಾಷ್ಟ್ರಮಟ್ಟದಲ್ಲಿ ಹೆಸರು ಗಳಿಸಿದಂತ ಎನ್ ಎಸ್ ಎಸ್ ವಿದ್ಯಾರ್ಥಿಗಳನ್ನು ಕರೆದು, ನಮ್ಮಲ್ಲಿರುವ ಎನ್ ಎಸ್ ಎಸ್ ವಿದ್ಯಾರ್ಥಿಗಳಿಗೆ ಮಾದರಿಯಾಗಿ ತೋರಿಸಿ, ಅವರನ್ನು ಸಮಾಜ ಸೇವೆಗೆ ಮತ್ತು ಉನ್ನತ ಸಾಧನೆ ಮಾಡಲು ಪ್ರೋತ್ಸಾಹಿಸಬೇಕಾಗಿದೆ ಎಂದರು.

ಐಕ್ಯೂಎಸಿ ಸಂಯೋಜಕರು ಹಾಗೂ ಫಿಸಿಕಲ್ ಡೈರೆಕ್ಟರ್ ರಾದ ಡಾ. ಕೆ ರಾಘವೇಂದ್ರರವರು

ಮಾತನಾಡುತ್ತಾ ಕ್ರೀಡೆಗಳಲ್ಲಿ ಭಾಗವಹಿಸಲು ದೈಹಿಕ ಶಕ್ತಿ ಅವಶ್ಯಕತೆ ಇದೆ, ಅದನ್ನ ಎನ್ ಎಸ್ ಎಸ್ ನಲ್ಲಿ ಸೇವೆ ಮಾಡುವುದರ ಮುಖಾಂತರ ಸಹ ಗಳಿಸಿಕೊಳ್ಳಬಹುದು, ವಿದ್ಯಾರ್ಥಿಗಳು ವಿಶ್ವವಿದ್ಯಾಲಯದ ಮಟ್ಟದಲ್ಲಿ ಕ್ರೀಡೆಗಳಲ್ಲಿ ಭಾಗವಹಿಸಿ ಉತ್ತಮ ಸಾಧನೆ ಮಾಡಬೇಕು ಎಂದರು.

ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ರಾಜ್ಯ ಉಪಾಧ್ಯಕ್ಷರಾದ ಡಾ. ಎಚ್ ಕೆ ಎಸ್ ಸ್ವಾಮಿ ಅವರು ಮಾತನಾಡುತ್ತಾ ಎನ್ ಎಸ್ ಎಸ್ ವಿದ್ಯಾರ್ಥಿಗಳು ತಮ್ಮ ಸೇವೆಯ ಸಮಯವನ್ನ ಸದುಪಯೋಗಪಡಿಸಿಕೊಂಡು, ಗ್ರಾಮೀಣ ಜನರ ಉದ್ಧಾರಕ್ಕಾಗಿ ಶ್ರಮಿಸುತ್ತಾ ಮಹಾತ್ಮ ಗಾಂಧೀಜಿಯವರ ಕನಸಾದ, ಕನಸಿನ ಭಾರತವನ್ನು ಕಟ್ಟಲು ಸಹಕರಿಸಬೇಕು ಎಂದರು.

ನೂರಕ್ಕೂ ಹೆಚ್ಚು ವಿದ್ಯಾರ್ಥಿಗಳು ಎಸ್ ನಲ್ಲಿ ಭಾಗವಹಿಸಿ ಹಂತ ಹಂತವಾಗಿ ಕಾಲೇಜಿನ ಆವರಣವನ್ನು ಸ್ವಚ್ಛಗೊಳಿಸುತ್ತಾ ಬರುತ್ತಿದ್ದು, ನೋಡುಗರ ಮನಸ್ಸನ್ನು ಸೆಳೆಯುವಷ್ಟರ ಮಟ್ಟಿಗೆ ಸುಂದರಗೊಳಿಸಲಾಗಿದೆ.

ಕಾರ್ಯಕ್ರಮದಲ್ಲಿ ಭೌತಶಾಸ್ತ್ರ ಗಣಿತಶಾಸ್ತ್ರ ಸಸ್ಯ ಶಾಸ್ತ್ರದ ವಿಭಾಗದ ಉಪನ್ಯಾಸಕರುಗಳು, ಮುಖ್ಯಸ್ಥರುಗಳು ಭಾಗವಹಿಸಿದ್ದರು. ಕೊನೆಯ ಭಾಗದಲ್ಲಿ ವಿದ್ಯಾರ್ಥಿಗಳಿಗೆ ಎನ್ ಎಸ್ ಎಸ್ ಗೀತೆಯನ್ನು ಹಾಡಿ ಘೋಷಣೆಗಳನ್ನು ಕೂಗಿದರು.

# ಲಯನ್ಸ್ ಕ್ಲಬ್ ವತಿಯಿಂದ ಆಲ್ದೂರಿನಲ್ಲಿ ಯಶಸ್ವಿ ಆರೋಗ್ಯ ತಪಾಸಣೆ ಶಿಬಿರ

**ಚಿಕ್ಕಮಗಳೂರು:** ಆಲ್ದೂರಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಸಭಾಂಗಣದಲ್ಲಿ ಇತ್ತೀಚಿಗೆ ಆಯೋಜಿಸಿದ್ದ ಬೃಹತ್ ಆರೋಗ್ಯ ತಪಾಸಣೆ, ನೇತ್ರ ತಪಾಸಣೆ ಮತ್ತು ಶಸ್ತ್ರ ಚಿಕಿತ್ಸೆ ಹಾಗೂ ಸ್ವಯಂ ಪ್ರೇರಿತ ರಕ್ತದಾನ ಅತ್ಯಂತ ಯಶಸ್ವಿಯಾಗಿ ನಡೆಯಿತು.

ಚಿಕ್ಕಮಗಳೂರಿನ ಲಯನ್ಸ್ ಕ್ಲಬ್, ಲಯನ್ಸ್ ಕ್ಲಬ್ ಬಪ್ಪನಾಡು ಇನ್ಸ್‌ಫಯರ್, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ, ಆಲ್ದೂರು ಹಾಗೂ ಮಂಗಳೂರಿನ ಎ.ಜೆ. ಇನ್ಸಿಟ್ಯೂಟ್ ಆಫ್ ಮೆಡಿಕಲ್ ಸೈನ್ಸ್ ಇವರ ಆಶ್ರಯದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಬೆಳಿಗ್ಗೆ 10 ಗಂಟೆಗೆ ಆರಂಭವಾದ ಆರೋಗ್ಯ ತಪಾಸಣಾ ಶಿಬಿರವನ್ನು ಆಲ್ದೂರಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಹೆಚ್.ಎಸ್. ಕವೀಶ್ ಉದ್ಘಾಟಿಸಿದರು. ಈ ಸದರ್ಭದಲ್ಲಿ ಮಾತನಾಡಿದ ಅವರು ಜಿಲ್ಲಾ ಕೇಂದ್ರಗಳಿಗೆ ಸೀಮಿತವಾಗಿದ್ದ ಇಂತಹ ಆರೋಗ್ಯ ತಪಾಸಣಾ ಶಿಬಿರವನ್ನು ಚಿಕ್ಕಮಗಳೂರು ಲಯನ್ಸ್ ಸಂಸ್ಥೆ ಆಲ್ದೂರಿನಲ್ಲಿ ಹಮ್ಮಿಕೊಳ್ಳುವ ಮೂಲಕ ಉತ್ತಮ ಕೆಲಸ ಮಾಡಿದೆ. ಸಣ್ಣಪುಟ್ಟ ಆರೋಗ್ಯ ಸಂಬಂಧಿತ ತಪಾಸಣೆಗಳಿಗೆ ಮಂಗಳೂರಿಗೆ ಮುಖ ಮಾಡಬೇಕಿದ್ದ ಈ ಭಾಗದ ಜನರಿಗೆ ಆಲ್ದೂರಿನಲ್ಲೇ ಕಾರ್ಯಕ್ರಮ ಹಮ್ಮಿಕೊಂಡಿರುವುದು ಸಾಮಾನ್ಯ ಬಡಜನರಿಗೆ ಅನುಕೂಲವಾಗಿದೆ ಎಂದು ತಿಳಿಸಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಲಯನ್ಸ್ ಕ್ಲಬ್ ಅಧ್ಯಕ್ಷ ಸಿ.ಎನ್. ಕುಮಾರ್ ಮಾತನಾಡಿ ಲಯನ್ಸ್ ಕ್ಲಬ್ ನಡೆಸುವ ಆರೋಗ್ಯ ಸೇವಾ ಕಾರ್ಯಕ್ರಮಗಳು ಗ್ರಾಮೀಣ ಪ್ರದೇಶದ ಜನರಿಗೆ ತಲುಪಬೇಕೆಂಬುದು ಲಯನ್ಸ್ ಸಂಸ್ಥೆಯ ಉದ್ದೇಶವಾಗಿದ್ದು, ಆಲ್ದೂರಿನಲ್ಲಿ ನಡೆಯುತ್ತಿರುವ ಶಿಬಿರಕ್ಕೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಈ ಆರೋಗ್ಯ ತಪಾಸಣಾ ಶಿಬಿರದಲ್ಲಿ ನಿರೀಕ್ಷೆಗೂ ಮೀರಿ ಜನ ಪಾಲ್ಗೊಂಡಿರುವುದು ತಮಗೆ ಖುಷಿ ತಂದಿದ್ದು, ಈ ಕಾರ್ಯಕ್ರಮದ ಯಶಸ್ವಿಗೆ ಸಹಕಾರ




ನೀಡಿದ ಆಲ್ದೂರು ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರು ಮತ್ತು ಆಡಳಿತ ಮಂಡಳಿಗೆ ಲಯನ್ಸ್ ಸಂಸ್ಥೆ ಅಭಾರಿಯಾಗುತ್ತದೆ ಎಂದರು.

ಲಯನ್ಸ್ ಸಂಸ್ಥೆಯ ಜೊತೆಗೆ ಮಂಗಳೂರಿನ ಎ.ಜೆ. ಆಸ್ಪತ್ರೆ, ದಾವಣಗೆರೆ ರಕ್ತನಿಧಿ ಕೇಂದ್ರ ಮತ್ತು ಚಿಕ್ಕಮಗಳೂರಿನ ದಂತ ತಜ್ಞರಾದ ಡಾ. ಸುಂದರಗೌಡ ಅವರು ಈ ಕಾರ್ಯಕ್ರಮಕ್ಕೆ ಕೈಜೋಡಿಸಿದ್ದಾರೆಂದು ತಿಳಿಸಿದರು.

ಲಯನ್ಸ್‌ಕ್ಲಬ್ ಕಾರ್ಯದರ್ಶಿ ಗೋಪಿಕೃಷ್ಣ ಮಾತನಾಡಿ ಈ ಆರೋಗ್ಯ ತಪಾಸಣಾ ಶಿಬಿರ ಅತ್ಯಂತ ಯಶಸ್ವಿಯಾಗಿ ನಡೆಯಲು ಆಲ್ದೂರಿನ ಕೃಷಿ ಪತ್ತಿನ ಸಹಕಾರ ಸಂಘದ ನಿರ್ದೇಶಕ ಹಾಗೂ ಲಯನ್ಸ್ ಸಂಸ್ಥೆಯ ಆರೋಗ್ಯ ಕಾರ್ಯಕ್ರಮದ ಸಂಯೋಜಕ ಲಯನ್ಸ್ ಹೆಚ್.ಆರ್. ಸಂದೇಶ್ ಮತ್ತವರ ತಂಡ ಅಗತ್ಯ ಸ್ಥಳಾವಕಾಶ ಕಲ್ಪಿಸಿ ಕಾರ್ಯಕ್ರಮ ಯಶಸ್ವಿಯಾಗಲು ಸಹಕಾರ ನೀಡಿದೆ ಎಂದರು.

ಮಂಗಳೂರಿನ ಎ.ಜೆ. ಆಸ್ಪತ್ರೆ ವೈದ್ಯರಾದ ಡಾ. ಸೌಪರ್ಣಿಕ ಶೆಟ್ಟಿ, ಡಾ. ಸುವಂಶಿಶೆಟ್ಟಿ ಫಿಸಿಯೋ ಥೆರಪಿ ವೈದ್ಯ ಡಾ. ಗೌತಮ್ ಹಾಗೂ ದಂತ ತಜ್ಞ ಡಾ. ಸುಂದರ್‌ಗೌಡ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದು, ಆರೋಗ್ಯ ತಪಾಸಣೆ ನಡೆಸಿಕೊಟ್ಟರು.

ಲಯನ್ಸ್ ಮಾಜಿ ರಾಜ್ಯಪಾಲ ಹೆಚ್. ಆರ್. ಹರೀಶ್, ಪ್ರಾಂತೀಯ ಅಧ್ಯಕ್ಷ ಬಿ.ಎನ್. ವೆಂಕಟೇಶ್, ಲಯನ್ಸ್ ವಲಯಾಧ್ಯಕ್ಷ ಯು.ಎಂ. ರಾಮಪ್ರಸಾದ್, ಲಯನ್ಸ್ ಕ್ಲಬ್ ಬಪ್ಪನಾಡು ಇನ್ಸ್‌ಪಯರ್ ಸಂಸ್ಥೆಯ ಸ್ಥಾಪಕ ಅಧ್ಯಕ್ಷ ವೆಂಕಟೇಶ್ ಹೆಬ್ಬಾರ್, ಲಯನ್ಸ್ ಕ್ಲಬ್ ಆರೋಗ್ಯ ಕಾರ್ಯಕ್ರಮದ ಸಂಯೋಜಕ ಲಯನ್ಸ್ ಹೆಚ್.ಆರ್. ವೈದ್ಯ, ಲಯನ್ಸ್ ಹೆಚ್.ಎಸ್. ಜಗದೀಶಪ್ಪ, ಲಯನ್ಸ್ ಬಾಲಕೃಷ್ಣ, ಹಿರಿಯ ಸದಸ್ಯ ಎಂ.ಆರ್. ಕೇಶವಮೂರ್ತಿ, ಲಯನ್ಸ್ ನಜ್ಮಾ ಅಲಿ ಮತ್ತು ಜನ್ನಾ ನಿಖತ್ ಸಮಾರಂಭದಲ್ಲಿ ಉಪಸ್ಥಿತರಿದ್ದರು. ಲಯನ್ಸ್ ಕ್ಲಬ್ ಅಧ್ಯಕ್ಷ ಸಿ.ಎನ್. ಕುಮಾರ್, ಕಾರ್ಯದರ್ಶಿ ಗೋಪಿಕೃಷ್ಣ, ಖಜಾಂಚಿ ಬಿ.ಹೆಚ್. ಪರಮೇಶ್, ಲಯನ್ಸ್ ಹೆಚ್.ಆರ್. ಸಂದೇಶ್ ಮತ್ತು ಲಯನ್ಸ್ ಕ್ಲಬ್‌ನ ಬಾಲಕೃಷ್ಣ ಸ್ವಯಂಪ್ರೇರಿತರಾಗಿ ರಕ್ತದಾನ ಮಾಡಿದರು.

ಈ ಆರೋಗ್ಯ ತಪಾಸಣೆ ಶಿಬಿರದಲ್ಲಿ ಸಾಮಾನ್ಯ ಕಾಯಿಲೆ, ಇ.ಸಿ.ಜಿ. ಕಣ್ಣಿನ ತಪಾಸಣೆ ಮತ್ತು ಶಸ್ತ್ರ ಚಿಕಿತ್ಸೆ, ಶ್ವಾಸಕೋಶ ಪರೀಕ್ಷೆ, ಚರ್ಮರೋಗ ತಪಾಸಣೆ, ಹೃದಯರೋಗ ತಪಾಸಣೆ, ಸ್ತ್ರೀರೋಗ ತಪಾಸಣೆ ಹಾಗೂ ಮೂಳೆ ರೋಗ ತಪಾಸಣೆ ಸೇರಿದಂತೆ ಬಿ.ಪಿ. ಶುಗರ್ ತಪಾಸಣೆ ನಡೆಸಿಕೊಟ್ಟರು. ಈ ಬೃಹತ್ ಆರೋಗ್ಯ ತಪಾಸಣಾ ಶಿಬಿರದಲ್ಲಿ ಆಲ್ದೂರು ಸೇರಿದಂತೆ ಸುತ್ತಮುತ್ತಲ ಪ್ರದೇಶಗಳ ಮುನ್ನೂರಕ್ಕೂ ಹೆಚ್ಚು ಜನ ಶಿಬಿರದಲ್ಲಿ ಆರೋಗ್ಯ ತಪಾಸಣೆಯಲ್ಲಿ ಪಾಲ್ಗೊಂಡಿದ್ದರು.

### ಕಾರ್ಯಾಗಾರ ಉದ್ಘಾಟಿಸಿ ಜಿಪಂ ಸಿಇಒ ಮಹಮ್ಮದ್ ಹಾರೀಸ್ ಸುಮೇರ್ ಹೇಳಿಕೆ

# ಮಕ್ಕಳ ಕಾನೂನಾತ್ಮಕ ಹಕ್ಕುಗಳ ರಕ್ಷಕ ಸರ್ಕಾರ



**ಬಳ್ಳಾರಿ:** ದೇಶದ ಪ್ರತಿಯೊಂದು ಮಗು/ಮಕ್ಕಳ ಕಾನೂನಾತ್ಮಕ ಹಕ್ಕುಗಳ ರಕ್ಷಣೆಯ ಹೊಣೆ ಸರ್ಕಾರದ್ದಾಗಿದ್ದು, ಅಧೀನದ ಅಧಿಕಾರಿಗಳು ಗ್ರಾಪಂ, ತಾಪಂ ಮಟ್ಟದ ಅಧ್ಯಕ್ಷರು ಸೇರಿದಂತೆ ಪ್ರತಿಯೊಬ್ಬರೂ ಮಕ್ಕಳ ಹಕ್ಕುಗಳ ರಕ್ಷಣೆಯ ಜವಾಬ್ದಾರಿ ಹೊಂದಬೇಕಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೈರ್ ಅವರು ಹೇಳಿದರು.

ಸೋಮವಾರ ನಗರದ ಜಿಲ್ಲಾ ಪಂಚಾಯತ್‌ನ ಹೊಸ ನಜೀರ್ ಸಾಬ್ ಸಭಾಂಗಣದಲ್ಲಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಮಕ್ಕಳ ರಕ್ಷಣಾ ನಿರ್ದೇಶನಾಲಯ ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರ ಸಹಯೋಗದಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಮಹಿಳಾ ಅಧ್ಯಕ್ಷರು ಮತ್ತು ಜಿಲ್ಲಾ, ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ "ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿ" ಕುರಿತು ಏರ್ಪಡಿಸಿದ್ದ ಒಂದು ದಿನ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಅಧಿಕಾರಿಗಳು ಹೆಣ್ಣು ಮಕ್ಕಳನ್ನು ರಕ್ಷಿಸುವ ನಿಟ್ಟಿನಲ್ಲಿ ಪೋಕ್ಸೋ, ಬಾಲ್ಯವಿವಾಹ, ಬಾಲ ಗರ್ಭಿಣಿಯಂತಹ ಪ್ರಕರಣಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ಪಂಚಾಯಿತಿ ಮಟ್ಟದ ಕಾವಲು ಸಮಿತಿ ಮೂಲಕ ಕ್ರಮ ವಹಿಸಲಾಗಿದೆ ಎಂದು ತಿಳಿಸಿದರು.

ಕಾವಲು ಸಮಿತಿಯನ್ನು ಉತ್ತೇಜಿಸಿದರೆ ಬಾಲ್ಯ ವಿವಾಹ, ಪೋಕ್ಸೋ ಪ್ರಕರಣಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಬಹುದು. ಒಂದು ಹೆಣ್ಣಿಗೆ ಮದುವೆ 18 ವರ್ಷದ ಬಳಿಕವೇ ಎಂದು ಕಾನೂನಿದೆ. ಕೆಲವೊಂದು ಕಾರಣಗಳಿಂದ ಬಾಲ್ಯ ವಿವಾಹವಾಗಿ ಮುಂದೆ ಕಷ್ಟಪಡುತ್ತಿರುವ ಘಟನೆಗಳು ನಮ್ಮ ಕಣ್ಣ ಮುಂದಿವೆ. ಇಂತಹ ಸಮಸ್ಯೆಗಳಿಗೆ ಹೆಣ್ಣು ಮಕ್ಕಳು ಒಳಗಾಗದಂತೆ ನಾವು ನೋಡಿಕೊಳ್ಳಬೇಕು ಎಂದರು.

ಹಾಗಾಗಿ ಹೆಣ್ಣು ಮಕ್ಕಳು ಅಕಾಲಿಕ ಗರ್ಭಧಾರಣೆಗೆ ಒಳಗಾಗುವಂತಹ ಪರಿಸ್ಥಿತಿ ನಿರ್ಮಾಣವಾಗದಂತೆ, ಶೋಷಣೆಗೆ ಒಳಗಾಗದಂತೆ ಮುಂಜಾಗ್ರತೆ ವಹಿಸುವುದು ನಮ್ಮೆಲ್ಲರ ಜವಾಬ್ದಾರಿ ಎಂದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸುಭದ್ರಾ ದೇವಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಮಕ್ಕಳ ಹಕ್ಕುಗಳು ಮತ್ತು ಬಾದ್ಯತೆಗಳನ್ನು ರಕ್ಷಿಸುವ ಕೆಲಸವಾಗಬೇಕಿದೆ. ಈ ಕುರಿತು ಜನರಿಗೆ ಅರಿವು ಮೂಡಿಸಬೇಕು. ಜಿಲ್ಲೆಯಲ್ಲಿ (ಏಪ್ರಿಲ್ ನಿಂದ ಇಲ್ಲಿಯವರೆಗೆ) 83 ಬಾಲ್ಯವಿವಾಹ ನಡೆದಿವೆ. ಅದರಲ್ಲಿ 64 ಬಾಲ್ಯವಿವಾಹಗಳನ್ನು ತಡೆಯಲಾಗಿದೆ. 19 ಪ್ರಕರಣ ಬಾಲ್ಯವಿವಾಹ ಮತ್ತು ಪೋಕ್ಸೋ ಒಳಗೊಂಡಿದ್ದು, 9 ಪ್ರಕರಣಗಳಿಗೆ ಎಫ್‌ಐಆರ್ ದಾಖಲಿಸಲಾಗಿದೆ. 10 ಪ್ರಕರಣ ಎಫ್‌ಐಆರ್ ದಾಖಲಿಸಲು ಬಾಕಿ ಇವೆ ಎಂದು ತಿಳಿಸಿದರು.

ಕಾರ್ಯಾಗಾರದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಉಚಿತ ಕಾನೂನು ಸೇವೆಯ ಸಹಾಯವಾಣಿ ಸಂಖ್ಯೆ 15100 ಕುರಿತ ಭಿತ್ತಿಪತ್ರ ಬಿಡುಗಡೆ ಮಾಡಲಾಯಿತು.

ಕೊಪ್ಪಳದ ಮಕ್ಕಳ ಸಂರಕ್ಷಣಾ ಯೋಜನೆಯ ಯುನಿಸೆಫ್ ಪ್ರಾದೇಶಿಕ ಸಂಯೋಜಕ ಡಾ.ರಾಘವೇಂದ್ರ ಭಟ್ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ 'ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿ ಹಾಗೂ ಬಾಲನ್ಯಾಯ ಕಾಯ್ದೆ, ಬಾಲ್ಯವಿವಾಹ ನಿಷೇಧ ಕಾಯ್ದೆ, ಪೋಕ್ಸೋ ಕಾಯ್ದೆ' ಕುರಿತು ಸವಿವರವಾಗಿ ತಿಳಿಸಿಕೊಟ್ಟರು.

ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ನವೀನ್ ಕುಮಾರ್, ಜಿಲ್ಲಾ ಪಂಚಾಯತ್‌ನ ಉಪ ಕಾರ್ಯದರ್ಶಿ ಶಶಿಕಾಂತ ಶಿವಪೂರೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಮಕೃಷ್ಣ ನಾಯಕ, ಮಕ್ಕಳ ಕಲ್ಯಾಣ ಸಮಿತಿಯ ಸದಸ್ಯರಾದ ಕಲಾವತಿ ಸೇರಿದಂತೆ ವಿವಿಧ ಗ್ರಾಪಂ ಮಹಿಳಾ ಅಧ್ಯಕ್ಷರು, ತಾಪಂ ಇಒ, ಗ್ರಾಪಂ ಪಿಡಿಒ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ರಕ್ಷಣಾಧಿಕಾರಿ (ಸಾಂಸ್ಥಿಕ ಸೇವೆ) ದೊಡ್ಡನಗೌಡ್ರು ಮಂಜುನಾಥ ಕಾರ್ಯಾಗಾರ ನಿರೂಪಿಸಿದರು. ಮಕ್ಕಳ ರಕ್ಷಣಾಧಿಕಾರಿ (ಅಸಾಂಸ್ಥಿಕ ಸೇವೆ) ಚನ್ನಬಸಪ್ಪ ಪಾಟೀಲ್ ಸ್ವಾಗತಿಸಿದರು. ಕಾನೂನು ಪರಿವೀಕ್ಷಣಾಧಿಕಾರಿ ಈಶ್ವರ್ ರಾವ್.ಸಿ ವಂದಿಸಿದರು.

## ಒಂದು ದಿನದ ಅರಿವು ಮೂಡಿಸುವ ಕಾರ್ಯಕ್ರಮ

**ಗದಗ :** ಕರ್ನಾಟಕ ಸರ್ಕಾರ ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ, ಗದಗ ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನಾ ಕೇಂದ್ರ ವಿಟಿಪಿಸಿ ಹಾಗೂ ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘ ಸಹಯೋಗದಲ್ಲಿ ಎಂಎಸ್‌ಎಂಇಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವುದು ಮತ್ತು ವೇಗಗೊಳಿಸುವುದು (ಆರ್‌ಎಎಮ್‌ಪಿ) ಯೋಜನೆಯಡಿಯಲ್ಲಿ ಸೆಪ್ಟಂಬರ್ 23 ರಂದು ಬೆಳಗ್ಗೆ 10 : 30 ಘಂಟೆಗೆ ನಗರದ ಎಪಿಎಂಸಿ ರಸ್ತೆಯಲ್ಲಿನ ವಾಣಿಜ್ಯೋದ್ಯಮ ಸಂಸ್ಥೆಯ ಸಭಾಂಗಣದ ವಾಣಿಜ್ಯೋದ್ಯಮ ಭವನದಲ್ಲಿ ಝಡ್‌ಇಡಿ ಲೀನ್ ಯೋಜನೆ ಹಾಗೂ ರಫ್ತು ಕುರಿತು ಒಂದು ದಿನದ ಅರಿವು ಮೂಡಿಸುವ ಕಾರ್ಯಕ್ರಮ ನಡೆಯುವುದು.

ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಸಿ ಎನ್ ಶ್ರೀಧರ ಉದ್ಘಾಟಿಸುವರು.ಗೌರವಾನ್ವಿತ ಅತಿಥಿಗಳಾಗಿ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷರಾದ ತಾತನಗೌಡ ಎಸ್ ಪಾಟೀಲ್, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಟಿ.ಎಸ್.ಮಲ್ಲಿಕಾರ್ಜುನ ಅವರುಗಳು ಆಗಮಿಸುವರು. ಕಾಸಿಯಾದ ಅಧ್ಯಕ್ಷರಾದ ಗಣೇಶರಾವ್‌ಬಿ ಆರ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.ಕೈಗಾರಿಕೋದ್ಯಮಿಗಳು ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳುವಂತೆ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಪ್ರಕಟಣೆ ತಿಳಿಸಿದೆ.

## ಕಂಪ್ಲಿ ಪುರಸಭೆ: ವಿವಿಧ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

**ಬಳ್ಳಾರಿ:** ಕಂಪ್ಲಿ ಪುರಸಭೆ ವತಿಯಿಂದ 2025–26ನೇ ಸಾಲಿನ ಎಸ್.ಎಫ್.ಸಿ ಶೇ.7.25 (ಇತರೆ ಹಿಂದುಳಿದವರ ಕಲ್ಯಾಣಕ್ಕಾಗಿ) ಹಾಗೂ ಶೇ.5 (ವಿಕಲಚೇತನರ)ರ ವೈಯಕ್ತಿಕ ಸೌಲಭ್ಯದಡಿ ವಿವಿಧ ಯೋಜನೆಗಳಡಿ ಸಹಾಯಧನ ನೀಡಲು ಉದ್ದೇಶಿಸಲಾಗಿದ್ದು, ಕಂಪ್ಲಿ ಪಟ್ಟಣದ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.
ಹಿಂದುಳಿದ ವರ್ಗಗಳ ಸಮುದಾಯದವರು ಮತ್ತು ವಿಕಚೇತನರು ವಿವಿಧ ಹಂತಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿಶೇಷ ನೆರವು ನೀಡಲಾಗುವುದು. ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಲು ಸೆ.30 ಕೊನೆಯ ದಿನವಾಗಿದೆ.
*ಬೇಕಾದ ದಾಖಲೆ:*
ನಿಗದಿತ ಅರ್ಜಿ ನಮೂನೆ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಐ.ಡಿ ಕಾರ್ಡ್, 3 ಭಾವಚಿತ್ರ, ಪ್ರಸಕ್ತ ಸಾಲಿನ ವಿದ್ಯಾಭ್ಯಾಸದ ಪ್ರಮಾಣ ಪತ್ರ, ಹಿಂದುಳಿದ ಕಲ್ಯಾಣ ಇಲಾಖೆ ಮತ್ತು ಸಮಾಜ ಕಲ್ಯಾಣ ಇಲಾಖೆಯಿಂದ ಯಾವುದೇ ಸೌಲಭ್ಯ ಪಡೆಯದೇ ಇರುವ ಬಗ್ಗೆ ಪ್ರಮಾಣ ಪತ್ರ ಹಾಗೂ ಇತರೆ ದಾಖಲೆಗಳು ಸಲ್ಲಿಸಬೇಕು.ಹೆಚ್ಚಿನ ಮಾಹಿತಿಗಾಗಿ ಕಂಪ್ಲಿ ಪುರಸಭೆ ಕಚೇರಿಗೆ ಭೇಟಿ ನೀಡಬಹುದು ಎಂದು ಕಂಪ್ಲಿ ಪುರಸಭೆ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪರಿಶಿಷ್ಟರ ವಿಷಯದಲ್ಲಿ ನಿರ್ಲಕ್ಷ್ಯ; ಅಕ್ಷಮ್ಯ ಅಪರಾಧ ಆಂಜನೇಯ ಆಕ್ರೋಶ

**ಚಿತ್ರದುರ್ಗ:** ಹಿಂದುಳಿದ ವರ್ಗಗಳ ಆಯೋಗಕೈಗೊಂಡಿರುವಜಾತಿಗಣತಿ ಸಮೀಕ್ಷೆಕಾರ್ಯದಲ್ಲಿ ಪರಿಶಿಷ್ಟರಿಗೆ ಸೀಮಿತಗೊಳಿಸಿ ಕ್ರಿಶ್ಚಿಯನ್ ಪದ ಜೋಡಿಸಿರುವುದು ಅತ್ಯಂತಅಪಾಯಕಾರಿ ನಡೆಯಾಗಿದೆಎಂದು ಮಾಜಿ ಸಚಿವ ಹೆಚ್.ಆಂಜನೇಯದೂರಿದರು.

ನಗರದ ಪ್ರವಾಸಿಮಂದಿರದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಹಿಂದುಳಿದ, ಮೇಲ್ವರ್ಗದ ಆಕ್ಷೇಪಗಳಿಗೆ ಮನ್ನಣೆ ನೀಡಿಅವರಜಾತಿಜೊತೆಗೆ ಕ್ರಿಶ್ಚಿಯನ್ ಪದಕೈಬಿಡಲಾಗಿದೆ.ಆದರೆ, ಪರಿಶಿಷ್ಟ ಜಾತಿ ವಿಷಯದಲ್ಲಿ ನಿರ್ಲಕ್ಷ್ಯ ವಹಿಸುವುದುಅಕ್ಷಮ್ಯಅಪರಾಧಎಂದುಆಕ್ರೋಶ ವ್ಯಕ್ತಪಡಿಸಿದರು.

ಎಸ್ಸಿ ಜನರುಎಲ್ಲರೀತಿಯಿಂದಲೂ ನಿರ್ಲಕ್ಷ್ಯಕ್ಕೆ ಒಳಗಾಗಿರುವ ವರ್ಗ. ಈ ಗುಂಪಿಗೆ

ನ್ಯಾಯಯುತವಾಗಿಎಲ್ಲ ಹಕ್ಕುಗಳು, ಸೌಲಭ್ಯಗಳನ್ನು ನೀಡಲು ಸಮೀಕ್ಷೆಕಾರ್ಯ

ಪಾರದರ್ಶಕವಾಗಿ

ನಡೆಯಬೇಕು. ಈಕಾರಣಕ್ಕೆ ನ್ಯಾ.ನಾಗಮೋಹನ್‌ದಾಸ್‌ಆಯೋಗ ನಡೆಸಿದ ಗಣತಿಯಲ್ಲಿಧರ್ಮದ ಕಾಲಂ ಇರಲಿಲ್ಲ. ಆದರೆ, ಈಗ ಧರ್ಮದ ಕಲಂ ಸೇರಿಸಿರುವುದೇ ತಪ್ಪು. ಮೀಸಲಾತಿಜಾತಿಆಧಾರಿತವಾಗಿದ್ದು, ಧರ್ಮ ಕೇಳುವ ಅಗತ್ಯವೇಇರಲಿಲ್ಲ ಎಂದರು.



ಒಂದೆಡೆ ಹಿಂದೂಎಂದು ಬರೆಸುವಂತೆ ಬಿಜೆಪಿ ಬೊಬ್ಬೆ ಹಾಕುತ್ತಿದೆ. ಈ ಮಧ್ಯೆಆಯೋಗಮಾದಿಗ ಕ್ರಿಶ್ಚಿಯನ್, ಛಲವಾದಿ ಕ್ರಿಶ್ಚಿಯನ್ ಹೀಗೆ ಪರಿಶಿಷ್ಟ ಜಾತಿಗಳನ್ನು

ಗುರುತಿಸುವ ಕೆಲಸ ಮಾಡುತ್ತಿದೆ. ಇದು ಎಸ್ಸಿಗಳ ಜನಸಂಖ್ಯೆ ಕುಗ್ಗಿಸುವ ಕೆಲಸ ಆಗಲಿದೆ.ಒಂದೊಮ್ಮೆಯಾವುದೇಜಾತಿಯವರು ಮತಾಂತರಗೊಂಡಿದ್ದರೇಅವರು ಆ ಧರ್ಮವನ್ನೇಬರೆಸುತ್ತಾರೆ.ಇಂತಹ ಸಂದರ್ಭಅನಗತ್ಯವಾಗಿಗೊಂದಲ ಉಂಟು ಮಾಡುವ ಕೆಲಸ ಆಯೋಗಮಾಡುತ್ತಿದೆಎಂದು

ಆರೋಪಿಸಿದರು.

ಈ ಕೂಡಲೇ ಪರಿಶಿಷ್ಟ ಜಾತಿಜೊತೆಗೆ ಕ್ರಿಶ್ಚಿಯನ್ ಪದತೆಗೆದು ಸಮೀಕ್ಷೆಕಾರ್ಯಆರಂಭಿಸಬೇಕು. ಇಲ್ಲದಿದ್ದರೇಆಯೋಗದ ವಿರುದ್ಧ ಹೋರಾಟ ನಡೆಸಬೇಕಾಗುತ್ತದೆಎಂದು ಎಚ್ಚರಿಸಿದರು.ಮಾದಿಗ, ಛಲವಾದಿಗಳು ಅಸ್ಪೃಶ್ಯದ ಸಂಕೋಲೆಯಿಂದ ತಪ್ಪಿಸಿಕೊಳ್ಳಲು ಚರ್ಚ್‌ಗೆ ಹೋಗಿ ಪ್ರಾರ್ಥನೆ ಮಾಡುವುದು, ಕ್ರಿಶ್ಚಿಯನ್ ಧರ್ಮಆಚರಣೆ ಮಾಡುತ್ತಾರೆ.ಆದರೆ, ಅವರ್‍ಯಾರೂತಮ್ಮ ಮೂಲ ಜಾತಿಯಿಂದ ಹೊರಹೋಗಿರುವುದಿಲ್ಲ. ಅಂತವರನ್ನು ಮೀಸಲಾತಿಯಿಂದಲೇ ಹೊರಗಿಡುವ ಕೆಲಸ ಆಯೋಗಮಾಡುತ್ತಿರುವುದು ಸರಿಯಲ್ಲ. ಅಸ್ಪೃಶ್ಯ ನೋವು ಅರಿತುಕೊಳ್ಳಬೇಕು.ಒಂದೊಮ್ಮೆ

.ಅವರನ್ನುದಾರಿತಪ್ಪಿಸುವರೀತಿ ಮಾಡಬಾರದುಎಂದುತಿಳಿಸಿದರು.

ಒಳಮೀಸಲಾತಿ ಸಂಬಂಧ ಈಚೆಗೆ ಪರಿಶಿಷ್ಟರಿಗೆ ಸೀಮಿತಗೊಳಿಸಿ ಸಮೀಕ್ಷೆ ನಡೆಸಿ, ಕೆಲವೇ ತಿಂಗಳು ಆಗಿವೆ. ಮೂರೇ ತಿಂಗಳಲ್ಲಿ ಜನಸಂಖ್ಯೆಏರುಪೇರುಆಗಿರುವುದಿಲ್ಲ. ಈ ಕಾರಣಕ್ಕೆಎಸ್ಸಿಗಳನ್ನು ಹೊರಗಿಟ್ಟು ಸಮೀಕ್ಷೆ ನಡೆಸಿದ್ದರೇ ಸಿಬ್ಬಂದಿಗೆ ಕೆಲಸ, ಸರ್ಕಾರದಬೊಕ್ಕಸಕ್ಕೆ ಹೊರೆಕಡಿಮೆಆಗುತ್ತಿತ್ತು.

ಆಯೋಗದಲ್ಲಿರುವವರು ಸ್ವಲ್ಪಜ್ಞಾನ ಬಳಕೆ ಮಾಡಬೇಕಾಗಿತ್ತು.ನ್ಯಾ.ನಾಗ ಮೋಹನ್‌ದಾಸ್‌ಆಯೋಗ ವರದಿ ಕೊಡುವುದಕ್ಕಿಂತಲೂ ಮುಂಚೆ ಎಲ್ಲವೂ ಸರಿಯಿದೆಎನ್ನುತ್ತಿದ್ದವರು ಈಗ ತಕರಾರುತೆಗೆದುಕೋರ್ಟ್ ಮೊರೆ ಹೋಗುವ ಕೆಲಸ ಮಾಡುತ್ತಿದ್ದಾರೆಎಂದು ಬೇಸರ ವ್ಯಕ್ತಪಡಿಸಿದರು.

ಒಳಮೀಸಲಾತಿ ಹಂಚಿಕೆಜನಸಂಖ್ಯೆಗಿಂತಲೂಹಿಂದುಳಿಯುವಿಕೆ ಆಧಾರದಡಿ ನೀಡಲಾಗಿದೆ.ಛಲವಾದಿ ಸಮಾನಂತರಜಾತಿವರನ್ನುಅವರ ನಿಕೃಷ್ಟಬದುಕಿನಕಾರಣಕ್ಕೆ ಮಾದಿಗ ಗುಂಪಿಗೆ ಸೇರಿಸಿದ್ದರು. ಇದನ್ನುತಪ್ಪುಅರ್ಥ ಮಾಡಿಕೊಂಡುಗೊಂದಲದ ಹೇಳಿಕೆಗಳನ್ನು ನೀಡಲಾಯಿತು.ಪರಿಶಿಷ್ಟ ಜಾತಿಯ ಸಚಿವರೆಲ್ಲರೂಒಮ್ಮತದಚರ್ಚೆಬಳಿಕ ಒಳಮೀಸಲಾತಿ ಜಾರಿಗೊಂಡಿದ್ದು, ಮಾದಿಗರಿಗೆ ಶೇ.7 ಮೀಸಲಾತಿ ಸಿಗ್‌ಬೇಕಿತ್ತು.ಆದ್ರೂಏನೂ ಇಲ್ಲದ ನಮಗೆ ಶೇ.6 ಮೀಸಲಾತಿ ನೀಡಿರುವುದನ್ನೇಒಪ್ಪಿಕೊಂಡಿದ್ದೇವೆ. ಆದರೆ, ನಮಗಿಂತಲೂಆರ್ಥಿಕ, ಶೈಕ್ಷಣಿ, ಔದ್ಯೋಗಿಕವಾಗಿ ಹೆಚ್ಚು ಲಾಭ ಪಡೆದವರೇ ಈಗ ಅನಗತ್ಯವಾಗಿ ಹೇಳಿಕೆ ನೀಡುವ ಕೆಲಸ ಮಾಡುತ್ತಿದ್ದಾರೆಎಂದರು.

ಸಾಹಿತಿದೇವನೂರು

ಮಹಾದೇವ್‌ಅಂತಹ ಹಿರಿಯರೇ ನಾಗಮೋಹನ್‌ದಾಸ್‌ಆಯೋಗದ ವರದಿ ವೈಜ್ಞಾನಿಕವಾಗಿದೆಎಂದು ಹೇಳಿದ್ದರೂ, ಅಂಬೇಡ್ಕರ್ ವಾರಸುದಾರರಂತೆ ವರ್ತಿಸುವವರೇ ಸಂವಿಧಾನದಆಶಯದ ವಿರುದ್ಧ ಹೇಳಿಕೆ ನೀಡುತ್ತಿರುವುದು ಸರಿಯಲ್ಲ. ನಾವೆಲ್ಲರೂ ಸಹೋದರರರೀತಿ ಬದುಕಬೇಕು.ಅಲೆಮಾರಿಗಳ

ಬದುಕುಉತ್ತಮಪಡಿಸಲು ಸರ್ಕಾರದ ಮೇಲೆ ಒತ್ತಡತರಬೇಕಿದೆಎಂದರು.5 ಲಕ್ಷಜನರುಆದಿಕನಾಟಕ, ಆದಿದ್ರಾವಿಡ, ಆದಿಆಂಧ್ರಎಂದು ಬರೆಯಿಸಿದ್ದೂ, ಅವರೆಲ್ಲರೂಮೀಸಲಾತಿ ಪಡೆಯಲುತಮ್ಮ ಮೂಲ ಜಾತಿಯಲ್ಲಿ ಗುರುತಿಸಿಕೊಳ್ಳಬೇಕು. ಇಲ್ಲದಿದ್ದರೇಚಿಪ್ಪೇಗತಿಎಂದುಆಂಜನೇಯ ಎಚ್ಚರಿಸಿದರು.

ಈಗ ಜಾತಿಗಣತಿ ವೇಳೆಯಾದರೂ ಮೂಲ ಜಾತಿಬರೆಯಿಸಿ, ಒಳಮೀಸಲಾತಿ ಸೌಲಭ್ಯ ಪಡೆಯಬೇಕು. ಹಟ್ಟಿ, ಕಾಲೋನಿ, ನಗರ ಪ್ರದೇಶದಲ್ಲಿಇನ್ನಷ್ಟುಅಭಿಯಾನ, ಜಾಗೃತಿ ನಡೆಸಿ ಜಾತಿ ಮಾದಿಗ, ಧರ್ಮ ಹಿಂದೂಎಂದೇ ಬರೆಯಿಸುವಂತೆ

ಮಾಡಬೇಕು. ಈ ಮೂಲಕ ನಮ್ಮಜನಸಂಖ್ಯೆ ಕುಗ್ಗಿಸುವ ಷಡ್ಯಂತರಕ್ಕೆತಕ್ಕಉತ್ತರ

ನೀಡಬೇಕೆಂದರು.

ಪತ್ರಿಕಾಗೋಷ್ಠಿಯಲ್ಲಿವಕೀಲ ರವೀಂದ್ರ, ಜಿಪಂ ಮಾಜಿ ಸದಸ್ಯ ಆರ್.ನರಸಿಂಹರಾಜು ಇತರರಿದ್ದರು.

# ತಿರುಪತಿ ದೇವಸ್ಥಾನದ ಹುಂಡಿಯಲ್ಲಿ 100 ಕೋಟಿ ಹಣ ಕಳ್ಳತನ

ತಿರುಪತಿ: ಮಾಜಿ ಮುಖ್ಯಮಂತ್ರಿ ವೈ.ಎಸ್. ಜಗನ್ ಮೋಹನ್ ರೆಡ್ಡಿ ನೇತೃತ್ವದ ವೈಎಸ್‌ಆರ್‌ಪಿ ಕಾಂಗ್ರೆಸ್ ಆಡಳಿತದ ಅವಧಿಯಲ್ಲಿ ತಿರುಪತಿ ದೇವಸ್ಥಾನದ ಪರಕಾಮಣಿ (ಹುಂಡಿಯಲ್ಲಿ ಭಕ್ತರು ಹಾಕಿದ್ದ) 100 ಕೋಟಿಗೂ ಅಧಿಕ ಹಣ ಕಳ್ಳತನವಾಗಿದೆ ಎಂದು ಬಿಜೆಪಿ ಮುಖಂಡರೊಬ್ಬರು ಆರೋಪಿಸಿದ್ದಾರೆ. ತಿರುಮಲ ತಿರುಪತಿ ದೇವಸ್ಥಾನಂ(ಟಿಟಿಡಿ) ಸದಸ್ಯರೂ ಆಗಿರುವ ಬಿಜೆಪಿ ಮುಖಂಡ ಭಾನುಪ್ರಕಾಶ್ ರೆಡ್ಡಿ, ದೇವಸ್ಥಾನದ ಸಿಬ್ಬಂದಿ ರವಿಕುಮಾರ್ ಕಾಣಿಕೆ ಪೆಟ್ಟಿಗೆಯಿಂದ ಹಣ ಕದ್ದಿದ್ದಾರೆ ಎಂದು ಆರೋಪಿಸಿದ್ದು, ಈ ಸಂಬಂಧ ಸಿಸಿಟಿವಿ ದೃಶ್ಯಾವಳಿಗಳನ್ನು ಬಿಡುಗಡೆ ಮಾಡಿದ್ದಾರೆ.

ಲೂಟಿ ಮಾಡಿದ ಹಣವನ್ನು ಬಳಸಿಕೊಂಡು ರಿಯಲ್ ಎಸ್ಟೇಟ್‌ನಲ್ಲಿ ಕೋಟ್ಯಂತರ ರೂ. ಹೂಡಿಕೆ ಮಾಡಲಾಗಿದೆ. ಅಕ್ರಮ ಹಣವನ್ನು ಜಗನ್‌ರೆಡ್ಡಿ ಅವರ ಮನೆ, ತಾಡೆಪಲ್ಲಿ ಪ್ಯಾಲೇಸ್‌ಗೆ ವರ್ಗಾಯಿಸಲಾಗಿದೆ ಎಂದು ಆರೋಪಿಸಲಾಗಿದೆ. 2019ರಿಂದ 2024ರವರೆಗೆ ವೈಎಸ್‌ಆರ್‌ಪಿ ಆಡಳಿತದಲ್ಲಿ ಟಿಟಿಡಿಯ ಇತಿಹಾಸದಲ್ಲಿ ಅತ್ಯಧಿಕ 100 ಕೋಟಿ ರೂ. ಲೂಟಿ ಮಾಡಲಾಗಿದೆ ಎಂದು ಆರೋಪಿಸಿದ್ದಾರೆ.ಬಿಜೆಪಿ ನೇತೃತ್ವದ ಎನ್‌ಡಿಎಗೆ ಸೇರಿರುವ ಟಿಡಿಪಿ ನಾಯಕ ನಾರಾ ಲೋಕೇಶ್ ತಮ ಎಕ್ ಖಾತೆಯಲ್ಲಿ ಲೂಟಿ ತೋರಿಸುತ್ತಿರುವ ಸಿಸಿಟಿವಿ ದೃಶ್ಯಗಳನ್ನು ಹಂಚಿಕೊಂಡಿದ್ದಾರೆ. ವೈಎಸ್‌ಆರ್‌ಪಿ ಆಡಳಿತದಲ್ಲಿ ಭಕ್ತರು ಕಾಣಿಕೆಯಾಗಿ ಹುಂಡಿಗೆ ಹಾಕಿದ್ದ ಹಣವನ್ನು ಲೂಟಿ ಮಾಡಲಾಗಿದೆ ಎಂದು ಅವರು ಹೇಳಿದ್ದಾರೆ. ಹೈಕೋರ್ಟ್ ಪ್ರಕರಣವನ್ನು ಸಿಐಡಿಗೆ ವರ್ಗಾಯಿಸಿದ್ದು, ಒಂದು ತಿಂಗಳೊಳಗೆ ತನಿಖೆ ಮತ್ತು ಮುಚ್ಚಿದ ಕವರ್ ವರದಿಯನ್ನು ಆದೇಶಿಸಿದೆ. ಮಂಡಳಿಯ ನಿರ್ಧಾರಗಳು ಮತ್ತು ಸಂಬಂಧಿತ ದಾಖಲೆಗಳನ್ನು ವಶಪಡಿಸಿಕೊಳ್ಳುವಂತೆ ಸೂಚಿಸಲಾಗಿದೆ ಎಂದು ರೆಡ್ಡಿ ಆರೋಪಿಸಿದ್ದಾರೆ.

# ದೇವಸ್ಥಾನ, ಹಬ್ಬಕ್ಕೆ ದೇಣಿಗೆ ಕೇಳುವಂತೆ ಶಾಲೆಗಳ ಅಭಿವೃದ್ಧಿಗೆ ಅನುದಾನ ಪಡೆಯಿರಿ: ಜಿ. ಬಿ. ವಿನಯ್ ಕುಮಾರ್ ಸಲಹೆ



**ದಾವಣಗರೆ:** ದೇವಸ್ಥಾನ, ಹಬ್ಬಗಳಿಗೆ ದೇಣಿಗೆ ಕೇಳುವಂತೆ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಹೆಚ್ಚಿನ ಅನುದಾನ ಕೇಳಬೇಕು. ಗ್ರಾಮೀಣ ಪ್ರದೇಶದ ಮಕ್ಕಳ ಉಜ್ವಲ ಭವಿಷ್ಯಕ್ಕಾದರೂ ಈ ಕಾರ್ಯ ಮುತುವರ್ಜಿಯಿಂದ ಆಗಬೇಕಿದೆ ಎಂದು ಇನ್ ಸೈಟ್ಸ್ ಸಂಸ್ಥೆ ಸಂಸ್ಥಾಪಕ ನಿರ್ದೇಶಕರೂ ಆದ ಸ್ವಾಭಿಮಾನಿ ಬಳಗದ ರಾಜ್ಯಾಧ್ಯಕ್ಷ ಜಿ. ಬಿ. ವಿನಯ್ ಕುಮಾರ್ ಅವರು ಪ್ರತಿಪಾದಿಸಿದರು.

ಜಿಲ್ಲೆಯ ಜಗಳೂರು ತಾಲೂಕಿನ ಭರಮಸಮುದ್ರ ಗ್ರಾಮದ ಶ್ರೀ ಯಲ್ಲಮ್ಮದೇವಿ ದೇವಸ್ಥಾನದ ಆವರಣದಲ್ಲಿ ಹಮ್ಮಿಕೊಂಡಿದ್ದ ಕೆರೆಗೆ ಗಂಗಾ ಪೂಜೆ ಹಾಗೂ ಬಾಗಿನ ಅರ್ಪಣೆಯ ಕಾರ್ಯಕ್ರಮದಲ್ಲಿ ವಿಶೇಷ ಆಹ್ವಾನಿತರಾಗಿ ಭಾಗವಹಿಸಿ ಅವರು ಮಾತನಾಡಿದರು.

ಹಳ್ಳಿಗಳಲ್ಲಿ ಶುದ್ಧ ಗಾಳಿ, ಸಮೃದ್ಧವಾದ ಕೆರೆ ಹಾಗೂ ನೈರ್ಮಲ್ಯವೂ ಪರಿಶುದ್ಧವಾಗಿರಬೇಕು. ನಾವು ಅಷ್ಟೇ ಆದ್ಯತೆ ಶಿಕ್ಷಣಕ್ಕೂ ನೀಡಬೇಕಾಗಿದೆ. ಹಳ್ಳಿ ಎಂದ ಮೇಲೆ ಸುಸಜ್ಜಿತ ಗ್ರಂಥಾಲಯ ಇರಬೇಕು. ಎಷ್ಟೋ ಗ್ರಾಮಗಳಲ್ಲಿ ಲೈಬ್ರರಿ ಇರುವುದಿಲ್ಲ. ಶಿಕ್ಷಣ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಯಾರೇ ಹಣ ಕೇಳಿದಾಗ ಕೈಯಲ್ಲಾದಷ್ಟು ಸಹಾಯವನ್ನು ಖಂಡಿತವಾಗಿಯೇ ಮಾಡಿಯೇ ಮಾಡುತ್ತೇನೆ. ಈ ಹಿಂದೆಯೂ ಮಾಡಿದ್ದೇನೆ, ಮುಂದೆಯೂ ಸಾಧ್ಯವಾದಷ್ಟು ಸಹಾಯಕ್ಕೆ ಸಿದ್ಧನಿದ್ದೇನೆ ಎಂದು ತಿಳಿಸಿದರು.

ಶಾಲೆಗಳಿಗೆ ಡೆಸ್ಕ್, ಗ್ರಂಥಾಲಯಕ್ಕೆ ಪುಸ್ತಕ ಕೊಡಿಸುವುದು, ಮಕ್ಕಳ ಶಾಲಾ ಶುಲ್ಕ ಕಟ್ಟಲು ಸಹಾಯ ಮಾಡಿದ್ದೇನೆ. ಹಳ್ಳಿಗಳು ಅಭಿವೃದ್ಧಿ ಆಗಬೇಕು. ಯಾಕೆಂದರೆ ಮುಂದಿನ ಪೀಳಿಗೆ ಚೆನ್ನಾಗಿರಲಿ ಎಂದು ಪೋಷಕರು ಕನಸು ಕಂಡಿರುತ್ತಾರೆ. ಇದು ಸಾಧ್ಯವಾಗಬೇಕಾದರೆ ಬೇಕಾಗಿರುವುದು ಅತ್ಯುತ್ತಮ ಶಿಕ್ಷಣ. ಮುಂದೊಂದು ದಿನ ತಮ್ಮ ಮಕ್ಕಳು ಸರ್ಕಾರಿ ಉದ್ಯೋಗ, ವೈದ್ಯರು, ಎಂಜಿನಿಯರ್ ಆಗಬೇಕೆಂಬ ಕನಸು ಕಂಡ ಪೋಷಕರ ಕನಸು ನನಸು ಮಾಡಲು ಮಕ್ಕಳು ಚೆನ್ನಾಗಿ ಓದಿ ಉನ್ನತ ಹುದ್ದೆಗೆ ಹೋಗುವ ಮೂಲಕ ನನಸಾಗಿಸಬೇಕು ಎಂದು ಕರೆ ನೀಡಿದರು.

ಈ ಗ್ರಾಮದಲ್ಲಿ ಸಾಮರಸ್ಯ ನೋಡಿ ಖುಷಿಯಾಯಿತು. ಗೌಡರು, ಹರಿಜನ, ಸವಿತಾ, ಬೋವಿ, ಕಮ್ಮಾರ ಸೇರಿದಂತೆ ಎಲ್ಲಾ ಜಾತಿಯವರು ಮತ್ತು ಧರ್ಮದವರು ಪಾಲ್ಗೊಂಡಿದ್ದಾರೆ. ಇದು ಉತ್ತಮ ಬೆಳವಣಿಗೆ ಎಂದು ಜಿ. ಬಿ. ವಿನಯ್ ಕುಮಾರ್ ಅವರು ಹೇಳಿದರು.

ಕೃಷಿ ಮತ್ತು ನೀರಾವರಿ, ಅಂತರ್ಜಲ ಪುನರ್ಭರ್ತಿ, ಪ್ರವಾಹ ನಿಯಂತ್ರಣ, ಜೀವವೈವಿಧ್ಯತೆ ಸಂರಕ್ಷಣೆ ಮತ್ತು ಆರ್ಥಿಕ ಚಟುವಟಿಕೆಗಳ ಮೂಲವಾಗಿರುವ ಕೆರೆಗಳ ಉಳಿವು ಆಗಬೇಕು. ಈ ನೀರು ಸಂರಕ್ಷಿಸಬೇಕು. ಅನಾವಶ್ಯಕವಾಗಿ ನೀರು ಪೋಲಾಗುವುದನ್ನು ತಪ್ಪಿಸಬೇಕು. ಯುವ ಸಮುದಾಯದ ಈ ನಿಟ್ಟಿನಲ್ಲಿ ಶ್ರಮಿಸಬೇಕು ಎಂದು ಅವರು ಹೇಳಿದರು.

ಮಟ್ಟೂರು ಶ್ರೀ ಓಂಕಾರೇಶ್ವರ ಮಠದ ಶ್ರೀ ಷ|| ಬ್ರ|| ರುದ್ರಮುನಿ ಶಿವಾಚಾರ್ಯ ಮಹಾಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸಿದ್ದ ಈ ಕಾರ್ಯಕ್ರಮವನ್ನು ಜಗಳೂರು ಶಾಸಕ ಬಿ. ದೇವೇಂದ್ರಪ್ಪ ಉದ್ಘಾಟಿಸಿದರು. ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಗಳೂರು ತಾಲೂಕು ಘಟಕದ ಎನ್. ಸಿ. ಅಜ್ಜಯ್ಯ ನಾಡಿಗರ್ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಮಾಜಿ ಶಾಸಕರಾದ ಎಸ್. ವಿ. ರಾಮಚಂದ್ರ, ಹೆಚ್.ಪಿ. ರಾಜೇಶ್, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಕೆ. ಪಿ. ಪಾಲಯ್ಯ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಅಶ್ವಿನಿ ಅಂಜಿನಪ್ಪ, ಬರ್ಕತ್ ಅಲಿ ಸೇರಿದಂತೆ ಗ್ರಾಮದ ಹಿರಿಯ ಮುಖಂಡರು ಪಾಲ್ಗೊಂಡಿದ್ದರು. ಮಹಾಂತೇಶ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಇಂದ್ರಾ ರಾಮಚಂದ್ರಪ್ಪ ಹಾಜರಿದ್ದರು. ನಿರಂಜನ ಭರಮಸಮುದ್ರ ನಿರೂಪಿಸಿದರು.

# ಸಿಎಂ ಸಿದ್ದರಾಮಯ್ಯರಿಂದ ಪ್ರಭುವಿನೆಡೆಗೆ ಪ್ರಭುತ್ವ ಕಾರ್ಯಕ್ರಮದ ನಿಯಂತ್ರಣ ಕೇಂದ್ರ ಉದ್ಘಾಟನೆ



**ಗದಗ :** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶನಿವಾರ ನಗರದ ಜವಳಗಲ್ಲಿಯಲ್ಲಿನ ಪ್ರಭುವಿನೆಡೆಗೆ ಪ್ರಭುತ್ವ ಕಾರ್ಯಕ್ರಮ ಯಂತ್ರ ಹಾಗೂ ಇಂದಿರಾವನವನ್ನು ವೀಕ್ಷಣೆ ಮಾಡಿದರು. ನಂತರ ಎಸ್‌ಪಿ ಕಚೇರಿಯಲ್ಲಿ ಪ್ರಭುವಿನೆಡೆಗೆ ಪ್ರಭುತ್ವ ಕಾರ್ಯಕ್ರಮ ನಿಯಂತ್ರಣ ಕೇಂದ್ರವನ್ನು ಉದ್ಘಾಟಿಸಿದರು.

ಸಿಎಂ ಸಿದ್ಧರಾಮಯ್ಯ ಅವರು ಜವಳಗಲ್ಲಿಯಲ್ಲಿನ ಪ್ರಭುವಿನೆಡೆಗೆ ಪ್ರಭುತ್ವದ ಕಾರ್ಯಕ್ರಮದ ಯಂತ್ರದ ಬಟನ್ ಒತ್ತುವ ಮೂಲಕ ಜಿಲ್ಲೆಯ ಜನಸಂಖ್ಯೆ ವಿವರಗಳನ್ನು ನೀಡುವಂತೆ ಕೋರಿದರು. ನಂತರ ಇಂದಿರಾವನ ವೀಕ್ಷಣೆ ನಡೆಸಿ ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿಗಳ ಕಚೇರಿಗೆ ತೆರಳುವಷ್ಟರಲ್ಲಿ ಸಿಎಂ ಸಿದ್ಧರಾಮಯ್ಯ ಅವರು ಕೋರಿದ ಜಿಲ್ಲೆಯ ಜನಸಂಖ್ಯೆ ವಿವರಗಳನ್ನು ಸಿದ್ಧಪಡಿಸಿ ವರದಿಯನ್ನು ಜಿಲ್ಲಾಡಳಿತದಿಂದ ನೀಡಲಾಯಿತು. ಇದಕ್ಕೆ ಸಿಎಂ ಸಿದ್ಧರಾಮಯ್ಯ ಅವರು ಪ್ರಭುವಿನೆಡೆಗೆ ಪ್ರಭುತ್ವ ಕಾರ್ಯಕ್ರಮದ ಅನುಷ್ಠಾನ ಉತ್ತಮವಾಗಲಿ. ಜನಸಾಮಾನ್ಯರು ಸರ್ಕಾರಿ ಸೇವೆಗಳಿಗಾಗಿ ವಿನಾಕಾರಣ ಅಲೆದಾಟ ತಪ್ಪಿಸಿ ಶೀಘ್ರ ಸೌಲಭ್ಯ ಹಾಗೂ ಸಮಸ್ಯೆಗಳಿಗೆ ಪರಿಹಾರ ದೊರೆಯಲು ಪ್ರಭುವಿನೆಡೆಗೆ ಪ್ರಭುತ್ವ ಕಾರ್ಯಕ್ರಮ ಪೂರಕವಾಗಲಿ ಎಂದು ಶುಭ ಕೋರಿದರು.

ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಅವರು ಜಿಲ್ಲಾ ಪೊಲೀಸ ಕಚೇರಿಯಲ್ಲಿ ಪ್ರಭುವಿನೆಡೆಗೆ ಪ್ರಭುತ್ವ ಕಾರ್ಯಕ್ರಮ ಅನುಷ್ಠಾನ ಕುರಿತಂತೆ ವಿವರಿಸುತ್ತಾ ಮತದಾರ ಪ್ರಭುವಿನ ಮನೆ ಬಾಗಿಲಿಗೆ ಸರ್ಕಾರದ ಸವಲತ್ತುಗಳನ್ನು ತಲುಪಿಸುವ ಕಾರ್ಯ ಇದಾಗಿದೆ. ಈ ಕಾರ್ಯಕ್ರಮವು ಆಡಳಿತ ವ್ಯವಸ್ಥೆ ಚುರುಕುಗೊಳಿಸಲು ಹಾಗೂ ಸಾರ್ವಜನಿಕರಿಗೆ ತ್ವರಿತವಾಗಿ ಸಮಸ್ಯೆಗಳಿಗೆ ಪರಿಹಾರ ಒದಗಿಸಲು ಜಾರಿ ಮಾಡಲಾಗಿರುತ್ತದೆ. ಈ ಕಾರ್ಯಕ್ರಮವನ್ನು ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಹಾಗೂ ಯಶಸ್ವುಗೊಳಿಸಲು ಕ್ರಮ ವಹಿಸಲಾಗುತ್ತಿದೆ ಎಂದರು.

ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರ ಮಹಾತ್ವಾಕಾಂಕ್ಷಿಯ ಕಾರ್ಯಕ್ರಮ ಪ್ರಭುವಿನೆಡೆಗೆ ಪ್ರಭುತ್ವವಾಗಿದೆ. ಈ ಕಾರ್ಯಕ್ರಮಕ್ಕೆ ಅಧಿಕೃತವಾಗಿ ಅಗಸ್ಟ್ 15 ರಂದು ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಚಾಲನೆ ನೀಡಲಾಯಿತು. ಈವರೆಗೆ ಒಟ್ಟು 14 ವಿವಿಧ ಅಹವಾಲುಗಳು ಸಾರ್ವಜನಿಕರಿಂದ ಸ್ವೀಕೃತವಾಗಿದ್ದು ಬಹುತೇಕ ಎಲ್ಲ ಅಹವಾಲುಗಳಿಗೂ ಪರಿಹಾರ ಕಂಡುಕೊಳ್ಳಲಾಗಿದೆ. ಇದೊಂದು ಮಾದರಿ ಕಾರ್ಯಕ್ರಮವಾಗಿದ್ದು ಮುಂದಿನ ಹಂತದಲ್ಲಿ ವಿಸ್ತರಣೆ ಮಾಡುವ ಕುರಿತು ಯೋಜಿಸಲಾಗುತ್ತಿದೆ ಎಂದು ಮಾಹಿತಿ ಒದಗಿಸಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ, ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಚ್.ಎಂ.ರೇವಣ್ಣ, ವಿಧಾನ ಪರಿಷತ್ ಸದಸ್ಯರು ಹಾಗೂ ಸರ್ಕಾರದ ಮುಖ್ಯ ಸಚೇತಕರಾದ ಸಲೀಂ ಅಹ್ಮದ್, ರೋಣ ಶಾಸಕ ಜಿ.ಎಸ್.ಪಾಟೀಲ, ಶಾಸಕ ಎನ್.ಎಚ್.ಕೋನರೆಡ್ಡಿ, ಹೆಸ್ಕಾಂ ಅಧ್ಯಕ್ಷ ಅಜ್ಜಂಫೀರ ಖಾದ್ರಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ, ಪ್ರಾದೇಶಿಕ ಆಯುಕ್ತೆ ಜಾನಕಿ ಕೆ.ಎಂ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ಹಿರಿಯರು, ಗಣ್ಯರು, ಸಾರ್ವಜನಿಕರು ಹಾಜರಿದ್ದರು.

# ರೇಣುಕಾಚಾರ್ಯ ಅವರ ಮೇಲಿನ ಆರೋಪ ಸತ್ಯಕ್ಕೆ ದೂರವಾದದ್ದು: ಹೊನ್ನಾಳಿ ಬಿಜೆಪಿ ಮುಖಂಡರು

**ದಾವಣಗೆರೆ:** ನ್ಯಾಮತಿ (ಟಿ.ಎ.ಪಿ.ಸಿ.ಎಂ.ಎಸ್) ವ್ಯವಸಾಯ ಉತ್ಪನ್ನ ಸಹಕಾರ ಸಂಘದ ಆಡಳಿತ ಮಂಡಳಿಯ ಚುನಾವಣೆಯಲ್ಲಿ ಯಾವುದೇ ಪಕ್ಷದ ಚಿಹ್ನೆ ಇರುವುದಿಲ್ಲ. ಈ ಚುನಾವಣೆಯು ಪಕ್ಷತೀತವಾಗಿ ನಡೆದಿರುತ್ತದೆ. ಇದನ್ನು ಶಾಂತರಾಜ ಪಾಟೀಲ್ ಹಾಗೂ ಇನ್ನೂ ಕೆಲವರು ದುರದ್ದೇಶದಿಂದ ಮಾಧ್ಯಮದ ಮುಂದೆ ಸುಳ್ಳು ಹಾಗೂ ತಪ್ಪು ಮಾಹಿತಿ ನೀಡಿದ್ದಾರೆ ಎಂದು ಹೊನ್ನಳಿ ಬಿಜೆಪಿ ಮಂಡಲದ ಮಾಜಿ ಉಪಾಧ್ಯಕ್ಷ ಡಿ.ಎನ್.ಗಿರೀಶ್ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಸಹಕಾರ ಸಂಘದ ಚುನಾವಣೆ ನಡೆದ ಬಗ್ಗೆ ಬಿಜೆಪಿಯ ಸ್ವಯಂ ಘೋಷಿತ ನಾಯಕರೆಂದು ಬಿಂಬಿಸಿಕೊಂಡು ಪತ್ರಿಕಾಗೋಷ್ಠಿ ನಡೆಸಿದ ಇವರೆಲ್ಲ ಬಿಜೆಪಿ ಪಕ್ಷದವರು, ಇವರಿಂದ ಪಕ್ಷಕ್ಕೆ ಹಾನಿಯಾಗಿದೆ ಹೊರತು ಪಕ್ಷಕ್ಕೆ ಯಾವುದೇ ಕೊಡುಗೆ ಇಲ್ಲ. ಇವರು ಪಕ್ಷದ ಸಂಘಟನೆ ಮತ್ತು ಪಕ್ಷದ ಪರವಾಗಿ ನಡೆಯುವಂತೆ ಯಾವುದೇ ಹೋರಾಟಗಳನ್ನು ಮಾಡಿಲ್ಲ. ಬರೀ ಪತ್ರಿಕಾಗೋಷ್ಠಿಗೆ ಮಾತ್ರ ಸೀಮಿತರಾಗಿದ್ದಾರೆ ಎಂದು ದೂರಿದರು.

ಇತ್ತೀಚೆಗೆ ನಡೆದ ಸ್ಥಳೀಯ ಚುನಾವಣೆಯು ಇಪಕ್ಷದ ಚಿಹ್ನೆಯ ಅಡಿಯಲ್ಲಿ ನಡೆದಿರುವುದಿಲ್ಲ, ಅಲ್ಲಿನ ಸ್ಥಳೀಯರು ಹಿರಿಯರು ಸೇರಿಕೊಂಡು ಸೌಹಾರ್ದಯುತವಾಗಿ ನಡೆಯುವಂತ ಚುನಾವಣೆ. ಈ ಚುನಾವಣೆಯಲ್ಲಿ ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಭಾಗವಹಿಸಿಲ್ಲ, ಯಾರ ಪರವಾಗಿಯೂ ಪ್ರಚಾರಕ್ಕೆ ಬಂದಿಲ್ಲ. ಆದರೆ ಇವರ ಬಗ್ಗೆ ನಮ್ಮ ಪಕ್ಷದವರೇ ಅಪಪ್ರಚಾರ ಮಾಡುತ್ತಿದ್ದಾರೆ. ಅವರು ಹೇಳಿರುವುದು ಸುಳ್ಳು. ಈ ಚುನಾವಣೆಯನ್ನು ಸ್ಥಳೀಯರು ಸೇರಿಕೊಂಡು ಚುನಾವಣೆ ಮಾಡಿದ್ದೇವೆ ಎಂದರು.

ಪತ್ರಿಕಾಗೋಷ್ಠಿ ಮಾಡಿದವರು ಬೆಳಗ್ಗೆ ಬಿಜೆಪಿ, ರಾತ್ರಿ ಕಾಂಗ್ರೆಸ್‌ನವರ ಜೊತೆ ಸಭೆ ಮಾಡುತ್ತಾರೆ. ಹೊನ್ನಾಳಿ, ನ್ಯಾಮತಿ ತಾಲೂಕಿನ ಕ್ಷೇತ್ರದ ಜನರಿಗೆ ರೇಣುಕಾಚಾರ್ಯ ಯಾರು ಎಂದು ಗೊತ್ತಿದೆ. ಇವರು 24/7 ರೀತಿಯ ಕೆಲಸವನ್ನು ಮಾಡಿದ್ದರಿಂದಲೇ ಈ ಕ್ಷೇತ್ರದ ಜನ ಮೂರು ಸಲ ಗೆಲ್ಲಿಸಿದ್ದಾರೆ. ಪತ್ರಿಕಾಗೋಷ್ಠಿ ನಡೆಸಿದ ಸ್ವಯಂ ಘೋಷಿತ ನಾಯಕರು ಇವರ ಯೋಗ್ಯತೆ ಗ್ರಾಮ ಪಂಚಾಯಿತಿಯ ಚುನಾವಣೆಯಲ್ಲಿ ನಿಂತು ಗೆಲ್ಲುವ ತಾಕತ್ತು ಇಲ್ಲ, ಇವರನ್ನು ನಂಬಿ ಇವರ ಹಿಂದುಗಡೆ ಅವರ ಊರಿನ ಕಾರ್ಯಕರ್ತರು ಇವರ ಜೊತೆಗೆ ಬರುವುದಿಲ್ಲ ಎಂದರು.

# ಜಿಲ್ಲಾಮಟ್ಟದ ಪ್ರೌಢ ಶಾಲಾ ಖೋಖೋ ಪಂದ್ಯಾವಳಿ



**ಹಾಸನ:** ಜಿಲ್ಲಾ ಕ್ರೀಡಾಂಗಣದಲ್ಲಿ ಶನಿವಾರ(ಸೆ.20) ರಂದು ನಡೆದ ಜಿಲ್ಲಾಮಟ್ಟದ ಪ್ರೌಢ ಶಾಲಾ ಖೋಖೋ ಪಂದ್ಯಾವಳಿಯಲ್ಲಿ ಶ್ರೀ ಆದಿಚುಂಚನಗಿರಿ ಪ್ರೌಢಶಾಲೆ ಗೌರಿ ಕೊಪ್ಪಲು ಹಾಸನ ತಂಡವು ಬಾಲಕರ ವಿಭಾಗದಲ್ಲಿ ಪ್ರಥಮ ಸ್ಥಾನ ಹಾಗೂ ಬಾಲಕಿಯರ ವಿಭಾಗದಲ್ಲಿ ದ್ವಿತೀಯ ಸ್ಥಾನ ಪಡೆದು ಮೈಸೂರು ವಿಭಾಗ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಇವರಿಗೆ ಆದಿಚುಂಚನಗಿರಿ ಶ್ರೀಮಠದ ಕಾರ್ಯದರ್ಶಿಗಳಾದ ಶ್ರೀ ಶ್ರೀ ಶಂಬುನಾಥ ಮಹಾಸ್ವಾಮೀಜಿ ಅವರು ಹಾಗೂ ಶಿಕ್ಷಕ ವೃಂದ ಅಭಿನಂದಿಸಿ ಶುಭಹಾರೈಸಿದ್ದಾರೆ.

# ಚೌಡೇಶ್ವರಿ ದೇವಿಗೆ ಅರಿಶಿನ ಕುಂಕುಮ ಅಲಂಕಾರ



**ಶಿವಮೊಗ್ಗ:** ಚಾಲುಕ್ಯ ನಗರದಲ್ಲಿರುವ ಚೌಡೇಶ್ವರಿ ಅಮ್ಮನವರಿಗೆ ಸೆ.22ರಂದು ಶ್ರೀಮತಿ ಸುಧಾಮಣಿ ಶ್ರೀ ಷಣ್ಮುಖ ಕುಟುಂಬದವರಿಂದ ಅರಿಸಿನ ಕುಂಕುಮ ಅಲಂಕಾರ, ಶ್ರೀಮತಿ ರಾಜಶ್ರೀ ಶ್ರೀ ಪುರುಷೋತ್ತಮ ಕುಟುಂಬದವರಿಂದ ದ ಂ ಗ ರ ್ ಹ ೀ ವ ಂ ವ ನ ಂ ್ ನೆರವೇರಿಸಲಾಯಿತು.

ಸೆ. 23ರಂದು ಶ್ರೀಮತಿ ಶೈಲಜಾ ಶ್ರೀ ಸ್ವಾಮ್ಸನ್ ಕುಟುಂಬದವರಿಂದ ಮಹಾಲಕ್ಷ್ಮಿ ಅಲಂಕಾರ, ಶ್ರೀಮತಿ ಶೋಭಿತ ಶ್ರೀ ದೇವಿ ಪ್ರಸಾದ್ ಕುಟುಂಬದವರಿಂದ ಮಹಾಲಕ್ಷ್ಮಿ ಅಲಂಕಾರ 12.30ಕ್ಕೆ ಮಹಾಮಂಗಳಾರತಿ ಪ್ರಸಾದ ವಿನಿಯೋಗ ಏರ್ಪಡಿಸಲಾಗಿದೆ.

ಅದೇ ದಿನ ಸಂಜೆ 6.30ರಿಂದ ಯೋಗೀಶ ತಂಡದವರಿಂದ ವೀರಗಾಸೆ ಏರ್ಪಡಿಸಲಾಗಿದೆ.

ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದೇವಿಯ ಕೃಪೆಗೆ ಪಾತ್ರರಾಗ ಬೇಕಾಗಿ ವಿನಂತಿ.

ಹೆಚ್ಚಿನ ಮಾಹಿತಿಗಾಗಿ ಚೇತನ್ ಭಟ್ 9980247081 ಸಂಪರ್ಕಿಸಿ.

# ಕೂಡಲಿ ಶೃಂಗೇರಿ ಮಹಾಸಂಸ್ಥಾನಮ್ ನಲ್ಲಿ ಶ್ರೀ ಶರನ್ನವರಾತ್ರಿ ಮಹೋತ್ಸವ



**ಶಿವಮೊಗ್ಗ:** ಪ್ರತಿ ಬಾರಿಯಂತೆ ಈ ಬಾರಿಯೂ ಕೂಡಲಿಯ ಶ್ರೀಮದ್ ಜಗದ್ಗುರು ಶಂಕರಾಚಾರ್ಯ ಕೂಡಲಿ ಶೃಂಗೇರಿ ಮಹಾಸಂಸ್ಥಾನಮ್ ದಕ್ಷಿಣಾಮ್ನಾಯ ಮೂಲ ಶ್ರೀ ಶಾರದಾ ಪೀಠ▯▯ನಲ್ಲಿ ವೈಭವದ ಶ್ರೀ ಶರನ್ನವರಾತ್ರಿ ಮಹೋತ್ಸವವು ಸೆಪ್ಟಂಬರ್ 22ರಿಂದ ಅಕ್ಟೋಬರ್ 1ರ ವರೆಗೆ ನಡೆಯಲಿದೆ.

ಶ್ರೀ ಶರನ್ನವರಾತ್ರಿ ಮಹೋತ್ಸವದ ನಿಮಿತ್ತ ಶ್ರೀಮಠದ ಪೀಠಾಧಿಪತಿಗಳಾದ ಶ್ರೀ ವಿದ್ಯಾಭಿನವ ವಿದ್ಯಾರಣ್ಯ ಭಾರತಿ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ ಶ್ರೀ ಶಾರದಾ ಪರಮೇಶ್ವರಿ, ಶ್ರೀ ಚಂದ್ರಮೌಳೇಶ್ವರ ದೇವರ ಸಮ್ಮುಖದಲ್ಲಿ ಪ್ರತಿದಿನ ವಿವಿಧ ಹೋಮ-ಹವನಗಳು ನಡೆಯಲಿವೆ.

ಸೆಪ್ಟಂಬರ್ 22ರಂದು ನವಗ್ರಹ ಹೋಮ, 23ರಂದು ಶ್ರೀ ದುರ್ಗಾ ಸೂಕ್ತ ಹೋಮ, 24ರಂದು ಶ್ರೀ ಲಕ್ಷ್ಮೀನಾರಾಯಣ ಹೃದಯ, 25ರಂದು ಶ್ರೀ ದಕ್ಷಿಣಾಮೂರ್ತಿ ಹೋಮ, 26ರಂದು ಶ್ರೀ ಲಲಿತಾ ಸಹಸ್ರನಾಮ ಹೋಮ, 27ರಂದು ಶ್ರೀ ಆವಹಂತೀ ಹೋಮ, 28ರಂದು ಶ್ರೀ ಸುಬ್ರಹ್ಮಣ್ಯ ಹೋಮ, 29ರಂದು ಶ್ರೀ ಸರಸ್ವತೀ ಹೋಮ, 30ರಂದು ಶ್ರೀ ಮಹಾಲಕ್ಷ್ಮೀ ಹೋಮ ಹಾಗೂ ಅಕ್ಟೋಬರ್ 1ರಂದು ಶ್ರೀ ಶತಚಂಡಿ ಹೋಮ ನಡೆಯಲಿದೆ.

ಈ ಎಲ್ಲಾ ಧಾರ್ಮಿಕ ಕಾರ್ಯಗಳೂ ಮತ್ತೂರಿನ ವಿದ್ವಾನ್ ಶ್ರೀ ಪ್ರದೀಪ್ (ಅಗ್ನಿಹೋತ್ರಿ) ಯವರ ನೇತೃತ್ವದಲ್ಲಿ ನಡೆಯಲಿದ್ದು, ಶ್ರೀ ಶಾರದೆಯ ಆರಾಧನೆಗೆ ಶರನ್ನವರಾತ್ರಿ ಸಂದರ್ಭ ಅತ್ಯಂತ ಸೂಕ್ತ ಸಮಯವಾಗಿದ್ದು, ಭಕ್ತಾದಿಗಳು ಈ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ಜಗದ್ಗುರುಗಳ ಹಾಗೂ ಶ್ರೀ ಶಾರದಾಂಬೆಯ ಕೃಪಗೆ ಪಾತ್ರರಾಗಬೇಕು ಎಂದು ಶ್ರೀಮಠದ ಪ್ರಕಟಣೆ ತಿಳಿಸಿದೆ.

ಸೇವಾಕರ್ತರು ಮೊ: 9164185225, 9480544225 ಹಾಗೂ 9844570404 ಸಂಪರ್ಕಿಸುವಂತೆ ಕೋರಲಾಗಿದೆ.


# ಆಧುನಿಕ ಹೈನುಗಾರಿಕೆ ತರಬೇತಿ

**ದಾವಣಗೆರೆ :** ದಾವಣಗೆರೆ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಸೆಪ್ಟಂಬರ್ 22 ಮತ್ತು 23 ರಂದು ಆಧುನಿಕ ಹೈನುಗಾರಿಕೆ ತರಬೇತಿಯನ್ನು ಆಯೋಜಿಸಲಾಗಿದೆ.

ಆಸಕ್ತ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್ ಪೋರ್ಟ್ ಸೈಜ್ ಪೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ತರಬೇತಿ ಕಾರ್ಯಕ್ರಮಕ್ಕೆ ಯಾವುದೇ ಪ್ರೋತ್ಸಾಹಧನ ಮತ್ತು ಭತ್ಯೆಗಳನ್ನು ನೀಡಲಾಗುವುದಿಲ್ಲ. ತರಬೇತಿಯು ದಾವಣಗೆರೆ ಜಿಲ್ಲೆಯ ರೈತರಿಗೆ ಮಾತ್ರ ಸೀಮಿತವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ದಾವಣಗೆರೆ ಕಚೇರಿ ದೂ.ಸಂ: 08192-233787 ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು ಎಂದು ಪಶುವೈದ್ಯಾಧಿಕಾರಿಗಳು ತಿಳಿಸಿದ್ದಾರೆ.

# ಖೋ-ಖೋ ಕ್ರೀಡೆಯಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆ



**ಹಾವೇರಿ:** ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಜಿಲ್ಲಾಮಟ್ಟದಲ್ಲಿ ಖೋ-ಖೋದಲ್ಲಿ ಪ್ರಥಮ ಸ್ಥಾನ ಪಡೆದು ಬಸವೇಶ್ವರ ನಗರದಲ್ಲಿರುವ ಸರ್ಕಾರಿ ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿಗಳು ರಾಜ್ಯಮಟ್ಟಕ್ಕೆ ಆಯ್ಕೆಯಾಗಿ ಕಾಲೇಜಿಗೆ ಕೀರ್ತಿ ತಂದಿದ್ದಾರೆ.

ಖೋ-ಖೋ ಕ್ರೀಡೆಯಲ್ಲಿ ಕಿರಣ ಮುತ್ತಪ್ಪ ಸಂಗೂರ, ನದೀಮ ನಿರ್ಜನವರ, ಪ್ರವೀಣ ಮಲ್ಲಣ್ಣನವರ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಚೆಸ್‌ನಲ್ಲಿ ಶಿವಕುಮಾರ ಶಿವಪೂರ, ಬ್ಯಾಸ್ಕೆಟ್‌ಬಾಲ್‌ನಲ್ಲಿ ಮಂಜುನಾಥ ಬರೂರ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ. 400 ಮೀ ಓಟದಲ್ಲಿ ಪರಮೇಶ ಹಾವೇರಿ ಮೂರನೇ ಬಹುಮಾನ ಪಡೆದಿದ್ದಾನೆ. ಹರೀಶ್ ತಳಗೇರಿ 200 ಮೀ ಓಟದಲ್ಲಿ ತೃತೀಯ ಬಹುಮಾನ ಪಡೆದಿರುತ್ತಾರೆ.

# ಬೆಸ್ತರ್ ಸಮುದಾಯದ ಎಲ್ಲಾ ಉಪ ಪಂಗಡಗಳು "ಬೆಸ್ತರ್" ಎಂದು ಬರೆಸಿ: ವಕೀಲ ಎಸ್.ಪರಮೇಶ್

**ದಾವಣಗೆರೆ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಸೆ.22 ರಿಂದ ಆರಂಭವಾಗಲಿರುವ ಸಾಮಾಜಿಕ, ಶೈಕ್ಷಣಿಕ ಮತ್ತು ಜಾತಿ ಗಣತಿ ಸಮೀಕ್ಷೆಯಡಿ ಬೆಸ್ತರ್ ಸಮುದಾಯದ ಎಲ್ಲಾ ಉಪ ಪಂಗಡಗಳು "ಬೆಸ್ತರ್" ಎಂದು ಬರೆಸಲು ಜಿಲ್ಲಾ ಬೆಸ್ತರ್ ಮಹಾಸಭಾದ ಅಧ್ಯಕ್ಷ, ವಕೀಲ ಎಸ್.ಪರಮೇಶ್ ಮನವಿ ಮಾಡಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಸ್ತರ್ ಉಪ ಪಂಗಡಗಳಲ್ಲಿ ಒಟ್ಟು 37 ಜಾತಿಗಳು ಬರುತ್ತವೆ. ಗಣತಿದಾರರಿಗೆ ಬೆಸ್ತರ್ ಎಂದು ಬರೆಸುವುದರಿಂದ ಸರ್ಕಾರ ರೂಪಿಸುವ ಯೋಜನೆಗಳ ಹಾಗೂ ಪ್ರಯೋಜನ ಪಡೆಯಬಹುದಾಗಿದೆ. ರಾಜ್ಯದಲ್ಲಿ ನಮ್ಮ ಜನಾಂಗದ ನಿಖರವಾದ ಅಂಕಿ ಅಂಶಗಳು ಸಿಗುತ್ತವೆ. ಇದರಿಂದ ರಾಜಕೀಯ ಪ್ರಾತಿನಿಧ್ಯ ಕಲ್ಪಿಸಲು ಸರ್ಕಾರಕ್ಕೆ ಅನುವು ಆಗುತ್ತದೆ ಎಂದರು.

ಸರ್ಕಾರದ ಯೋಜನೆಗಳನ್ನು ಪಡೆಯುವುದಕ್ಕೆ ಈ ಸಮೀಕ್ಷೆ ಬಹು ಮುಖ್ಯ ಹಾಗೂ ಸಮಾಜದ ಏಳಿಗೆಗೆ ಕಾರ್ಯಸೂಚಿ ಆಗಲಿದೆ.

ಆದ್ದರಿಂದ ಬೆಸ್ತರ್ ಸಮುದಾಯದ ಎಲ್ಲಾ ಉಪ ಪಂಗಡಗಳು ಧರ್ಮದ ಕಾಲಂನಲ್ಲಿ ಹಿಂದೂ, ಜಾತಿ ಹಾಗೂ ಉಪಜಾತಿಯಲ್ಲಿ "ಬೆಸ್ತರ್" ಎಂದು ಬರೆಸಲು ಅವರು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮಹಾಸಭಾದ ಅರುಣ್ ಕುಮಾರ್, ವಿಜಯ್ ಕುಮಾರ್, ಗುರುಮೂರ್ತಿ, ಕುಮಾರ್ ಇದ್ದರು.

# ನಲ್ಲೂರು ಸಹಕಾರ ಪ್ರಾಥಮಿಕ ಕೃಷಿ ಪತ್ತಿನ ಸಂಘದ ವಾರ್ಷಿಕ ಮಹಾಸಭೆ



**ಚನ್ನಗಿರಿ:** ತಾಲೂಕಿನ ನಲ್ಲೂರಿನಲ್ಲಿರುವಂತಹ ಒಂದು ಸಹಕಾರ ಸಂಘವು 114 ವರ್ಷಗಳ ಸುದೀರ್ಘವಾದ ಸೇವೆಯನ್ನು ಸಲ್ಲಿಸುತ್ತಾ ಬಂದಿದ್ದು ಪ್ರಸ್ತುತ ಸಾಲಿನಲ್ಲಿ 40.1.375 ರೂಗಳ ನಿವ್ವಳ ಲಾಭವನ್ನು ಗಳಿಸಿದೆ ಎಂದು ನಲ್ಲೂರು ಸಹಕಾರ ಪ್ರಾಥಮಿಕ ಕೃಷಿ ಪತ್ತಿನ ಸಂಘದ ಅಧ್ಯಕ್ಷ ನಾಗರಾಜ್ ಯು.ಜಿ. ಹೇಳಿದರು.

ಶನಿವಾರ ತಾಲೂಕಿನ ನಲ್ಲೂರು ಸಹಕಾರ ಪ್ರಾಥಮಿಕ ಕೃಷಿ ಪತ್ತಿನ ಸಂಘದ ವಾರ್ಷಿಕ ಮಹಾಸಭೆಯನ್ನು ಉದ್ಘಾಟಿಸಿ ಮಾತನಾಡಿ ಸಹಕಾರ ಸಂಘಗಳು ಅಭಿವೃದ್ಧಿಯಾಗಬೇಕಾದರೆ ಷೇರುದಾರ ಬಂಧುಗಳ ಸಹಕಾರ ಅಗತ್ಯವಾಗಿದೆ. ಸಾಲವನ್ನು ತೆಗೆದುಕೊಂಡಂತಹ ಷೇರುದಾರರು ಸಕಾಲಕ್ಕೆ ಸಾಲವನ್ನು ಮರುಪಾವತಿ ಮಾಡಲು ಮುಂದಾಗಬೇಕು. ಇದರಿಂದ ಮತ್ತೊಬ್ಬರಿಗೆ ಅನುಕೂಲವಾಗಲಿದೆ ಎಂದರು. ನಮ್ಮ ಸಹಕಾರ ಸಂಘಕ್ಕೆ ನೂರು ವರ್ಷಗಳ ಇತಿಹಾಸವಿದ್ದು ಜಿಲ್ಲೆಗೆ ಒಂದು ಉತ್ತಮ ಸಹಕಾರ ಸಂಘ ಎಂಬ ಹೆಗ್ಗಳಿಕೆ ಇದೆ. ಪ್ರಸ್ತುತ ಸಾಲಿನಲ್ಲಿ ಸಂಘದ 1719 ರೈತ ಸದಸ್ಯರಿಗೆ 9.89 ಕೋಟಿ ಸಾಲ ಮತ್ತು 6 ಜನ ರೈತರಿಗೆ 18.45 ಲಕ್ಷ ರೂಗಳ ಮಧ್ಯಮಾವಧಿ ಸಾಲ, 527 ಜನ ಸದಸ್ಯರಿಗೆ 4.15 ಕೋಟಿ ಬಂಗಾರ ಅಡಮಾನ ಸಾಲವನ್ನು ನೀಡಲಾಗಿದೆ. 4 ಸಾವಿರ ಪಡಿತರ ಚೀಟಿದಾರರಿಗೆ ಪಡಿತರಧಾನ್ಯ ವಿತರಣೆ, ರಸಗೊಬ್ಬರ ಮಾರಾಟ ಮಾಡುವ ಮೂಲಕ 60.3 ಕೋಟಿಗೂ ಹೆಚ್ಚು ವ್ಯವಹಾರವನ್ನು ನಡೆಸಿದೆ ಎಂದರು. ಈ ಸಂದರ್ಭದಲ್ಲಿ ಸಂಘದ ಸಿ.ಇ.ಓ. ರವಿಕುಮಾರ್ ವರದಿಯನ್ನು ಮಂಡಿಸಿದರು. ಸಂಘದ ಉಪಾಧ್ಯಕ್ಷರಾದ ಸೈಯದ್ ನಯಾಜ್, ನಿರ್ದೇಶಕರು ಮತ್ತು ಡಿ.ಸಿ.ಸಿ. ಬ್ಯಾಂಕ್‌ನ ನಿರ್ದೇಶಕರಾದ ಜಿ.ಎನ್.ಸ್ವಾಮಿ, ಎಸ್.ಬಸವರಾಜಪ್ಪ, ಜಿ.ಎಚ್. ರಮೇಶ್, ಅಶ್ಫಕ್ ಅಹ್ಮದ್, ಎಚ್.ಬಸವರಾಜಪ್ಪ, ಎಸ್.ಆರ್.ಶಾಂತ್‌ಕುಮಾರ್, ಶಾಂತರಾಜು ವಿ, ಜಿ.ಎಸ್.ಸುಮ, ಪೂರ್ಣಿಮಾ, ಸಕ್ಕೂಬಾಯಿ, ಮಂಜುನಾಥ್ ಹಾಜರಿದ್ದರು.

ನಲ್ಲೂರು ಸಹಕಾರ ಪ್ರಾಥಮಿಕ ಕೃಷಿ ಪತ್ತಿನ ಸಂಘದ ವಾರ್ಷಿಕ ಮಹಾಸಭೆಯನ್ನು ನಲ್ಲೂರು ಸಹಕಾರ ಪ್ರಾಥಮಿಕ ಕೃಷಿ ಪತ್ತಿನ ಸಂಘದ ಅಧ್ಯಕ್ಷ ನಾಗರಾಜ್ ಯು.ಜಿ. ಉದ್ಘಾಟಿಸಿದರು.

# ಜಾತಿ ಕಾಲಂನಲ್ಲಿ ಉಪ್ಪಾರ ಎಂದು ಬರೆಸಲು ಮನವಿ

**ದಾವಣಗೆರೆ:** ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಸೋಮವಾರದಿಂದ ನಡೆಸುತ್ತಿರುವ ಶೈಕ್ಷಣಿಕ ಮತ್ತು ಸಾಮಾಜಿಕ ಸಮೀಕ್ಷೆಯಲ್ಲಿ ಉಪ್ಪಾರ ಸಮಾಜದವರು ಜಾತಿ ಮತ್ತು ಉಪಜಾತಿ ಕಾಲಂಗಳಲ್ಲಿಉಪ್ಪಾರ ಎಂದು ನಮೂದಿಸುವಂತೆ ದಾವಣಗೆರೆ ತಾಲೂಕು ಉಪ್ಪಾರ ಸಂಘದ ಪ್ರಧಾನ ಕಾರ್ಯದರ್ಶಿ ಎಂ. ಎನ್ ಮಂಜುನಾಥ ಮತ್ತು ಖಜಾಂಚಿ ಜಿ.ಹೆಚ್. ಮಹಾಂತೇಶ್ ಕೋರಿದ್ದಾರೆ

# ಬೌದ್ಧ ಧರ್ಮ ಎಂದು ಬರೆಸಿ: ಡಿ.ತಿಪ್ಪಣ್ಣ ಕತ್ತಲಗೆರೆ

**ದಾವಣಗೆರೆ:** ರಾಜ್ಯ ಸರ್ಕಾರದ ಹಿಂದುಳಿದ ವರ್ಗದ ಆಯೋಗದಿಂದ ನಡೆಸುತ್ತಿರುವ ಸಾಮಾಜಿಕ ಶೈಕ್ಷಣಿಕ ಸಮೀಕ್ಷೆಯಲ್ಲಿ ಬುದ್ಧನ ಅನುಯಾಯಿಗಳು ಮತ್ತು ಬಾಬಾ ಸಾಹೇಬ್ ಡಾ. ಬಿ.ಆರ್ ಅಂಬೇಡ್ಕರ್ ಅವರ ಅಭಿಮಾನಿಗಳು ಧರ್ಮದ ಕಾಲಂನಲ್ಲಿ ತಮ್ಮದು ಬೌದ್ಧ ಧರ್ಮ ಎಂದು ಘೋಷಿಸುವಂತೆ ಭಾರತೀಯ ಬೌದ್ಧ ಧರ್ಮ ಸಮಿತಿ ಸದಸ್ಯ ಡಿ.ತಿಪ್ಪಣ್ಣ ಕತ್ತಲಗೆರೆ ಕರೆ ನೀಡಿದ್ದಾರೆ.

ಬುದ್ಧ ಸಾವಿರಾರು ವರ್ಷಗಳ ಹಿಂದೆಯೇ ಅಹಿಂಸೆ, ಶಾಂತಿ ಪ್ರತಿಪಾದಿಸಿ ಸಮಾನತೆ ಸಾರಿದವರು. ಹಿಂದೂ ಧರ್ಮದ ಅಸ್ಪೃಶ್ಯತೆ ವಿರೋಧಿಸಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಲಕ್ಷಾಂತರ ಅಭಿಮಾನಿಗಳೊಂದಿಗೆ ಬೌದ್ಧ ಧರ್ಮ ಸ್ವೀಕರಿಸಿದ್ದರು. ಅಂಬೇಡ್ಕರ್ ಅನುಯಾಯಿಗಳು ಬಹುತೇಕರು ಬೌದ್ಧ ಧರ್ಮ ಸ್ವೀಕರಿಸಿದ್ದು, ರಾಜ್ಯದಲ್ಲಿ ಸಾಕಷ್ಟು ಸಂಖ್ಯೆಯಲ್ಲಿದ್ದಾರೆ. ಆದ್ದರಿಂದ ಈಗ ಹಿಂದುಳಿದ ಆಯೋಗ ನಡೆಸುತ್ತಿರುವ ಸಮೀಕ್ಷೆಯಲ್ಲಿ ಬೌದ್ಧ ಧರ್ಮ ಎಂದು ಬರೆಸುವಂತೆ ಅವರು ಮನವಿ ಮಾಡಿದ್ದಾರೆ.

# ವಿವಾದಗಳ ಬಳಿಕ ಮತ್ತೆ ಟ್ರ್ಯಾಕ್‌ಗೆ ಮರಳಿದ ಮಡೇನೂರು ಮನು

ವೈಯಕ್ತಿಕ ಜೀವನದ ಸಮಸ್ಯೆ ಸೇರಿದಂತೆ ವಿವಾದಗಳ ಸುಳಿಯಲ್ಲಿ ಸಿಲುಕಿದ್ದ ಕಾಮಿಡಿ ಕಿಲಾಡಿಗಳು ಖ್ಯಾತಿಯ ಮಡೇನೂರು ಮನು ಕೊನೆಗೂ ಟ್ರ್ಯಾಕ್‌ಗೆ ಮರಳಿದ್ದು, ತಮ್ಮ ಹುಟ್ಟುಹಬ್ಬದ ದಿನದಂದೇ ಎರಡು ಹೊಸ ಚಿತ್ರಗಳ ಘೋಷಣೆ ಮಾಡಿದ್ದಾರೆ. ಕೊನೆಯದಾಗಿ 'ಕುಲದಲ್ಲಿ ಕೀಳ್ಯಾವುದೋ' ಚಿತ್ರದಲ್ಲಿ ನಟಿಸಿದ್ದರು.

ಮನು ಅವರ ಮುಂದಿನ ಯೋಜನೆಯ ಶೀರ್ಷಿಕೆಯನ್ನು ಅನಾವರಣಗೊಳಿಸಿದ್ದು, 'ಮುತ್ತರಸ' ಎಂದು ಹೆಸರಿಡಲಾಗಿದೆ. ಮತ್ತೊಂದು ಚಿತ್ರದ 'ವಿಚಾರಣೆ'ಯ ಪೋಸ್ಟರ್ ಅನ್ನು ಸಹ ಬಿಡುಗಡೆ ಮಾಡಲಾಯಿತು.

ಮುತ್ತರಸ ಚಿತ್ರವನ್ನು ಜೆಕೆ ಮೂವೀಸ್ ಬ್ಯಾನರ್ ಅಡಿಯಲ್ಲಿ ನಿರ್ಮಾಪಕ ಕೆಎಂ ನಟರಾಜ್ ನಿರ್ಮಿಸುತ್ತಿದ್ದಾರೆ. ಸಮಾರಂಭದಲ್ಲಿ ಖ್ಯಾತ ನಟ ವಸಿಷ್ಠ ಸಿಂಹ, ಹಿರಿಯರಾದ ಎಂಎಸ್ ಉಮೇಶ್ ಮತ್ತು ಕರಿ ಸುಬ್ಬು, ಕರ್ನಾಟಕ ಚಲನಚಿತ್ರ ನಿರ್ಮಾಪಕರ ಸಂಘದ ಅಧ್ಯಕ್ಷ ಉಮೇಶ್ ಬಣಕಾರ್ ಭಾಗವಹಿಸಿದ್ದರು. ಅವರೆಲ್ಲರೂ ಮನುಗೆ ಶುಭ ಹಾರೈಸಿದರು.




ಪದ್ಮಶ್ರೀ ಪ್ರಶಸ್ತಿ ಪುರಸ್ಕೃತೆ ಮಂಜಮ್ಮ ಜೋಗತಿ, 'ಪ್ರತಿಯೊಬ್ಬರೂ ಸಮಯವನ್ನು ಗೌರವಿಸಲು ಕಲಿಯಬೇಕು. ಎಲ್ಲರೊಳಗೆ ದೈವಿಕ ಉಪಸ್ಥಿತಿ ಇರುತ್ತದೆ ಎಂದ ಅವರು ಚಿತ್ರಕ್ಕೆ ಶುಭ ಕೋರಿದರು.

ವಿವಾದಗಳಿಂದ ದೂರವಿರುವಂತೆ ಸಲಹೆ ನೀಡಿದ ವಸಿಷ್ಠ ಸಿಂಹ, 'ನಾವು ವಿಮಾನ ಹತ್ತಿದಾಗ, ಅದು ನಮ್ಮದಾಗುವುದಿಲ್ಲ. ಯಾವುದೇ ಮಹತ್ವಾಕಾಂಕ್ಷೆಯನ್ನು ಬೆನ್ನಟ್ಟುವಾಗಲೂ ನಾವು ನೆಲದಲ್ಲಿಯೇ ಇರಬೇಕು ಎಂದು ಹೇಳಿದರು.

ಹೊಸ ಯೋಜನೆಯ ಚಿತ್ರೀಕರಣ ಮುಂದಿನ ತಿಂಗಳು ಪ್ರಾರಂಭವಾಗುವ ನಿರೀಕ್ಷೆಯಿದ್ದು, ನಿರ್ದೇಶಕರು ಮತ್ತು ಪಾತ್ರವರ್ಗ ಶೀಘ್ರದಲ್ಲೇ ಬಹಿರಂಗಗೊಳ್ಳಲಿದೆ.

ನಿರ್ಮಾಪಕ ನಟರಾಜ್ ಮಾತನಾಡಿ, 'ಮನು ನಾನು ಈ ಹಿಂದೆ ನಿರ್ಮಿಸಿದ ಚಿತ್ರದಲ್ಲಿ ನಟಿಸಿದ್ದರು. ಮುತ್ತರಸ ನಮ್ಮ ಎರಡನೇ ಸಹಯೋಗವಾಗಿದೆ ಮತ್ತು ಇಂದು ಶೀರ್ಷಿಕೆಯನ್ನು ಅನಾವರಣಗೊಳಿಸಲು ಒಟ್ಟಾಗಿ ಬಂದ ಎಲ್ಲ ಗಣ್ಯರಿಗೆ ನಾನು ಕೃತಜ್ಞನಾಗಿದ್ದೇನೆ' ಎಂದರು.

ವಿಚಾರಣೆ ಚಿತ್ರವು ಈ ವರ್ಷಾಂತ್ಯದಲ್ಲಿ ಬಿಡುಗಡೆಯಾಗುವ ಗುರಿಯನ್ನು ಹೊಂದಿದೆ ಎಂದು ಮನು ಹೇಳಿದರು.

# ಅನಿಮೇಷನ್ ಬ್ಲಾಕ್‌ಬಸ್ಟರ್ 'ಮಹಾವತಾರ ನರಸಿಂಹ' ಒಟಿಟಿಯಲ್ಲಿ ಬಿಡುಗಡೆ

**ಇತ್ತೀಚಿನ ಅನಿಮೇಷನ್ ಬ್ಲಾಕ್‌ಬಸ್ಟರ್ ಮಹಾವತಾರ ನರಸಿಂಹ ಚಿತ್ರವು ಒಟಿಟಿಯಲ್ಲಿ ಬಿಡುಗಡೆಯಾಗಿದೆ. ಸೆಪ್ಟೆಂಬರ್ 19ರ ಶುಕ್ರವಾರ ಮಧ್ಯಾಹ್ನ 12.30 ಚಿತ್ರವು ನೆಟ್‌ಫ್ಲಿಕ್ಸ್‌ನಲ್ಲಿ ಸ್ಟ್ರೀಮಿಂಗ್ ಆಗುತ್ತಿದೆ.**

**ಅಶ್ವಿನ್ ಕುಮಾರ್ ನಿರ್ದೇಶನದ ಮಹಾವತಾರ ನರಸಿಂಹ, ವಿಷ್ಣುವಿನ ಕಟ್ಟಾ ಭಕ್ತ ಮತ್ತು ಅವನ ತಂದೆ ಹಿರಣ್ಯಕಶಿಪು– ಒಬ್ಬ ಪರಾಕ್ರಮಿ ರಾಜ ಮತ್ತು ಕಟ್ಟಾ ನಾಸ್ತಿಕನ ನಡುವಿನ ಕಥೆಯಾಗಿದೆ. ವಿಷ್ಣುವಿನ ಇರುವಿಕೆ ಬಗ್ಗೆ ತನ್ನ ಮಗನ ಅಚಲ ನಂಬಿಕೆಯಿಂದ ಕೋಪಗೊಂಡ ತಂದೆಯ ಕಥೆಯನ್ನು ಒಳಗೊಂಡಿದೆ.**



ಜುಲೈ 25 ರಂದು ಚಿತ್ರಮಂದಿರಗಳಲ್ಲಿ ಬಿಡುಗಡೆಯಾದ ಈ ಚಿತ್ರವು, ಆರಂಭಿಕ ವಾರಾಂತ್ಯದಿಂದಲೇ ಗಲ್ಲಾಪೆಟ್ಟಿಗೆಯಲ್ಲಿ ಭರ್ಜರಿ ಕಲೆಕ್ಷನ್ ಮಾಡುವ ಮೂಲಕ ಎಲ್ಲರನ್ನೂ ಅಚ್ಚರಿಗೊಳಿಸಿತು. ದೇಶೀಯ ಬಾಕ್ಸ್ ಆಫೀಸ್‌ನಲ್ಲಿ ಅದ್ಭುತ ಯಶಸ್ಸಿನ ನಂತರ, ಈ ಚಿತ್ರವು ನಂತರ ವಿದೇಶಗಳಲ್ಲಿಯೂ ಬಿಡುಗಡೆಯಾಯಿತು. ಆಗಸ್ಟ್‌ನಲ್ಲಿ, ಈ ಚಿತ್ರವು ವಿಶ್ವದಾದ್ಯಂತ ಬಾಕ್ಸ್ ಆಫೀಸ್‌ನಲ್ಲಿ 300 ಕೋಟಿ ರೂ.ಗೂ ಅಧಿಕ ಗಳಿಕೆ ಕಂಡಿತು. ಅನಿಮೇಷನ್ ಚಿತ್ರವೊಂದು ಅಧಿಕ ಗಳಿಕೆ ಕಂಡ ಚಿತ್ರವಾಯಿತು.

ಈ ಚಿತ್ರವನ್ನು ಹೊಂಬಾಳೆ ಫಿಲ್ಮ್ಸ್ ಪ್ರಸ್ತುತಪಡಿಸಿದ್ದು, ಕ್ಲೀಮ್ ಪ್ರೊಡಕ್ಷನ್ಸ್ ಬೆಂಬಲದೊಂದಿಗೆ ಶಿಲ್ಪಾ ಧವನ್, ಕುಶಾಲ್ ದೇಸಾಯಿ ಮತ್ತು ಚೈತನ್ಯ ದೇಸಾಯಿ ನಿರ್ಮಿಸಿದ್ದಾರೆ. ಈ ಚಿತ್ರವು ಸ್ಯಾಮ್ ಸಿಎಸ್ ಅವರ ಸಂಗೀತ ಸಂಯೋಜನೆ ಹೊಂದಿದ್ದು, ಚಿತ್ರಕಥೆಯನ್ನು ಜಯಪೂರ್ಣ ದಾಸ್ ಮತ್ತು ರುದ್ರ ಪ್ರತಾಪ್ ಘೋಷ್ ಬರೆದಿದ್ದಾರೆ

## ನಾಗಾರ್ಜುನ ನಟನೆಯ 'ಶಿವ' ಚಿತ್ರ ನವೆಂಬರ್‌ನಲ್ಲಿ ರೀ-ರಿಲೀಸ್



ದಕ್ಷಿಣ ಭಾರತದ ಖ್ಯಾತ ನಟ ನಾಗಾರ್ಜುನ ಅವರು ತಮ್ಮ ಅಭಿನಯದ 1989ರ ಸಿನಿಮಾ 'ಶಿವ' ನವೆಂಬರ್ 14 ರಂದು ಚಿತ್ರಮಂದಿರಗಳಲ್ಲಿ ರೀ-ರಿಲೀಸ್ ಆಗಲಿದೆ ಎಂದು ಶನಿವಾರ ಹೇಳಿದ್ದಾರೆ.

66 ವರ್ಷದ ನಟ ತಮ್ಮ ದಿವಂಗತ ತಂದೆ ಮತ್ತು ಜನಪ್ರಿಯ ಚಲನಚಿತ್ರ ನಿರ್ಮಾಪಕ ಅಕ್ಕಿನೇನಿ ನಾಗೇಶ್ವರ ರಾವ್ ಅವರ ಜನ್ಮದಿನದಂದು ಎಕ್ಸ್ ನಲ್ಲಿ ಈ ಘೋಷಣೆ ಮಾಡಿದ್ದಾರೆ.

ಈ ಚಿತ್ರವನ್ನು ರಾಮ್ ಗೋಪಾಲ್ ವರ್ಮಾ ನಿರ್ದೇಶಿಸಿದ್ದಾರೆ ಮತ್ತು ನಾಗಾರ್ಜುನ ಅವರಿಗೆ ಈ ಸಿನಿಮಾ ಒಂದು ಮಹತ್ವದ ತಿರುವು ನೀಡಿತು.

ವ ಸಿನಿಮಾ ಬಿಡುಗಡೆಯ ಸಮಯದಲ್ಲಿ ಬಾಕ್ಸ್ ಆಫೀಸ್‌ನಲ್ಲಿ ಬ್ಲಾಕ್‌ಬಸ್ಟರ್ ಆಗಿ ಹೊರಹೊಮ್ಮಿದ್ದು, ಕೇವಲ 75 ಲಕ್ಷ ರೂ. ಬಜೆಟ್ ನಲ್ಲಿ ನಿರ್ಮಿಸಿದ ಈ ಸಿನಿಮಾ 4 ಕೋಟಿಗೂ ಹೆಚ್ಚು ಗಳಿಸಿತು.


"ನನ್ನ ಪ್ರೀತಿಯ ತಂದೆ ANR ಅವರ ಹುಟ್ಟುಹಬ್ಬದಂದು, ಭಾರತೀಯ ಚಿತ್ರರಂಗವನ್ನು ಬೆಚ್ಚಿಬೀಳಿಸಿದ ಚಿತ್ರ ಮತ್ತೆ ಚಿತ್ರಮಂದಿರಗಳನ್ನು ಬೆಚ್ಚಿಬೀಳಿಸಲು ಬರುತ್ತಿದೆ ಎಂದು ಘೋಷಿಸಲು ನನಗೆ ಸಂತೋಷವಾಗುತ್ತಿದೆ. @AnnapurnaStdios ಮತ್ತು @RGVzoomin ಅವರ PATH BREAKING FILM #SHIVA ನವೆಂಬರ್ 14, 2025 ರಂದು ಚಿತ್ರಮಂದಿರಗಳಲ್ಲಿ ಗ್ರ್ಯಾಂಡ್ ರೀ-ರಿಲೀಸ್ ಆಗಲಿದೆ ಎಂದು ತಿಳಿಸಿದ್ದಾರೆ.

## 46ನೇ ವಯಸ್ಸಿಗೆ ಖ್ಯಾತ ನಟ ರೋಬೋ ಶಂಕರ್ ನಿಧನ, ಕಂಬನಿ ಮಿಡಿದ ಚಿತ್ರರಂಗ

ಜನಪ್ರಿಯ ಹಾಸ್ಯನಟ ರೋಬೋ ಶಂಕರ್ ಅನಾರೋಗ್ಯದಿಂದ ನಿಧನರಾದರು. ಅವರಿಗೆ 46 ವರ್ಷ ವಯಸ್ಸಾಗಿತ್ತು. ವಿಜಯ್ ಟಿವಿಯಲ್ಲಿ ಪ್ರಸಾರವಾದ 'ಕಲಕ್ಕಪ್ ಪೋವತು ಯಾರು' ಕಾರ್ಯಕ್ರಮದಿಂದ ರೋಬೋ ಶಂಕರ್ ಪ್ರಸಿದ್ಧರಾಗಿದ್ದರು. ಅವರು ತಮ್ಮ ಅದ್ಭುತ ಮಿಮಿಕ್ರಿ ಕೌಶಲ್ಯದಿಂದ ದೂರದರ್ಶನ ಪ್ರೇಕ್ಷಕರಲ್ಲಿ ಜನಪ್ರಿಯತೆಯನ್ನು ಗಳಿಸಿದರು. ಚುಟ್ಟಿ ಅರವಿಂದ್ ಅವರೊಂದಿಗಿನ ಅವರ ಹಾಸ್ಯ ಕಾರ್ಯಕ್ರಮಗಳು ಆ ಸಮಯದಲ್ಲಿ ಜನಪ್ರಿಯವಾದವು. ವೇದಿಕೆಯಲ್ಲಿ ಅವರ ರೋಬೋಟ್‌ನಂತಹ ನೃತ್ಯದಿಂದಾಗಿ ಅವರು ರೋಬೋಟ್ ಶಂಕರ್ ಎಂಬ ಅಡ್ಡಹೆಸರನ್ನು ಪಡೆದರು.

ಅವರು ವಿವಿಧ ವೇದಿಕೆ ಕಾರ್ಯಕ್ರಮಗಳಲ್ಲಿ ಸ್ಟ್ಯಾಂಡ್-ಅಪ್ ಹಾಸ್ಯ ಮತ್ತು ಮಿಮಿಕ್ರಿ ಪ್ರದರ್ಶನ ನೀಡುವುದನ್ನು ಮುಂದುವರೆಸಿದರು ಮತ್ತು ಚಲನಚಿತ್ರಗಳಲ್ಲಿ ಸಣ್ಣ ಪಾತ್ರಗಳಲ್ಲಿಯೂ ನಟಿಸಿದರು. ವಿಜಯ್ ಸೇತುಪತಿ ಅಭಿನಯದ 'ಇದರ್‌ಕುಟ್ಟನ್ ಆಸೆಪಟ್ಟೈ' ಬಾಲಕುಮಾರ ಚಿತ್ರದಲ್ಲಿ ಅವರು ತಮ್ಮ ಮೊದಲ ಪೂರ್ಣ-ಉದ್ದದ ಪಾತ್ರವನ್ನು ಪಡೆದರು. ನಂತರ ಅವರು 'ಕಪ್ಪಲ್' ಚಿತ್ರದಲ್ಲಿ ನಟಿಸಿದರು. ಅವರು 'ಮಾರಿ' ಮತ್ತು 'ವೈಯೈ ಮೂಡಿ ಪೆಸವುಂ' ನಂತಹ ಚಿತ್ರಗಳ ಆಫರ್‌ಗಳನ್ನು ಪಡೆದರು. ವಿಷ್ಣು ವಿಶಾಲ್ ಅಭಿನಯದ 'ವೇಲೈನ್ನು ವಂದುಟ್ಟ ವೆಲೈಕಾರನ್' ಚಿತ್ರದಲ್ಲಿನ ಅವರ ಹಾಸ್ಯಕ್ಕೆ ಭಾರೀ ಪ್ರತಿಕ್ರಿಯೆ ಸಿಕ್ಕಿತು. ರೋಬೋ ಶಂಕರ್ ನಿಧನಕ್ಕೆ ನಟ ಕಮಲ್ ಹಾಸನ್ ಕಂಬನಿ ಮಿಡಿದಿದ್ದಾರೆ.

## ಐವಿಎಫ್ ಮೂಲಕ ಮಗು; ವಿನೂತನ ವಿಸ್ಮಯವನ್ನು ಹಂಚಿಕೊಂಡ ನಟಿ ಭಾವನಾ!



**ಬೆಂಗಳೂರು:** ಐವಿಎಫ್ ಮೂಲಕ ಮಗು ಪಡೆದುಕೊಂಡಿರುವ ಸ್ಯಾಂಡಲ್ ವುಡ್ ನ ನಟಿ ಭಾವನಾ ರಾಮಣ್ಣ ಮೊದಲ ಬಾರಿಗೆ ತನ್ನ ಮಗುವಿನ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಹಂಚಿಕೊಂಡಿದ್ದಾರೆ.

ಈ ಕುರಿತು ಇನ್ಸಾಟಾಗ್ರಾಮ್ ನಲ್ಲಿ ಬರೆದುಕೊಂಡಿರುವ ಅವರು, ದೊಡ್ಡ ಮನೆ, ಪುಟ್ಟ ಕುಟುಂಬ. ನಾನು ಮತ್ತು ನನ್ನ ತಂದೆ, ಬೆಳದ್ದೆ ಎದ್ದು ಮನೆಯಂಗಳದಲ್ಲಿ ಕಾಫಿ ಹೀರುತ್ತಾ ಕೂತರೆ, ಇಲ್ಲಿ ಹಕ್ಕಿಗಳದ್ದೇ ನಾದ ನಿನಾದ... ಕು ಕು ಮೈನಾ, ಕಿಚಿ ಪಿಚಿ ಗುಬ್ಬಚ್ಚಿ, ನಿತ್ಯವೂ ಬರೀ ಹಕ್ಕಿಗಳದ್ದೇ ಕಲರವ. ಹಕ್ಕಿ ಪಿಕ್ಕಿಗಳ ಹಾಡು ಪಾಡು ಕೇಳುತ್ತಿದ್ದ ಮನೆಯಲ್ಲೀಗ ಹೊಸದೊಂದು ಪುಟ್ಟ ಹಕ್ಕಿಯ ಸರಿಗಮ ಎಂದಿದ್ದಾರೆ.ಮನೆಯ ಗೂಡಲ್ಲಿ ಚುಯ್ ಚುಯ್ ಸದ್ದು ಮಾಡುತ್ತಿರುವ ಈ ಪುಟ್ಟ ಹಕ್ಕಿಗೆ ಏನೆಂದು ಹೆಸರಿಡುವುದು..? ನಮ್ಮನ್ನು ನಯವಾಗಿ ಬಂಧಿಸಿದ ಸುಂದರ ಬಲೆ, ಇದು ಹೊಸ ಪ್ರೀತಿಯ ಅಲೆ ತಂದುಕೊಟ್ಟಿದೆ. ಈ ವಿನೂತನ ವಿಸ್ಮಯವನ್ನು ನಿಮ್ಮೊಂದಿಗೆ ಹಂಚಿಕೊಳ್ಳುತ್ತೇನೆ ಎಂದಿದ್ದಾರೆ.ಐವಿಎಫ್ ತಂತ್ರಜ್ಞಾನದ ಮೂಲಕ ಅವಳಿ ಮಕ್ಕಳಿಗೆ ತಾಯಿಯಾಗುತ್ತಿರುವ ಬಗ್ಗೆ ಮಾಹಿತಿ ಹಂಚಿಕೊಂಡು ಸೀಮಂತ ಶಾಸ್ತ್ರ ಕೂಡಾ ಮಾಡಿಸಿಕೊಂಡಿದ್ದರು. ಆದರೆ ಹೆರಿಗೆ ವೇಳೆ ಒಂದು ಮಗು ಮೃತಪಟ್ಟಿದೆ ಎಂದು ಸುದ್ದಿಯಾಗಿತ್ತು. ಆದರೆ, ಈ ಬಗ್ಗೆ ಭಾವನಾ ಯಾವುದೇ ಪ್ರತಿಕ್ರಿಯೆ ನೀಡಿಲ್ಲ.


## ಒಟ್ಟಿಗೆ ಕಾಣಿಸಿ ಕೊಳ್ಳಲಿದ್ದಾರೆ ರಜಿನಿಕಾಂತ್- ಕಮಲ್ ಹಾಸನ್

**ಚೆನ್ನೈ:** ಸೂಪರ್‌ಸ್ಟಾರ್ ರಜನಿಕಾಂತ್ ಬುಧವಾರ ತಮ್ಮ ಸಹ ನಟ ಕಮಲ್ ಹಾಸನ್ ಅವರೊಂದಿಗೆ ಮತ್ತೆ ತೆರೆ ಮೇಲೆ ಕಾಣಿಸಿಕೊಳ್ಳುವ ಸಾಧ್ಯತೆ ಇದ್ದು, ಆ ಯೋಜನೆಗಾಗಿ ಮಾತುಕತೆ ನಡೆಸುತ್ತಿರುವುದಾಗಿ ದೃಢಪಡಿಸಿದರು.

ಚೆನ್ನೈ ವಿಮಾನ ನಿಲ್ದಾಣದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಈ ಯೋಜನೆಯನ್ನು ಕಮಲ್ ಹಾಸನ್ ಅವರ ಬ್ಯಾನರ್ ರಾಜ್ ಕಮಲ್ ಫಿಲ್ಮ್ಸ್ ಇಂಟರ್‌ನ್ಯಾಷನಲ್ ಮತ್ತು ರೆಡ್ ಜೈಂಟ್ ಮೂವೀಸ್ ಜಂಟಿಯಾಗಿ ನಿರ್ಮಿಸಲಿವೆ. ಸದ್ಯಕ್ಕೆ ನಿರ್ದೇಶಕರು ಮತ್ತು ಸ್ಕ್ರಿಪ್ಟ್ ಇನ್ನೂ ಅಂತಿಮಗೊಂಡಿಲ್ಲ ಎಂದು ಹೇಳಿದರು.

'ನಾವು ರಾಜ್ ಕಮಲ್ ಫಿಲ್ಮ್ಸ್ ಇಂಟರ್‌ನ್ಯಾಷನಲ್ ಮತ್ತು ರೆಡ್ ಜೈಂಟ್ ಮೂವೀಸ್ ಜೊತೆ ಚಿತ್ರ ಮಾಡಲಿದ್ದೇವೆ. ನಿರ್ದೇಶಕರು ಯಾರೆಂದು ಇನ್ನೂ ನಿರ್ಧರಿಸಿಲ್ಲ. ಕಮಲ್ ಮತ್ತು ನಾನು ಒಟ್ಟಿಗೆ ಚಿತ್ರ ಮಾಡಲು ಬಯಸುತ್ತೇವೆ. ನಮಗೆ ಉತ್ತಮ ಕಥೆ ಮತ್ತು ಪಾತ್ರ ಸಿಕ್ಕರೆ, ನಾವು ನಟಿಸುತ್ತೇವೆ' ಎಂದು 74 ವರ್ಷದ ನಟ ಸುದ್ದಿಗಾರರಿಗೆ ತಿಳಿಸಿದರು.

ಈ ಯೋಜನೆಯು ಅಂತಿಮಗೊಂಡರೆ, ಸುಮಾರು 46 ವರ್ಷಗಳ ನಂತರ ಇಬ್ಬರು ತಮಿಳು ಸಿನಿಮಾ ದಂತಕಥೆಗಳು ತೆರೆಯ ಮೇಲೆ ಮತ್ತೆ ಒಂದಾಗುತ್ತಿರುವುದನ್ನು ವೀಕ್ಷಿಸಬಹುದು. ರಜನಿಕಾಂತ್ ಮತ್ತು ಕಮಲ್ ಹಾಸನ್ ಕೊನೆಯ ಬಾರಿಗೆ 1979ರ ಫ್ಯಾಂಟಸಿ ಚಿತ್ರ 'ಅಲಾವುದ್ದಿನಂ ಅಥ್ಬುತ ವಿಲಕ್ಕುಂ'ನಲ್ಲಿ ಒಟ್ಟಿಗೆ ಕಾಣಿಸಿಕೊಂಡಿದ್ದರು.



ರಜಿನಿಕಾಂತ್ ಮುಂದಿನ 'ಜೈಲರ್ 2'ನಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಇದು ಅವರ 2023ರ ಹಿಟ್ ಚಿತ್ರ 'ಜೈಲರ್'ನ ಮುಂದುವರಿದ ಭಾಗವಾಗಿದೆ. ಈ ಚಿತ್ರವನ್ನು ಲೋಕೇಶ್ ಕನಕರಾಜ್ ನಿರ್ದೇಶಿಸುತ್ತಿದ್ದಾರೆ. ಅವರು ಇತ್ತೀಚೆಗೆ ಆಗಸ್ಟ್‌ನಲ್ಲಿ ಬಿಡುಗಡೆಯಾದ 'ಕೂಲಿ' ಚಿತ್ರದಲ್ಲಿ ಅವರೊಂದಿಗೆ ಕೆಲಸ ಮಾಡಿದ್ದರು.

ಕಮಲ್ ಹಾಸನ್ ಇತ್ತೀಚೆಗೆ ಖ್ಯಾತ ಚಲನಚಿತ್ರ ನಿರ್ಮಾಪಕ ಮಣಿರತ್ನಂ ನಿರ್ದೇಶನದ 'ಥಗ್ ಲೈಫ್'ನಲ್ಲಿ ನಟಿಸಿದ್ದರು. ಈ ಚಿತ್ರ ಜೂನ್‌ನಲ್ಲಿ ಚಿತ್ರಮಂದಿರಗಳಲ್ಲಿ ಬಿಡುಗಡೆಯಾಯಿತು.

## Maa Vande: ಮೋದಿ ಜೀವನ ಚರಿತ್ರೆ ಘೋಷಣೆ;

**Malayalam ನಟ ಉನ್ನಿ ಮುಕುಂದನ್ ನಟನೆ; ಫಸ್ಟ್ ಲುಕ್ ಬಿಡುಗಡೆ**

**ಸಿಲ್ವರ್ ಕ್ಯಾಸ್ಟ್ ಕ್ರಿಯೇಷನ್ಸ್ 'ಮಾ ವಂದೇ' ಎಂಬ ಜೀವನ ಚರಿತ್ರೆಯನ್ನು ಘೋಷಿಸಿದೆ. ಈ ಚಿತ್ರವು ಭಾರತದ ಪ್ರಧಾನಿ ನರೇಂದ್ರ ಮೋದಿ ಅವರ ಜೀವನವನ್ನು ಆಧರಿಸಿದೆ. ಖ್ಯಾತ ಮಲಯಾಳಂ ಸಿನಿಮಾ ನಟ ಉನ್ನಿ ಮುಕುಂದನ್ ಅವರು ನರೇಂದ್ರ ಮೋದಿ ಪಾತ್ರದಲ್ಲಿ ನಟಿಸಲಿದ್ದಾರೆ. ಸೆಪ್ಟೆಂಬರ್ 17ರಂದು ಪ್ರಧಾನಿ ಮೋದಿ ಅವರ 75ನೇ ಹುಟ್ಟುಹಬ್ಬದಂದು ಈ ಘೋಷಣೆ ಮಾಡಲಾಯಿತು. ನಿರ್ಮಾಪಕರು ಈ ಯೋಜನೆಯನ್ನು ಅಂತಾರಾಷ್ಟ್ರೀಯ ಮಾನದಂಡಗಳು ಮತ್ತು ಅತ್ಯಾಧುನಿಕ ಗಿಈಫಿ ತಂತ್ರಜ್ಞಾನದೊಂದಿಗೆ ಭವ್ಯ ನಿರ್ಮಾಣವಾಗಿ ಪ್ರಸ್ತುತಪಡಿಸಿದ್ದಾರೆ.**




ಚಲನಚಿತ್ರ ನಿರ್ಮಾಪಕರ ಪ್ರಕಾರ, ಈ ಜೀವನ ಚರಿತ್ರೆಯು ಮೋದಿಯವರ ಬಾಲ್ಯದಿಂದ ರಾಷ್ಟ್ರದ ನಾಯಕರಾಗುವವರೆಗಿನ ಪ್ರಯಾಣವನ್ನು ಪತ್ತೆಹಚ್ಚುತ್ತದೆ. ಇದು ಅವರ ದಿವಂಗತ ತಾಯಿ ಹೀರಾಬೆನ್ ಮೋದಿ ಅವರೊಂದಿಗಿನ ಅವರ ಸಂಬಂಧದ ಮೇಲೆ ನಿರ್ದಿಷ್ಟವಾಗಿ ಕೇಂದ್ರೀಕರಿಸುತ್ತದೆ. ನರೇಂದ್ರ ಅವರ ಪ್ರಯಾಣದುದ್ದಕ್ಕೂ ಹೀರಾಬೆನ್ ಅವರನ್ನು ಸ್ಫೂರ್ತಿಯ ಅಕ್ಷಯ ಮೂಲ ಎಂದು ವಿವರಿಸಲಾಗಿದೆ. ಉನ್ನಿ ಮುಕುಂದನ್ ಮಲಯಾಳಂ ಸಿನಿಮಾದಲ್ಲಿನ ತಮ್ಮ ಕೆಲಸಕ್ಕೆ ಹೆಸರುವಾಸಿಯಾಗಿದ್ದಾರೆ. ಅವರು ಕೊನೆಯ ಬಾರಿಗೆ 'ಮಾರ್ಕೊ' ಚಿತ್ರದಲ್ಲಿ ಕಾಣಿಸಿಕೊಂಡಿದ್ದರು. ಇದು ಹಿಂಸಾಚಾರಕ್ಕಾಗಿ ವ್ಯಾಪಕವಾಗಿ ಚರ್ಚಿಸಲ್ಪಟ್ಟಿತು.

ಈ ವಿಶೇಷ ಸಂದರ್ಭದಲ್ಲಿ, ನಟ ಉನ್ನಿ ಮುಕುಂದನ್ ಕೂಡ ಚಿತ್ರದ ಪೋಸ್ಟರ್ ಅನ್ನು ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಂಡಿದ್ದಾರೆ. ಪೋಸ್ಟರ್ ಜೊತೆಗೆ, ಅವರು ಪ್ರಧಾನಿ ನರೇಂದ್ರ ಮೋದಿಯವರೊಂದಿಗಿನ ಭೇಟಿಯ ಫೋಟೋವನ್ನು ಸಹ ಹಂಚಿಕೊಂಡಿದ್ದಾರೆ. ಕ್ರಾಂತಿ ಕುಮಾರ್ ನಿರ್ದೇಶನದ ಮುಂಬರುವ ಚಿತ್ರ ಮಾ ವಂದೇ ನಲ್ಲಿ ನಾನು ಭಾರತದ ಪ್ರಧಾನಿ ನರೇಂದ್ರ ದಾಮೋದರದಾಸ್ ಮೋದಿ ಅವರ ಪಾತ್ರವನ್ನು ನಿರ್ವಹಿಸುತ್ತಿದ್ದೇನೆ ಎಂದು ಹಂಚಿಕೊಳ್ಳಲು ನನಗೆ ಹೆಮ್ಮೆ ಮತ್ತು ವಿನಮ್ರತೆ ಇದೆ ಎಂಬ ಶೀರ್ಷಿಕೆ ಬರೆದಿದ್ದಾರೆ.

# ಓಂ ಪ್ರಕಾಶ್ ರಾವ್ ನಿರ್ದೇಶನದ 50ನೇ ಚಿತ್ರ 'ಗೆರಿಲ್ಲಾ ವಾರ್'

ಕನ್ನಡ ಚಿತ್ರರಂಗದ ರಿಯಲ್ ಸ್ಟಾರ್ ಉಪೇಂದ್ರ ಸದ್ಯ ನಾಗಣ್ಣ ನಿರ್ದೇಶನದ 'ಭಾರ್ಗವ' ಚಿತ್ರದ ಚಿತ್ರೀಕರಣದಲ್ಲಿ ಬ್ಯುಸಿಯಾಗಿದ್ದಾರೆ. ಈ ಬೆನ್ನಲ್ಲೇ ನಟ ತಮ್ಮ ಮುಂದಿನ ಚಿತ್ರ, ಹಿರಿಯ ನಿರ್ದೇಶಕ ಓಂ ಪ್ರಕಾಶ್ ರಾವ್ ಅವರೊಂದಿಗೆ ಹೈ-ವೋಲ್ಟೇಜ್ ಆಕ್ಷನ್ ಡ್ರಾಮಾಗೆ ಸಹಿ ಮಾಡಿದ್ದಾರೆ. 'ಗೆರಿಲ್ಲಾ ವಾರ್' ಎಂಬ ಶೀರ್ಷಿಕೆಯ ಈ ಚಿತ್ರದಲ್ಲಿ ಉಪೇಂದ್ರ ಯೋಧನಾಗಿ ಕಾಣಿಸಿಕೊಂಡಿದ್ದಾರೆ. ಅವರ ಹುಟ್ಟುಹಬ್ಬದ ಮುನ್ನಾದಿನ (ಸೆ. 18) ಚಿತ್ರದ ಫಸ್ಟ್ ಲುಕ್ ಪೋಸ್ಟರ್ ಬಿಡುಗಡೆಯಾಗಿದ್ದು, ಕೈಯಲ್ಲಿ ರೈಫಲ್ ಹಿಡಿದು ಯುದ್ಧಕ್ಕೆ ಸಿದ್ಧರಾಗಿರುವುದನ್ನು ಕಾಣಬಹುದು.

'ಗೆರಿಲ್ಲಾ ವಾರ್ ನನ್ನ 50ನೇ ಚಿತ್ರವಾಗಿದೆ. ತ್ರಿಶೂಲಂ ನಂತರ ಉಪೇಂದ್ರ ಅವರೊಂದಿಗಿನ ನನ್ನ ಎರಡನೇ ಸಹಯೋಗ ಇದಾಗಿದ್ದು, ಇದು ಪೋಸ್ಟ್-ಪ್ರೊಡಕ್ಷನ್ ಹಂತದಲ್ಲಿದೆ ಮತ್ತು ಈ ವರ್ಷದ ಕೊನೆಯಲ್ಲಿ ಬಿಡುಗಡೆಯಾಗುವ ನಿರೀಕ್ಷೆಯಿದೆ' ಎಂದು ಓಂ ಪ್ರಕಾಶ್ ರಾವ್ ಹೇಳುತ್ತಾರೆ.



'ಲಾಕಪ್ ಡೆತ್, ಎಕೆ 47, ಕಲಾಸಿಪಾಳ್ಯ ಮತ್ತು ಹುಚ್ಚ ಮುಂತಾದ ಹಿಟ್ ಚಿತ್ರಗಳ ಮೂಲಕ ಮಾಸ್ ಸಿನಿಮಾ ಬ್ರ್ಯಾಂಡ್ ಅನ್ನು ನಿರ್ಮಿಸಿರುವ ಓಂ ಪ್ರಕಾಶ್ ರಾವ್, ಎಸ್ ರಾವ್ ಸಿನಿ ಕ್ರಿಯೇಷನ್ಸ್ ಅಡಿಯಲ್ಲಿ ಆರ್ ವಾಸುದೇವ ರೆಡ್ಡಿ ಅವರೊಂದಿಗೆ ಈ ಹೊಸ ಚಿತ್ರವನ್ನು ನಿರ್ದೇಶಿಸುತ್ತಿದ್ದಾರೆ ಮತ್ತು ಸಹ-ನಿರ್ಮಾಣ ಕೂಡ ಮಾಡುತ್ತಿದ್ದಾರೆ. 'ನಾನು ಪಾರ್ಥ, ಹುಬ್ಬಳ್ಳಿ, ಮಂಡ್ಯ ಮತ್ತು ಫೀನಿಕ್ಸ್ ನಂತಹ ಚಿತ್ರಗಳನ್ನು ನಿರ್ಮಿಸಿದ್ದೇನೆ. ಸ್ವಲ್ಪ ಸಮಯದ ನಂತರ, ನಾನು ಬಲವಾಗಿ ನಂಬುವ ಕಥೆಯೊಂದಿಗೆ ಹಿಂತಿರುಗಿದ್ದೇನೆ' ಎಂದು ಅವರು ಹೇಳುತ್ತಾರೆ.

ಡೆನ್ನಿಸಾ ಪ್ರಕಾಶ್ ಕಥೆ ಬರೆದಿದ್ದು, ಚಿತ್ರಕಥೆಯನ್ನು ರಾವ್ ಬರೆಯುತ್ತಿದ್ದಾರೆ. ರಿಲ್ಲಾ ವಾರ್ ಆಪರೇಷನ್ ಸಿಂಧೂರದಿಂದ ಸ್ಫೂರ್ತಿ ಪಡೆದಿದ್ದು, ಇದು ಚಿತ್ರದ ಹಿನ್ನೆಲೆಯಾಗಲಿದೆ. 'ಇದು ಕೇವಲ ಮಿಲಿಟರಿ ನಾಟಕ ಅಥವಾ ಆ ಘಟನೆಯ ಪುನರಾವರ್ತನೆಯಲ್ಲ' ಎಂದು ಓಂ ಪ್ರಕಾಶ್ ರಾವ್ ವಿವರಿಸುತ್ತಾರೆ. 'ನಾವೆಲ್ಲರೂ ಸಮಾಜದಲ್ಲಿ ವಿಚ್ಛಿದ್ರಕಾರಕ ಶಕ್ತಿಗಳನ್ನು ಎದುರಿಸುತ್ತೇವೆ. ಉಪೇಂದ್ರ ನಿರ್ವಹಿಸಿರುವ ಪಾತ್ರವು ಕೇವಲ ಗಡಿ ಕಾವಲುಗಾರನಲ್ಲ, ಆದರೆ, ಆತ ನಿಜವಾದ ಸಮಸ್ಯೆಗಳನ್ನು ಪರಿಹರಿಸುವ ಚಿಂತನಶೀಲ ಯೋಧ. ಇದು ದೇಶಭಕ್ತಿಯ ಕಮರ್ಷಿಯಲ್ ಚಿತ್ರವಾಗಿದ್ದು, ಇದು ಅದ್ಭುತ ಮತ್ತು ಆತ್ಮದೊಂದಿಗೆ ಇರುತ್ತದೆ' ಎಂದರು.

# ತೆರೆಗೆ ಬರಲು 'ಬಿಳಿಚುಕ್ಕಿ ಹಳ್ಳಿಹಕ್ಕಿ' ಸಿದ್ಧ

ಮಹಿರ ಖ್ಯಾತಿಯ ಮಹೇಶ್ ಗೌಡ ನಿರ್ಮಿಸಿ, ನಿರ್ದೇಶಿಸಿರುವ 'ಬಿಳಿಚುಕ್ಕಿ ಹಳ್ಳಿಹಕ್ಕಿ' ಚಿತ್ರವು ಈಗಾಗಲೇ ತನ್ನ ಪೋಸ್ಟರ್‌ಗಳಿಂದ ಕುತೂಹಲ ಕೆರಳಿಸುತ್ತಿದೆ. ಈ ಚಿತ್ರವು ಈಗ ಬಿಡುಗಡೆಗೆ ಸಜ್ಜಾಗಿದ್ದು, ರಾಜ್ಯದಾದ್ಯಂತ ಅಕ್ಟೋಬರ್ 24 ರಂದು ಚಿತ್ರಮಂದಿರಗಳಲ್ಲಿ ತೆರೆಕಾಣಲಿದೆ.

ನಿರ್ದೇಶಕರ ಪ್ರಕಾರ, ಈ ಚಿತ್ರವು ಅಸಾಮಾನ್ಯ ವಿಷಯದ ಮೇಲೆ ಅವಲಂಬಿತವಾಗಿದೆ. ಇದು ತೊನ್ನು ಎಂದು ಕರೆಯಲ್ಪಡುವ ವಿಟಿಲಿಗೋ ರೋಗದಿಂದ ಬಳಲುವ ಅನೇಕರು ಅನುಭವಿಸುವ ಕಥೆಯನ್ನು ಹೇಳಲಿದೆ. ಆದರೆ, ತೆರೆ ಮೇಲೆ ವಿರಳವಾಗಿ ಕಂಡುಬರುವ ವಿಟಿಲಿಗೋವನ್ನು ಕೇಂದ್ರೀಕರಿಸಿದ ಮೊದಲ ಕನ್ನಡ ಚಿತ್ರವಾಗಿದೆ. ವೈದ್ಯಕೀಯ ಜಗತ್ತು ಇದನ್ನು ಚರ್ಮದ ಅಸ್ವಸ್ಥತೆ ಎಂದು ವರ್ಗೀಕರಿಸಿದರೂ, ಅದರ ಸುತ್ತಲೂ ಕಳಂಕ, ಪುರಾಣ ಮತ್ತು ತಪ್ಪು ತಿಳುವಳಿಕೆಯ ಪದರಗಳಿವೆ. ವಿಟಿಲಿಗೋದಿಂದ ಪ್ರಭಾವಿತವಾದ ಜೀವನದ ಆಂತರಿಕ ಪ್ರಕ್ಷುಬ್ಧತೆಯನ್ನು ಸೆರೆಹಿಡಿಯಲು ಮಹೇಶ್ ಪ್ರಯತ್ನಿಸಿದ್ದಾರೆ.



'ಮಹಿರ' ಚಿತ್ರವನ್ನು ಮೊದಲು ನಿರ್ದೇಶಿಸಿದ್ದ ಮಹೇಶ್, ಹೊನ್ನುಡಿ ಪ್ರೊಡಕ್ಷನ್ಸ್ ಬ್ಯಾನರ್ ಅಡಿಯಲ್ಲಿ ಈ ಚಿತ್ರವನ್ನು ನಿರ್ಮಿಸಿದ್ದಾರೆ. ಈ ಚಿತ್ರದ ತಯಾರಿಗಾಗಿಯೇ ಸಾಕಷ್ಟು ಸಮಯ ಮೀಸಲಿಟ್ಟಿದ್ದಾರೆ. ಕವಿತಾ ಪಾತ್ರದಲ್ಲಿ ರಂಗಭೂಮಿ ಪ್ರತಿಭೆ ಕಾಜಲ್ ಕುಂದರ್ ನಟಿಸಿದ್ದಾರೆ. ವಿಶಿಷ್ಟ ತಿರುವಿನಲ್ಲಿ, ವಿಟಿಲಿಗೋ ಇರುವ ಮಹೇಶ್ ನಾಯಕನಾಗಿ ನಟಿಸುತ್ತಾರೆ. ಪಾತ್ರಕ್ಕೆ ಜೀವಂತ ಅನುಭವವನ್ನು ತರುತ್ತಾರೆ.

## ಡಾರ್ಲಿಂಗ್ ಕೃಷ್ಣ ನಟನೆಯ ಬ್ರ್ಯಾಟ್‌ನ 'ಗಂಗಿ ಗಂಗಿ' ಹಾಡು ರಿಲೀಸ್; ಸಿನಿಮಾ ಬಿಡುಗಡೆ

ನಟ ಡಾರ್ಲಿಂಗ್ ಕೃಷ್ಣ ನಟನೆಯ ಬ್ರ್ಯಾಟ್ ಚಿತ್ರದ ಮತ್ತೊಂದು ಹಾಡು 'ಗಂಗಿ ಗಂಗಿ' ಬಿಡುಗಡೆಯಾಗಿದ್ದು, ತೀವ್ರ ಕುತೂಹಲ ಕೆರಳಿಸಿದೆ. ಬಾಲು ಬೆಳಗುಂದಿ ಮತ್ತು ಇಂದು ನಾಗರಾಜ್ ಹಾಡಿರುವ, ಅರ್ಜುನ್ ಜನ್ಯ ಸಂಗೀತ ಸಂಯೋಜಿಸಿರುವ ಈ ಹಾಡನ್ನು ಇತ್ತೀಚೆಗೆ ಸಾವಿರಾರು ಅಭಿಮಾನಿಗಳ ಸಮ್ಮುಖದಲ್ಲಿ ಅನಾವರಣಗೊಳಿಸಲಾಯಿತು. ಈ ಹಾಡು ಈಗಾಗಲೇ ಮೆಚ್ಚುಗೆ ಪಡೆದಿದೆ.

'ನಾನು ಜಾನಪದ ಗೀತೆಗಳೊಂದಿಗೆ ಪ್ರಾರಂಭಿಸಿದೆ ಮತ್ತು ನಂತರ ಅರ್ಜುನ್ ಜನ್ಯ ಮೂಲಕ ಈ ಅವಕಾಶ ಸಿಕ್ಕಿತು. ಈ ಹಾಡಿನ ಮೂಲಕ ನನ್ನ ಮೇಲೆ ನಂಬಿಕೆ ಇಟ್ಟಿದ್ದಕ್ಕಾಗಿ ನಿರ್ದೇಶಕರು ಮತ್ತು ನಿರ್ಮಾಪಕರಿಗೆ ನಾನು ಕೃತಜ್ಞನಾಗಿದ್ದೇನೆ' ಎಂದು ಸಾಹಿತ್ಯ ಬರೆದ ಬಾಲು ಬೆಳಗುಂದಿ ಹೇಳುತ್ತಾರೆ.

'ಬಾಲು ಬೆಳಗುಂದಿ ಅವರ ಸಾಹಿತ್ಯ ಮತ್ತು ಗಾಯನವು ಅರ್ಜುನ್ ಜನ್ಯ ಅವರ ಸಂಗೀತದೊಂದಿಗೆ ಸೇರಿಕೊಂಡು ಮಾಂತ್ರಿಕವಾಗಿದೆ. ಈ ಹಾಡು ಬ್ರ್ಯಾಟ್‌ಗೆ ಹೊಸ ಶಕ್ತಿಯನ್ನು ತರುತ್ತದೆ ಮತ್ತು ನಿರ್ದೇಶಕ ಶಶಾಂಕ್ ಅವರೊಂದಿಗಿನ ನಮ್ಮ ಕೆಮಿಸ್ಟ್ರಿಯನ್ನು ಪ್ರದರ್ಶಿಸುತ್ತದೆ' ಎಂದು ಡಾರ್ಲಿಂಗ್ ಕೃಷ್ಣ ತಿಳಿಸಿದರು.

'ಬ್ರ್ಯಾಟ್ ಒಂದು ಹೃದಯವಂತ ಆಕ್ಷನ್-ಥ್ರಿಲ್ಲರ್ ಚಿತ್ರವಾಗಿದೆ. ಗಂಗಿ ಗಂಗಿ ಹಾಡು ಚಿತ್ರಕ್ಕೆ ಅಭಿಮಾನಿಗಳು ಆನಂದಿಸುವ ಮೋಜಿನ, ಉತ್ಸಾಹವನ್ನು ಸೇರಿಸಿದೆ' ಎಂದು ನಿರ್ದೇಶಕ ಶಶಾಂಕ್ ಹೇಳುತ್ತಾರೆ. ಬ್ರ್ಯಾಟ್ ಮೂಲಕ ಪದಾರ್ಪಣೆ ಮಾಡುತ್ತಿರುವ ನಟಿ ಮನೀಷಾ ಕಂದಕೂರ್, 'ಗಂಗಿ ಗಂಗಿ' ಹಾಡು ಅದ್ಭುತವಾಗಿದೆ ಮತ್ತು ಇದು ನಾನು ನಿರ್ವಹಿಸಿರುವ ಮಧ್ಯಮ ವರ್ಗದ ಹುಡುಗಿಯ ಪಾತ್ರಕ್ಕೆ ನಿಜವಾಗಿಯೂ ಪೂರಕವಾಗಿದೆ' ಎಂದು ಅವರು ಹೇಳುತ್ತಾರೆ.

ನಟ ಡಾರ್ಲಿಂಗ್ ಕೃಷ್ಣ ನಟನೆಯ ಬ್ರ್ಯಾಟ್ ಚಿತ್ರದ ಮತ್ತೊಂದು ಹಾಡು 'ಗಂಗಿ ಗಂಗಿ' ಬಿಡುಗಡೆಯಾಗಿದ್ದು, ತೀವ್ರ ಕುತೂಹಲ ಕೆರಳಿಸಿದೆ. ಬಾಲು ಬೆಳಗುಂದಿ ಮತ್ತು ಇಂದು ನಾಗರಾಜ್ ಹಾಡಿರುವ, ಅರ್ಜುನ್ ಜನ್ಯ ಸಂಗೀತ ಸಂಯೋಜಿಸಿರುವ ಈ ಹಾಡನ್ನು ಇತ್ತೀಚೆಗೆ ಸಾವಿರಾರು ಅಭಿಮಾನಿಗಳ ಸಮ್ಮುಖದಲ್ಲಿ ಅನಾವರಣಗೊಳಿಸಲಾಯಿತು. ಈ ಹಾಡು ಈಗಾಗಲೇ ಮೆಚ್ಚುಗೆ ಪಡೆದಿದೆ.

'ನಾನು ಜಾನಪದ ಗೀತೆಗಳೊಂದಿಗೆ ಪ್ರಾರಂಭಿಸಿದೆ ಮತ್ತು ನಂತರ ಅರ್ಜುನ್ ಜನ್ಯ ಮೂಲಕ ಈ ಅವಕಾಶ ಸಿಕ್ಕಿತು. ಈ ಹಾಡಿನ ಮೂಲಕ ನನ್ನ ಮೇಲೆ ನಂಬಿಕೆ ಇಟ್ಟಿದ್ದಕ್ಕಾಗಿ ನಿರ್ದೇಶಕರು ಮತ್ತು ನಿರ್ಮಾಪಕರಿಗೆ ನಾನು ಕೃತಜ್ಞನಾಗಿದ್ದೇನೆ' ಎಂದು ಸಾಹಿತ್ಯ ಬರೆದ ಬಾಲು ಬೆಳಗುಂದಿ ಹೇಳುತ್ತಾರೆ.

'ಬಾಲು ಬೆಳಗುಂದಿ ಅವರ ಸಾಹಿತ್ಯ ಮತ್ತು ಗಾಯನವು ಅರ್ಜುನ್ ಜನ್ಯ ಅವರ ಸಂಗೀತದೊಂದಿಗೆ ಸೇರಿಕೊಂಡು ಮಾಂತ್ರಿಕವಾಗಿದೆ. ಈ ಹಾಡು ಬ್ರ್ಯಾಟ್‌ಗೆ ಹೊಸ ಶಕ್ತಿಯನ್ನು ತರುತ್ತದೆ ಮತ್ತು ನಿರ್ದೇಶಕ ಶಶಾಂಕ್ ಅವರೊಂದಿಗಿನ ನಮ್ಮ ಕೆಮಿಸ್ಟ್ರಿಯನ್ನು ಪ್ರದರ್ಶಿಸುತ್ತದೆ' ಎಂದು ಡಾರ್ಲಿಂಗ್ ಕೃಷ್ಣ ತಿಳಿಸಿದರು.

# ದೇಶದ ಎಲ್ಲಾ ವರ್ಗದ ಜನ ಸುಶಿಕ್ಷಿತರಾದಾಗ ಸಮಸಮಾಜ ನಿರ್ಮಾಣ : ಶಾಸಕ ತಮ್ಮಯ್ಯ



**ಚಿಕ್ಕಮಗಳೂರು:** ದೇಶದ ಎಲ್ಲಾ ವರ್ಗದ ಜನ ಸುಶಿಕ್ಷಿತರಾದಾಗ ಮಾತ್ರ ಸಮ ಸಮಾಜ ನಿರ್ಮಾಣವಾಗುತ್ತದೆ ಎಂದು ಶಾಸಕ ಹೆಚ್.ಡಿ. ತಮ್ಮಯ್ಯ ಅಭಿಪ್ರಾಯಿಸಿದರು.

ಅವರು ಇಂದು ಕ್ಷೇತ್ರದ ಸಖರಾಯಪಟ್ಟಣದಲ್ಲಿ ಸುಮಾರು 10 ಲಕ್ಷ ರೂ ವೆಚ್ಚದಲ್ಲಿ ನಿರ್ಮಾಣ ಮಾಡಲಾಗಿರುವ ಡಾ. ಅಂಬೇಡ್ಕರ್ ಆಟೋ ನಿಲ್ದಾಣವನ್ನು ಉದ್ಘಾಟಿಸಿ ಮಾತನಾಡಿದರು.

12ನೇ ಶತಮಾನದಲ್ಲಿ ಬಸವಣ್ಣ, 19ನೇ ಶತಮಾನದಲ್ಲಿ ಬಿ.ಆರ್ ಅಂಬೇಡ್ಕರ್‌ರ ಪರಿಶ್ರಮದ ಫಲವಾಗಿ ಇಂದು ನಾವೆಲ್ಲಾ ನೆಮ್ಮದಿ ಜೀವನ ನಡೆಸಲು ಕಾರಣವಾಗಿದೆ ಎಂದು ತಿಳಿಸಿದರು.

ಆಟೋ ಚಾಲಕರು ಮತ್ತು ಮಾಲಿಕರ ಕುಟುಂಬದ ಎಲ್ಲಾ ಮಕ್ಕಳು ಡಾ. ಬಿ.ಆರ್ ಅಂಬೇಡ್ಕರ್ ಆಶಯದಂತೆ ಉತ್ತಮ ಶಿಕ್ಷಣ ಪಡೆಯಬೇಕು. ಇದು ಕಾರ್ಯರೂಪಕ್ಕೆ ಬಂದಾಗ ಸಮೃದ್ಧ ಜೀವನ ನಡೆಸಲು ಸಹಕಾರಿಯಾಗಲಿದೆ ಎಂದರು.

ಆಟೋ, ಟ್ಯಾಕ್ಸಿ ಮಾಲಿಕರು, ಚಾಲಕರು ಆಕಸ್ಮಿಕ ಅಪಘಾತದಲ್ಲಿ ಮೃತಪಟ್ಟರೆ ರಾಜ್ಯಸರ್ಕಾರ 5 ಲಕ್ಷ ರೂ ವಿಶೇಷ ಪರಿಹಾರ ಕೊಡಲು ನಿರ್ಧಾರ ಕೈಗೊಂಡಿದೆ. ಅದಕ್ಕಾಗಿ ಕಾರ್ಮಿಕ ಇಲಾಖೆಯಲ್ಲಿ ತಾವುಗಳು ಕೂಡಲೇ ನೊಂದಣಿ ಮಾಡಿಸಿಕೊಳ್ಳಿ ಎಂದು ಸಲಹೆ ನೀಡಿದರು.

ಆಟೋ ಚಾಲಕರು ನೀಡಿದ ಮನವಿಯಲ್ಲಿರುವ ಕೆಲವು ಬೇಡಿಕೆಗಳನ್ನು ಹಂತ ಹಂತವಾಗಿ ಈಡೇರಿಸುವುದಾಗಿ ಭರವಸೆ ನೀಡಿದ ಅವರು, ಸಖರಾಯಪಟ್ಟಣ ಬಸ್ ನಿಲ್ದಾಣದಿಂದ ಕಲ್ಮರುಡಿ ಮಠದವರೆಗೆ ಸುಸಜ್ಜಿತ ಬೀದಿದೀಪಗಳನ್ನು ಅಳವಡಿಸಲಾಗುವುದು ಹಾಗೂ ಬಸ್ ನಿಲ್ದಾಣದ ಪಕ್ಕದಲ್ಲಿ ನೂತನ ಆಟೋ ನಿಲ್ದಾಣ ನಿರ್ಮಾಣ ಸಧ್ಯದಲ್ಲೇ ಮಾಡುವುದಾಗಿ ವಿಶ್ವಾಸ ವ್ಯಕ್ತಪಡಿಸಿದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಹಡಿಮನೆ ಸತೀಶ್ ಮಾತನಾಡಿ, ಆಟೋ ನಂಬಿ ಬದುಕುತ್ತಿರುವ ಚಾಲಕರಿಗೆ ಆಟೋ ನಿಲ್ದಾಣ ನಿರ್ಮಾಣ ಮಾಡಿದರೆ ಶಾಶ್ವತವಾಗಿ ಸಮಸ್ಯೆ ಬಗೆಹರಿಯುತ್ತದೆ ಎಂದರು.

ಆಟೋ ಚಾಲಕರಲ್ಲಿ ಚಾಲನೆ ಪರವಾನಗಿ, ವಿಮೆ, ಸಮವಸ್ತ್ರ, ಇವುಗಳು ಸಮರ್ಪಕವಾಗಿದ್ದಾಗ ಗೌರವ ಸಿಗುತ್ತದೆ. ದಾಖಲಾತಿಗಳು ಇಲ್ಲ ಎಂಬ ಕಾರಣಕ್ಕೆ ಕೇಸು ದಾಖಲಿಸದೆ ಅರಿವು ಮೂಡಿಸಿ ಎಂದು ಪೊಲೀಸ್ ಠಾಣಾಧಿಕಾರಿಗೆ ಸೂಚನೆ ನೀಡಿದ ಅವರು, ಇದ-ರಿಂದ ಶಿಸ್ತು ಮೂಡಿಸಿದಂತಾಗುತ್ತದೆಂದು ಹೇಳಿದರು.

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗ್ರಾಮ ಪಂಚಾಯಿತಿ ಅಧ್ಯಕ್ಷೆ ರಾಜಮ್ಮ ವಹಿಸಿದ್ದರು. ಸದಸ್ಯರುಗಳಾದ ಲೋಕೇಶ್, ಗಣೇಶ್, ಬಸವರಾಜ್, ಆನಂದ್ ನಾಯ್ಕ, ಸಮುನ್, ತೇಜಸ್ವಿ, ಠಾಣಾಧಿಕಾರಿ ಪವನ್ ಕುಮಾರ್, ಪಿಡಿಓ ಲತಾಮಣಿ, ಆಟೋ ಸಂಘದ ಅಧ್ಯಕ್ಷ ಪ್ರದೀಪ್ ಉಪಸ್ಥಿತರಿದ್ದರು.

# ಮಹಾನ್ ದಾರ್ಶನಿಕರು ಬಡವರ್ಗದ ಜನರನ್ನು ಸಮಾಜದ ಮುನ್ನಲೆಗೆ ತರಲು ಶ್ರಮಿಸಿದ್ದಾರೆ



**ಚಿಕ್ಕಮಗಳೂರು:** ಹಲವಾರು ಮಹಾನ್ ದಾರ್ಶನಿಕರು ಸಮ ಸಮಾಜ ನಿರ್ಮಾಣಕ್ಕೆ ಶ್ರಮಿಸಿದ ಫಲವಾಗಿ ಇಂದು ಎಲ್ಲಾ ಬಡವರ್ಗದ ಜನರನ್ನು ಸಮಾಜದ ಮುನ್ನಲೆಗೆ ತರಲು ಪ್ರಯತ್ನಿಸಲಾಗುತ್ತಿದೆ ಎಂದು ಶಾಸಕ ಹೆಚ್.ಡಿ. ತಮ್ಮಯ್ಯ ಹೇಳಿದರು.

ಅವರು ಇಲ್ಲಿನ ಲಯನ್ಸ್ ಸೇವಾ ಭವನದಲ್ಲಿ ಜಮಾಅತೆ ಇಸ್ಲಾಮಿ ಹಿಂದ್ ಹಾಗೂ ಲಯನ್ಸ್ ಸೇವಾ ಸಂಸ್ಥೆ ಇವರುಗಳ ಸಹಯೋಗದಲ್ಲಿ ಏರ್ಪಡಿಸಲಾಗಿದ್ದ ನ್ಯಾಯದ ಹರಿಕಾರ ಪ್ರವಾದಿ ಮಹಮದ್ ಕುರಿತ ವಿಚಾರಗೋಷ್ಠಿಯಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.

ಬುದ್ಧ, ಬಸವ, ಅಬೇಡ್ಕರ್, ಕನಕದಾಸರು, ಪ್ರವಾದಿ ಮಹಮದ್ ಪೈಗಂಬರ್, ಕುವೆಂಪು, ಸ್ವಾಮಿ ವಿವೇಕಾನಂದ, ವಾಲ್ಮೀಕಿ ಮುಂತಾದ ಹಲವಾರು ದಾರ್ಶನಿಕರು ಎಲ್ಲಾ ಧರ್ಮದ ಶೋಷಿತರನ್ನು ಸಮಾಜದ ಮುನ್ನಲೆಗೆ ತರುವ ಪ್ರಯತ್ನ ಮಾಡಿ ಮೂಢನಂಬಿಕೆ, ಮೌಢ್ಯ, ಕಂದಾಚಾರಗಳಿಂದ ಹೊರತರುವ ಕೆಲಸ ಮಾಡಿದ್ದಾರೆಂದು ಶ್ಲಾಘಿಸಿದರು.

ಮಹಾನ್ ದಾರ್ಶನಿಕರ ವಿಚಾರಧಾರೆ, ತತ್ವಾದರ್ಶಗಳಿಗೆ ಇಂದೂ ಸಹ ಬೆಂಬಲ ವ್ಯಕ್ತವಾಗುತ್ತಿರುವುದು ಅಭಿನಂದನೀಯ. ಸರ್ವಧರ್ಮಗಳ ದೇಶ ಭಾರತ. ಏಕತೆ, ಐಕ್ಯತೆ, ಭಾವೈಕ್ಯತೆಯನ್ನು ಹೊಂದಿದೆ. ಈ ನಿಟ್ಟಿನಲ್ಲಿ ನಾವೆಲ್ಲಾ ಭಾರತೀಯರು ಎಂಬ ಮನೋಭಾವವನ್ನು ಮಕ್ಕಳಲ್ಲಿ ತಿಳಿವಳಿಕೆ ಮೂಡಿಸಬೇಕೆಂದು ಕರೆನೀಡಿದರು.

ದೇಶವಾಸಿಗಳ ನೆಮ್ಮದಿ ಬದುಕಿಗೆ ನಾಂದಿಯಾಗಿರುವ ಸೈನಿಕರನ್ನು ಗೌರವಿಸಬೇಕಾಗಿದೆ. ಯಾವುದೇ ವ್ಯಕ್ತಿ ಯಾವುದೇ ಧರ್ಮದಲ್ಲಿ ಜನಿಸಿದ್ದರೂ ನಾವು ದೇಶವನ್ನು ಗೌರವಿಸಬೇಕು. ಇನ್ನೊಂದು ಧರ್ಮವನ್ನು ಪ್ರೀತಿಸಬೇಕು ಎಂಬುದನ್ನು ದಾರ್ಶನಿಕರು ಹೇಳಿರುವುದು ಆಚರಣೆಗೆ ಬಂದಾಗ ದೇಶದಲ್ಲಿ ಶಾಂತಿ ಮೂಡುತ್ತದೆ ಎಂದರು.

ನಿವೃತ್ತ ಉಪನ್ಯಾಸಕ ಹಾಗೂ ಸಾಹಿತಿ ಬಿ.ತಿಪ್ಪೇರುದ್ರಪ್ಪ ಮಾತನಾಡಿ, ಕೆಟ್ಟ ಪ್ರಚೋದನೆಗಳಿಗೆ ಅವಕಾಶ ನೀಡದೆ ಹಿಂದೂ, ಮುಸ್ಲಿಂ ಸಮುದಾಯ ಒಟ್ಟಿಗೆ ಸೇರಿದಾಗ ಭಾವೈಕ್ಯತೆ ಬೆಳೆಯುತ್ತದೆ. ಜಗತ್ತಿನಲ್ಲಿ, ನಾಡಿನಲ್ಲಿ ಅನ್ಯಾಯ, ಅಶಾಂತಿ, ಮೌಢ್ಯತೆ ನಡೆಯುತ್ತಿದ್ದಾಗ ಏಸುಕ್ರಿಸ್ತ, ಪ್ರವಾದಿ ಮಹಮದ್ ಪೈಗಂಬರ್, ಬಸವಣ್ಣ ಮುಂತಾದವರು ಆಯಾ ಕಾಲಘಟ್ಟದಲ್ಲಿ ಈ ಸಮುದಾಯಗಳ ಮಧ್ಯೆ ಇದ್ದ ಅಡ್ಡಗೋಡೆಯನ್ನು ಕೆಡವಿ ನಾವೆಲ್ಲಾ ಒಂದು ಎಂಬ ಭಾವನೆ ಮೂಡಿಸಿದ್ದರು ಎಂದು ವಿಶ್ಲೇಷಿಸಿದರು,

# ಪಾಕ್ ವಾಯುಪಡೆ ವೈಮಾನಿಕ ದಾಳಿಗೆ 30 ನಾಗರಿಕರ ಸಾವು



**ಇಸ್ಲಾಮಾಬಾದ್:** ಪಾಕಿಸ್ತಾನದ ವಾಯುಪಡೆ ನಡೆಸಿರುವ ವೈಮಾನಿಕ ದಾಳಿಯಲ್ಲಿ 30 ಮಂದಿ ನಾಗರಿಕರು ಮೃತಪಟ್ಟು, ನೂರಾರು ಮಂದಿ ಗಾಯಗೊಂಡಿದ್ದಾರೆ.

ಪಾಕಿಸ್ತಾನದ ವಾಯುಪಡೆ ಆಫ್ಘಾನಿಸ್ತಾನದ ಗಡಿಯಲ್ಲಿ ಖೈಬರ್ ಪಂಖುತ್ವಾ ಗ್ರಾಮದ ಮೇಲೆ ಉಗ್ರರಿದ್ದಾರೆ ಎಂದು 8 ಬಾಂಬ್‌ಗಳನ್ನು ಹಾಕಿದ್ದು, ಈ ಬಾಂಬ್ ದಾಳಿಯಲ್ಲಿ ಕನಿಷ್ಠ 30 ಮಂದಿ ಗ್ರಾಮಸ್ಥರು ಮೃತಪಟ್ಟಿದ್ದಾರೆ. ನೂರಾರು ಮಂದಿ ಗಾಯಗೊಂಡಿದ್ದು, ಮೃತಪಟ್ಟವರಲ್ಲಿ ಮಕ್ಕಳು ಮತ್ತು ಮಹಿಳೆಯರು ಸೇರಿದ್ದಾರೆ.

ಇಂದು ಬೆಳಿಗ್ಗೆ ಖೈಬರ್ ಪಂಖುತ್ವಾ ಗ್ರಾಮದಲ್ಲಿ ತೆಹರಿಕ್-ಎ-ತಾಲಿಬಾನ್ ಉಗ್ರರ ಅಡಗು ತಾಣಗಳ ಮೇಲೆ ಪಾಕಿಸ್ತಾನದ ಯುದ್ಧ ವಿಮಾನಗಳು ಬಾಂಬ್ ದಾಳಿ ನಡೆಸಿದ್ದು, ಈ ಬಾಂಬ್ ದಾಳಿಯಲ್ಲಿ ಉಗ್ರರ ಬದಲು ನಾಗರಿಕರೇ ಮೃತಪಟ್ಟಿದ್ದಾರೆ ಎಂದು ಪಾಕಿಸ್ತಾನದ ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ.

ಪಾಕಿಸ್ತಾನ ವಾಯುಪಡೆ ನಡೆಸಿರುವ ಬಾಂಬ್ ದಾಳಿಯ ಪರಿಸ್ಥಿತಿಯ ಬಗ್ಗೆ ಸ್ಪಷ್ಟ ಚಿತ್ರಣಗಳು ಸಿಗಬೇಕಿದೆ. ಉಗ್ರರ ಮೇಲೆ ಬಾಂಬ್ ದಾಳಿ ನಡೆಸಿದೆ ಎಂದು ವಾಯುಪಡೆ ಹೇಳಿದ್ದರೂ ವಾಯುಪಡೆಯ ಬಾಂಬ್ ದಾಳಿಯಲ್ಲಿ ಸತ್ತವರೆಲ್ಲರೂ ನಾಗರಿಕರೆ ಆಗಿದ್ದಾರೆ.

ಖೈಬರ್ ಪಂಖುತ್ವಾ ಗ್ರಾಮದಲ್ಲಿ ಮಹಿಳೆಯರು, ಮಕ್ಕಳು ಸೇರಿದಂತೆ ಹಲವರ ಶವಗಳು ಬಿದ್ದಿರುವ ಚಿತ್ರಗಳು ದೊರೆತಿದ್ದು, ನಾಗರಿಕರೇ ಬಾಂಬ್ ದಾಳಿಯಲ್ಲಿ ಮೃತಪಟ್ಟಿರುವುದು ಎಂದು ಸ್ಥಳೀಯ ಮಾಧ್ಯಮ ವರದಿಗಳು ಹೇಳಿವೆ.

ಖೈಬರ್ ಪಂಖುತ್ವಾ ಗ್ರಾಮದಲ್ಲಿ ಪಾಕ್ ಸೇನಾಪಡೆ ಭಯೋತ್ಪದನಾ ನಿಗ್ರಹ ಕಾರ್ಯಾಚರಣೆಯನ್ನು ಈ ಹಿಂದೆಯೂ ನಡೆಸಿದ್ದು, ಆ ಸಂದರ್ಭದಲ್ಲಿ ನಾಗರಿಕರ ಸಾವಿನ ವರದಿಗಳು ವರದಿಯಾಗಿತ್ತು.

ಜೂನ್‌ನಲ್ಲಿ ಪಾಕ್ ಸೇನಾ ಪಡೆ ನಡೆಸಿದ್ದ ಡ್ರೋಣ್ ದಾಳಿಯಲ್ಲಿ ನಾಗರಿಕರು ಮೃತಪಟ್ಟಿದ್ದರುವುದು ಪಾಕಿಸ್ತಾನದ ಆಡಳಿತ ನಾಗರಿಕರ ಜೀವನದ ಬಗ್ಗೆ ತೋರುತ್ತಿರುವ ನಿರ್ಲಕ್ಷ್ಯವನ್ನು ಸೂಚಿಸುತ್ತದೆ ಎಂದು ಅಮ್ನೆಸ್ಟಿ ಇಂಟರ್‌ನ್ಯಾಷನಲ್ ಹೇಳಿದೆ.

ಖೈಬರ್ ಪಂಖುತ್ವಾದಲ್ಲಿನ ನಾಗರಿಕರ ಜೀವ ಮತ್ತು ಆಸ್ತಿಯನ್ನು ರಕ್ಷಿಸಲು ಪಾಕಿಸ್ತಾನದ ಅಧಿಕಾರಿಗಳು ವಿಫಲರಾಗಿದ್ದಾರೆ. ಈ ಪ್ರಾಂತ್ಯದಲ್ಲಿ ಸೇನಾಪಡೆಗಳ ಡ್ರೋಣ್ ದಾಳಿಗೆ ನಾಗರಿಕರು ಜೀವ ತೆತ್ತುತ್ತಿದ್ದಾರೆ ಎಂದು ಅಮ್ನೆಸ್ಟಿ ಇಂಟರ್‌ನ್ಯಾಷನಲ್ ದಕ್ಷಿಣಾ ಏಷ್ಯಾದ ಉಪನಿರ್ದೇಶಕಿ ಇಸಾಬೆಲ್ಲೆ ಹೇಳಿದ್ದಾರೆ.

# ದಸರಾ ಕುಸ್ತಿ ಪಂದ್ಯಾವಳಿಗೆ ಸಿಎಂ ಚಾಲನೆ

**ಮೈಸೂರು:** ನಾಡಹಬ್ಬ ಮೈಸೂರು ದಸರಾ ಮಹೋತ್ಸವ-2025ರ ಕುಸ್ತಿ ಪಂದ್ಯಾವಳಿಗೆ ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕುಸ್ತಿಪಟುಗಳಿಗೆ ಬೆನ್ನು ತಟ್ಟುವ ಮೂಲಕ ಚಾಲನೆ ನೀಡಿದರು.



ನಗರದ ಕರ್ನಾಟಕ ವಸ್ತು ಪ್ರದರ್ಶನದ ಪ್ರಾಧಿಕಾರ ಆವರಣ ಶ್ರೀ ಡಿ.ದೇವರಾಜು ಅರಸು ವಿವಿಧೋದ್ದೇಶ ಕ್ರೀಡಾಂಗಣದಲ್ಲಿ ಆಯೋಜಿಸಿರುವ ದಸರಾ ಕುಸ್ತಿ ಪಂದ್ಯಾವಳಿಯನ್ನು ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವೀಕ್ಷಿಸಿ ಕುಸ್ತಿ ಪಟುಗಳಿಗೆ ಪ್ರೋತ್ಸಾಹ ನೀಡಿದರು. ಮೈಸೂರಿನ ಮಹದೇಪುರ ಪೈಲ್ವಾನ್ ವಿಕಾಸ್ ಹಾಗೂ ದಾವಣಗೆರೆ ಕ್ರೀಡಾನಿಲಯದ ಪೈಲ್ವಾನ್ ಕಿರಣ್ ನಡುವೆ ನಡೆದ 30 ನಿಮಿಷದ ಮೊದಲ ಕುಸ್ತಿಯು ಪೈಪೋಟಿಯಿಂದ ನಡೆಯಿತು. ಅಂತಿಮವಾಗಿ 22 ನಿಮಿಷದಲ್ಲಿ ಪೈಲ್ವಾನ್ ವಿಕಾಸ್ ಜಯಶೀಲರಾದರು. ಮಹಿಳಾ ಕುಸ್ತಿ ಪಟುಗಳಾದ ಬೆಂಗಳೂರಿನ ಪುಷ್ಪ ಹಾಗೂ ಬೆಳಗಾವಿಯ ನಂದಿನಿ ನಡುವೆ ನಡೆದ ಕುಸ್ತಿಯಲ್ಲಿ 1 ನಿಮಿಷ 10 ಸೆಕೆಂಡ್ ನಲ್ಲಿ ನಂದಿನಿ ಜಯಗಳಿಸಿದರು.

ಅಥಣಿಯ ಪೈಲ್ವಾನ್ ಸುರೇಶ್ ಲಂಕೋಟಿ ಹಾಗೂ ದಾವಣಗೆರೆ ಕ್ರೀಡಾ ನಿಲಯದ ಪೈಲ್ವಾನ್ ಹನುಮಂಥ ವಿಠಲ ಬೇವಿನ ಮರ ನಡುವೆ ಕುಸ್ತಿ ರೋಚಕತೆಯಿಂದ ಕೂಡಿತ್ತು. ಕಾರ್ಯಕ್ರಮದಲ್ಲಿ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರಾದ ಕೆ.ವೆಂಕಟೇಶ್, ಚಾಮರಾಜ ನಗರ ಲೋಕಸಭಾ ಸದಸ್ಯರಾದ ಸುನೀಲ್ ಬೋಸ್, ಶಾಸಕರಾದ ಎ.ಆರ್. ಕೃಷ್ಣಮೂರ್ತಿ, ರವಿಶಂಕರ್ ಡಿ, ಶ್ರೀವತ್ಸ, ಅನಿಲ್ ಚಿಕ್ಕಮಾದು, ವಿಧಾನ ಪರಿಷತ್ ಸದಸ್ಯರಾದ ಡಾ.ಡಿ.ತಿಮ್ಮಯ್ಯ, ಗ್ಯಾರೆಂಟಿ ಯೋಜನೆ ರಾಜ್ಯ ಉಪಾಧ್ಯಕ್ಷರಾದ ಡಾ.ಪುಷ್ಪಾವತಿ ಅಮರನಾಥ್, ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷರಾದ ಅಯೂಬ್ ಖಾನ್, ಜಿಲ್ಲಾಧಿಕಾರಿ ಜಿ. ಲಕ್ಷ್ಮಿಕಾಂತ ರೆಡ್ಡಿ ಸೇರಿದಂತೆ ಇತರರು ಇದ್ದರು.

# ನಾವೀನ್ಯತೆ ಹೆಚ್ಚಳಕ್ಕೆ 1500 ಕೋಟಿ ವೆಚ್ಚ: ಪ್ರಿಯಾಂಕ್

**ಬೆಂಗಳೂರು:** ಕರ್ನಾಟಕ ಸರ್ಕಾರದ ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆಯಿಂದ, ಬೆಂಗಳೂರು ಹೊರತು ಪಡಿಸಿ ರಾಜ್ಯಾದ್ಯಂತ ನಾವೀನ್ಯತೆಯನ್ನು ಹೆಚ್ಚಿಸಲು, ಹಾಗೂ ಬೆಳವಣಿಗೆಯನ್ನು ವೇಗಗೊಳಿಸಲು ರೂ. 1,000 ಕೋಟಿ ವೆಚ್ಚದಲ್ಲಿ ಸ್ಥಳೀಯ ಆರ್ಥಿಕ ವೇಗವರ್ಧಕ ಕಾರ್ಯಕ್ರಮ ವನ್ನು ಅನಾವರಣಗೊಳಿಸಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್



ಖರ್ಗೆ ಮಾಹಿತಿ ನೀಡಿದ್ದಾರೆ.

ವಿಧಾನಸೌಧದಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು

ಬೆಂಗಳೂರು ಹೊರತು ಪಡಿಸಿ ರಾಜ್ಯಾದ್ಯಂತ ನಾವೀನ್ಯತೆಯನ್ನು ಉತ್ತೇಜಿಸಲು, 5 ಲಕ್ಷ ಉದ್ಯೋಗಗಳನ್ನು ಸೃಷ್ಟಿಸಲು ಮತ್ತು ದೃಢವಾದ ನವೋದ್ಯಮ ಪರಿಸರ ವ್ಯವಸ್ಥೆಗಳನ್ನು ನಿರ್ಮಿಸಲು ವಿನ್ಯಾಸಗೊಳಿಸಲಾದ ಮಹತ್ವದ ಕಾರ್ಯಕ್ರಮವಾಗಿದೆ ಎಂದೂ ಹೇಳಿದರು.

ಕರ್ನಾಟಕ ಸರ್ಕಾರದ ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆ ವತಿಯಿಂದ ಜಾರಿಗೊಳಿಸಲಾಗುತ್ತಿರುವ ಮಹತ್ವದ, ಸ್ಥಳೀಯ ಆರ್ಥಿಕ ವೇಗವರ್ಧಕ ಕಾರ್ಯಕ್ರಮ ಕುರಿತು ವಿವರಿಸಿದ ಸಚಿವರು ಐದು ವರ್ಷಗಳಲ್ಲಿ ರೂ. 1,000 ಕೋಟಿ ವೆಚ್ಚದ ಮಹತ್ವಾಕಾಂಕ್ಷೆಯ ಯೋಜನೆಯೊಂದಿಗೆ, "LEAP" ರಾಜ್ಯದಾದ್ಯಂತ ನಾವೀನ್ಯತೆಯನ್ನು ಉತ್ತೇಜಿಸುವ, ಅವಕಾಶಗಳನ್ನು ಜನಸಾಮಾನ್ಯಗೊಳಿಸುವುದು ಮತ್ತು ಸಮತೋಲನ ಆರ್ಥಿಕ ಬೆಳವಣಿಗೆಯನ್ನು ಮುನ್ನಡೆಸುವ ಕಾರ್ಯತಂತ್ರದ ಮತ್ತು ಸಮಗ್ರ ಬದ್ಧತೆಯನ್ನು ಪ್ರತಿನಿಧಿಸುತ್ತದೆ ಎಂದರು.

# ಬೀದಿನಾಯಿಗಳ ನಿಯಂತ್ರಣಕ್ಕೆ ಅಗತ್ಯ ಮುಂಜಾಗ್ರತಾ ಕ್ರಮ : ಶೀಲಾದಿನೇಶ್

**ಚಿಕ್ಕಮಗಳೂರು:** ನಗರದಲ್ಲಿ ಬೀದಿನಾಯಿಗಳ ಉಪಟಳದಿಂದಾಗಿ ಹಲವಾರು ಮಕ್ಕಳು, ನಾಗರಿಕರನ್ನು ಕಚ್ಚಿಗಾಯಗೊಳಿಸಿರುವುದನ್ನು ಗಂಭೀರವಾಗಿ ಪರಿಗಣಿಸಿ ಶೀಘ್ರದಲ್ಲೇ ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗುವುದು ಎಂದು ನಗರಸಭಾಧ್ಯಕ್ಷೆ ಶೀಲಾದಿನೇಶ್ ತಿಳಿಸಿದರು.



ಅವರು ನಗರಸಭೆ ಆವರಣದಲ್ಲಿ ಆಯೋಜಿಸಲಾಗಿದ್ದ ಪಶುಪಾಲನಾ ಇಲಾಖೆ ಹಾಗೂ ನಗರಸಭೆ ಇವರುಗಳ ಸಂಯುಕ್ತಾಶ್ರಯದಲ್ಲಿ ಬೀದಿನಾಯಗಳ ನಿಯಂತ್ರಣ ಕುರಿತ ವಿಶೇಷ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಬೀದಿನಾಯಿಗಳ ನಿಯಂತ್ರಣಕ್ಕೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಸಭೆ ನಡೆಸಲಾಗಿದ್ದು, ಅಗತ್ಯ ನಿಯಂತ್ರಣಕ್ಕೆ ಬೇಕಾದ ಮುಂಜಾಗ್ರತಾ ಕ್ರಮ ಕೈಗೊಳ್ಳುವುದರ ಬಗ್ಗೆ ಈ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗಿದೆ ಎಂದು ಹೇಳಿದರು.

ನಗರಸಭೆ ಸದಸ್ಯರು ತಮ್ಮ ವಾರ್ಡ್‌ಗಳಲ್ಲಿ ಬೀದಿನಾಯಿಗಳ ಉಪಟಳದಿಂದಾಗಿ ಮಕ್ಕಳು ಮತ್ತು ನಾಗರಿಕರಿಗೆ ಬಹಳ ತೊಂದರೆಯಾಗುತ್ತಿದೆ ಎಂದು ಬಂದ ದೂರುಗಳ ಹಿನ್ನೆಲೆಯಲ್ಲಿ ಅಗತ್ಯಕ್ರಮ ಕೈಗೊಳ್ಳುವುದರ ಬಗ್ಗೆ ಸೂಕ್ತ ನಿರ್ಧಾರಕ್ಕೆ ಬರಲಾಗಿದೆ ಎಂದರು.

ಪೌರಾಯುಕ್ತ ಬಿ.ಸಿ. ಬಸವರಾಜ್ ಮಾತನಾಡಿ, ಬೀದಿನಾಯಿಗಳ ಉಪಟಳಕ್ಕೆ ಕಡಿವಾಣ ಹಾಕುವ ದೃಷ್ಟಿಯಿಂದ ನಗರಸಭೆ ಮತ್ತು ಸ್ಥಳೀಯ ಸಂಘಸಂಸ್ಥೆಗಳನ್ನು ಒಳಗೊಂಡಂತೆ ಈ ಕುರಿತು ಆರು ಬಾರಿ ಟೆಂಡರ್ ಕರೆಯಲಾಗಿದ್ದು, ಯಾರೂ ಭಾಗವಹಿಸಿಲ್ಲ. ತರೀಕೆರೆಯಲ್ಲಿ 2, ಕಡೂರಿನಲ್ಲಿ 2 ಬಾರಿ ಟೆಂಡರ್ ಕರೆದಿದ್ದರೂ ಯಾರೂ ಭಾಗವಹಿಸುತ್ತಿಲ್ಲ ಎಂದು ವಿಷಾಧಿಸಿದರು.

ಬೆಂಗಳೂರಿನ ಡಬ್ಲೂಬಿಎನ್ ಎಸ್ ಸಂಸ್ಥೆ ಈಗ ಮುಂದೆ ಬಂದಿದ್ದು, ಪಶುಪಾಲನಾ ಇಲಾಖೆಯ ಸಹಯೋಗದಲ್ಲಿ ಆರೋಗ್ಯಪೂರ್ಣ ಚರ್ಚೆ ನಡೆದಿದೆ. ನಾಯಿಗಳನ್ನು ಹಿಡಿಯುವ ಬಗ್ಗೆ ನಗರಸಭೆ ಪೌರ ಕಾರ್ಮಿಕರಿಗೆ ತರಬೇತಿ ನೀಡಿದರೆ ಈ ಸಮಸ್ಯೆಯನ್ನು ಸಂಪೂರ್ಣ ಹತೋಟಿಗೆ ತಂದು ನಿಯಂತ್ರಿಸಬಹುದಾಗಿದೆ. ಈ ಸಂಬಂಧ ಜಿಲ್ಲಾಧಿಕಾರಿಗಳ ಗಮನ ಸೆಳೆಯಲಾಗಿದ್ದು, ಇದು ಒಳ್ಳೆಯ ಸಲಹೆ ಎಂದು ಹೇಳಿದ್ದಾರೆ ಎಂದರು.

ನಗರದಲ್ಲಿ ಎಬಿಸಿ ಕೇಂದ್ರಗಳನ್ನು ಸ್ಥಳೀಯ ಸಂಸ್ಥೆಗಳೇ ನಿರ್ಮಾಣ ಮಾಡುವ ನಿಟ್ಟಿನಲ್ಲಿ ವೈದ್ಯರ ನೇಮಕ ಮಾಡಿ ಕ್ರಮ ವಹಿಸುವುದಾಗಿ ಸಭೆಗೆ ಭರವಸೆ ನೀಡಿದರು.

ಬೀದಿನಾಯಿಗಳಿಗೆ ನಾಗರೀಕರು ಎಲ್ಲೆಂದರಲ್ಲಿ ಆಹಾರ ಹಾಕುತ್ತಿದ್ದಾರೆ. ಇದರಿಂದಾಗಿ ನಾಯಿಗಳು ಮಕ್ಕಳು, ಮಹಿಳೆಯರನ್ನು ಕಚ್ಚಿ ಗಾಯಗೊಳಿಸುತ್ತಿವೆ. ಮುಂದೆ ನಗರಸಭೆ ಆರೋಗ್ಯ ನಿರೀಕ್ಷಕರು ಗುರ್ತಿಸುವ ಸ್ಥಳದಲ್ಲಿ ಆಹಾರ ಹಾಕಬೇಕೆಂದು ಮನವಿ ಮಾಡಿದರು.

ಸಧ್ಯದಲ್ಲೇ ನಗರದಲ್ಲಿ ನಗರಸಭೆ ಸದಸ್ಯರನ್ನೊಳಗೊಂಡ ಸಭೆ ನಡೆಸಿ ಔಪಚಾರಿಕ ಚರ್ಚೆ ನಡೆಸಿ ಬೀದಿನಾಯಿಗಳ ನಿಯಂತ್ರಣಕ್ಕೆ ಅಗತ್ಯ ಕ್ರಮ ಕೈಗೊಳ್ಳುವ ನಿರ್ಧಾರ ಕೈಗೊಳ್ಳಲಾಗುವುದೆಂದು ಹೇಳಿದರು.

ಪಶುಪಾಲನಾ ಇಲಾಖೆಯ ಉಪನಿರ್ದೇಶಕ ಮೋಹನ್‌ಕುಮಾರ್ ಮಾತನಾಡಿ, ಬೀದಿನಾಯಿಗಳ ಉಪಟಳ ತಡೆಗೆ ಸಂತಾನ ಹರಣ ಶಸ್ತ್ರಚಿಕಿತ್ಸೆ ನಡೆಸಿ ಅವು ಇರುವ ಜಾಗಕ್ಕೆ ತಂದು ಬಿಡಬೇಕು ಎಂಬ ನಿಯಮವಿದೆ ಎಂದರು.

ನಗರದಲ್ಲಿ ಈಗಾಗಲೇ 5 ಸಾವಿರ ಬೀದಿನಾಯಿಗಳಿವೆ ಎಂದು ಗುರ್ತಿಸಲಾಗಿದೆ. ಎಬಿಸಿ ಜೊತೆಗೆ ವ್ಯಾಕ್ಸಿನೇಷನ್ ಮಾಡಬೇಕು, ಇದಕ್ಕೆ ಮೂಲಭೂತ ಸೌಕರ್ಯದ ಅಗತ್ಯವಿದ್ದು, ಇಲಾಖೆಯಿಂದ ನಗರಸಭೆ ಸಹಕಾರ ನೀಡಿದರೆ ವಾರ್ಡ್‌ವಾರು ವ್ಯಾಕ್ಸಿನೇಷನ್ ನೀಡಲು ಬದ್ಧ ಎಂದು ಹೇಳಿದರು.

ಜಿಲ್ಲೆಯನ್ನು ರೇಬಿಸ್‌ನಿಂದ ಮುಕ್ತಗೊಳಿಸಬೇಕಾದರೆ ಸರ್ವರೂ ಒಟ್ಟುಗೂಡಿ ಶ್ರಮಿಸಬೇಕಾದ ಅಗತ್ಯವಿದೆ. ಇದಕ್ಕೆ ಇಲಾಖೆ ಮತ್ತು ನಗರಸಭೆ ಪೌರ ಕಾರ್ಮಿಕರ ತಂಡದ ಅವಶ್ಯಕತೆಯೂ ಬಹಳ ಮುಖ್ಯ ಎಂದರು.

ಈ ಸಂದರ್ಭದಲ್ಲಿ ಉಪಾಧ್ಯಕ್ಷೆ ಲಲಿತಾಬಾಯಿ ಉಪಸ್ಥಿತರಿದ್ದರು.

# ಪ್ರವರ್ಗ 2-ಸಿ ಕ್ರೈಸ್ತರಿಗೆ ನೀಡಬೇಕು : ವರ್ಗೀಸ್



**ಚಿಕ್ಕಮಗಳೂರು:** ಮುಸ್ಲಿಂ ಸಮುದಾಗಳಿಗೆ ನಿಗದಿಪಡಿಸಿರುವ 2ಬಿ ಪ್ರತ್ಯೇಕ ಗುಂಪಿನ ಮಾದರಿಯಲ್ಲಿ ಕ್ರೈಸ್ತರಿಗೂ 2ಸಿ ಪ್ರತ್ಯೇಕ ಗುಂಪನ್ನು ಸೃಜನೆ ಮಾಡಬೇಕೆಂದು ರಾಜ್ಯ ಸರ್ಕಾರ ಮತ್ತು ರಾಜ್ಯ ಹಿಂದುಳಿದ ವರ್ಗಗಳ ಆಯೋಗವನ್ನು ಒತ್ತಾಯಿಸಲಾಗುವುದು ಎಂದು ಜಿಲ್ಲೆಯ ಬಿಷಪ್‌ಪಾದ್ರಿ ಕೆ.ಕೆ.ವರ್ಗೀಶ್ ತಿಳಿಸಿದರು.

ಅವರು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಕರ್ನಾಟಕ ಸರ್ಕಾರ ಹಿಂದುಳಿದ ವರ್ಗಗಳ ಮೀಸಲಾತಿ ಪಟ್ಟಿಯಲ್ಲಿ ಮೂಲ ಕ್ರೈಸ್ತರನ್ನು 3ಬಿ ಗುಂಪಿನಲ್ಲಿ ಸೇರ್ಪಡೆ ಮಾಡಲಾಗಿದೆ. ಈ ಗುಂಪಿನಲ್ಲಿ ಲಿಂಗಾಯತ, ವೀರಶೈವ ಸೇರಿದಂತೆ ಇತರೆ ಬಲಾಢ್ಯ ಜಾತಿಗಳಿವೆ. ಇದರಿಂದ ಉದ್ಯೋಗ ಮತ್ತು ಶಿಕ್ಷಣ ಕ್ಷೇತ್ರಗಳಲ್ಲಿ ಸರ್ಕಾರದ ಮೀಸಲಾತಿಯನ್ನು ಕ್ರೈಸ್ತರು ಪಡೆಯಲು ಕಷ್ಟವಾಗಿದೆ ಎಂದು ಹೇಳಿದರು.

ಕಳೆದ ಸರ್ಕಾರದ ಅವಧಿಯಲ್ಲಿ ಜಾರಿಗೆ ತಂದ ಮತಾಂತರ ನಿಷೇಧಕಾಯ್ದೆ ರಾಜ್ಯವ್ಯಾಪ್ತಿ ಕ್ರೈಸ್ತರಿಗೆ ಮಾರಕವಾಗಿದೆ. ಈಗಿರುವ ರಾಜ್ಯಸರ್ಕಾರ ಮತಾಂತರ ನಿಷೇಧ ಕಾಯಿದೆಯನ್ನು ವಾಪಸ್ ಪಡೆಯಬೇಕೆಂದು ಒತ್ತಾಯಿಸಿದರು.

ಚರ್ಚ್, ಆರಾಧನಾಲಯ, ಸಮುದಾಯ ಭವನಗಳಲ್ಲಿ ಪ್ರಾರ್ಥನೆಗೆ ಅಡ್ಡಿಪಡಿಸಲಾಗುತ್ತಿದೆ. ಕ್ರಿಸ್‌ಮಸ್ ಹಬ್ಬದ ಆಚರಣೆಗಳನ್ನು ಉದ್ಯಾನವನಗಳಲ್ಲಿ ಆಚರಿಸುವಾಗ ಕೆಲವರು ನಡೆಸುವ ದೌರ್ಜನ್ಯಗಳನ್ನು ತಡೆಗಟ್ಟಬೇಕು. ಕ್ರೈಸ್ತರು ಮತ್ತು ಚರ್ಚ್ ಸಮುದಾಯ ಭವನಗಳಿಗೆ ರಕ್ಷಣೆ ನೀಡುವಂತೆ ರಾಜ್ಯ ಸರ್ಕಾರವನ್ನು ಒತ್ತಾಯಿಸಲಾಗುವುದು ಎಂದರು.

ಹಿಂದೂ ಮಠಗಳಿಗೆ ನೀಡುತ್ತಿರುವ ಅನುದಾನಗಳ ಮಾದರಿಯಲ್ಲಿ ಪ್ರೊಟೆಸ್ಟೆಂಟ್ ಕ್ರೈಸ್ತರ ಮಹಾಸಭೆಗೆ ಅನುದಾನ ನೀಡಬೇಕು. ಹಜ್ ಯಾತ್ರಿಕರಿಗೆ ನೀಡುವ ಮಾದರಿಯಲ್ಲಿ ಜೆರುಸಲಂ ಏಸು ಪುಣ್ಯಭೂಮಿಗೆ ತೆರಳುವ ಕ್ರೈಸ್ತರಿಗೂ ಸಹಾಯಧನ ನೀಡಬೇಕು. ಮುಜರಾಯಿ ದೇವಾಲಯಗಳ ಪೂಜಾರಿಗಳಿಗೆ ನೀಡುವ ಮಾಸಿಕ ವೇತನ ಮಾದರಿಯಲ್ಲಿ ಕ್ರೈಸ್ತ ಪಾಸ್ಟರ್ ಮತ್ತು ರೆವರೆಂಡ್‌ಗಳಿಗೂ ಮಾಸಿಕ ವೇತನ ನೀಡಬೇಕೆಂದು ಒತ್ತಾಯಿಸಿದರು.

ಆರ್ಥಿಕ, ಸಾಮಾಜಿಕ ಸಮೀಕ್ಷೆಯಲ್ಲಿ ವಿವಿಧ ಜಾತಿಗಳ ಪಟ್ಟಿಯನ್ನು ಸರ್ಕಾರ ಬಿಡುಗಡೆಮಾಡಿದ್ದು, ಅದರಲ್ಲಿ ಇತರೆ ಜಾತಿಗಳ ಮುಂದೆ ಕ್ರಿಶ್ಚಿಯನ್ ಸೇರಿಸಿರುವ ಕುರಿತು ಕೇಳಿದಾಗ ಜಾತಿಗಣತಿ ಸಂಶಯಾಸ್ಪದವಾಗಿದೆ. ಐಕ್ಯತೆಗೆ ಧಕ್ಕೆಯಾಗಿದೆ ಎಂದು ಹೇಳಿದರು.

ಬೇಡಿಕೆಗಳಿರುವ ಸ್ಥಳಗಳಲ್ಲಿ ಕ್ರೈಸ್ತರಿಗೆ ಸ್ಮಶಾನಭೂಮಿ ಒದಗಿಸುವಂತೆ ಸರ್ಕಾರವನ್ನು ಒತ್ತಾಯಿಸುವ ನಿರ್ಣಯ ಕೈಗೊಳ್ಳಲಾಗಿದೆ. ರಾಜ್ಯವ್ಯಾಪಿ ಜಿಲ್ಲೆ ಮತ್ತು ತಾಲೂಕು ಕೇಂದ್ರಗಳಲ್ಲಿ ಬ್ರಿಟಿಷರ ಕಾಲಘಟ್ಟಗಳಲ್ಲಿ ನೀಡಿದ ಕ್ರೈಸ್ತರ ಸ್ಮಶಾನ ಭೂಮಿಗಳಿದ್ದು, ಕ್ರೈಸ್ತರ ಜನಸಂಖ್ಯೆ ಹೆಚ್ಚಳದ ಕಾರಣದಿಂದ ಈ ಸ್ಮಶಾನಗಳಲ್ಲಿ ಶವ ಹೂಳಲು ಸ್ಥಳಾವಕಾಶದ ಕೊರತೆ ಇದೆ.

# ಆಕ್ಷೇಪಗಳ ನಡುವೆ ಜಾತಿಗಣತಿ ಆರಂಭ

**ಬೆಂಗಳೂರು:** ರಾಜ್ಯದಲ್ಲಿ ಭಾರೀ ವಿವಾದಕ್ಕೆ ಕಾರಣವಾಗಿರುವ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ಹಲವು ಸಮುದಾಯಗಳ ವಿರೋಧ, ಅಸಮಾಧಾನ, ಆಕ್ಷೇಪ, ಆತಂಕ, ಗೊಂದಲದ ನಡುವೆಯೇ ಜಾತಿ ಗಣತಿ ಇಂದಿನಿಂದ ಪ್ರಾರಂಭವಾಗಿದೆ.

ರಾಜ್ಯದ ಹಿಂದುಳಿದ ವರ್ಗಗಳ ಶಾಶ್ವತ ಆಯೋಗ 7 ಕೋಟಿ ಜನರ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಸಮೀಕ್ಷೆ ನಡೆಸಲು ಎಲ್ಲಾ ಸಿದ್ಧತೆ ಮಾಡಿಕೊಂಡಿದೆ. ಇಂದಿನಿಂದ ಅಕ್ಟೋಬರ್ 7ರವರೆಗೆ ಗಣತಿದಾರರು ಮನೆ ಮನೆಗೆ ಭೇಟಿ ನೀಡಿ ಸಮಗ್ರ ಮಾಹಿತಿಗಳನ್ನು ಸಂಗ್ರಹಿಸಲಿದ್ದಾರೆ.

ಇಂದಿನಿಂದ ಆರಂಭವಾಗಲಿರುವ ಜಾತಿ ಗಣತಿಗೆ ಹಿಂದುಳಿದ ವರ್ಗಗಳ ಆಯೋಗ 1.75 ಲಕ್ಷ ಶಿಕ್ಷಕರನ್ನು ಬಳಸಿಕೊಳ್ಳಲಿದ್ದು,




ಗಣತಿಗೆ ನಿಯೋಜಿತರಾಗಿರುವ ಶಿಕ್ಷಕರಿಗೆ ಗಣತಿ ಕಾರ್ಯ ಯಾವ ರೀತಿ ನಡೆಸಬೇಕು, ಯಾವೆಲ್ಲಾ ಮಾಹಿತಿ ಸಂಗ್ರಹಿಸಬೇಕು ಎಂಬ ಬಗ್ಗೆ ಈಗಾಗಲೇ ತರಬೇತಿಯನ್ನು ನೀಡಿದೆ.

**33 ಉಪಜಾತಿ ಕೈಬಿಟ್ಟ ಸರ್ಕಾರ**

ಇಂದಿನಿಂದ ಮನೆ ಮನೆಗೆ ತೆರಳುವ ಗಣತಿದಾರರು ಹಿಂದುಳಿದ ವರ್ಗ ಈಗಾಗಲೇ ಸಿದ್ಧಪಡಿಸಿರುವ 60 ಪ್ರಶ್ನೆಗಳನ್ನು ಕೇಳಿ, ಆ ಮಾಹಿತಿ ದಾಖಲು ಮಾಡಿಕೊಳ್ಳಲಾಗುತ್ತದೆ. ಕ್ರಿಶ್ಚಿಯನ್ ಉಪಜಾತಿಗಳ ಹೆಸರನ್ನು ನಮೂದಿಸುವ ಕುರಿತು ಭುಗಿಲೆದ್ದಿದ್ದ ವಿರೋಧದ ಹಿನ್ನೆಲೆಯಲ್ಲಿ 33 ಜಾತಿಗಳನ್ನ ಸರ್ಕಾರದ ಸಲಹೆ ಮೇರೆಗೆ ಆಯೋಗ ಕೈ ಬಿಟ್ಟಿದೆ. ಕ್ರಿಶ್ಚಿಯನ್ ಉಪಜಾತಿಗಳ ವಿಚಾರ-ಕ್ಕೆ ಬಿಜೆಪಿ ತೀವ್ರವಾಗಿ ವಿರೋಧ ವ್ಯಕ್ತಪಡಿಸಿತ್ತು. ಸಚಿವರು ಕೂಡ ಆಕ್ಷೇಪ ವ್ಯಕ್ತಪಡಿಸಿದ್ದರು. ಅಲ್ಲದೆ ರಾಜ್ಯಪಾಲರು ಕೂಡ ಸರ್ಕಾರಕ್ಕೆ ಪತ್ರ ಬರೆದಿದ್ದರು. ಈ ಎಲ್ಲ ಕಾರಣದಿಂದ ಇದೀಗ ಗೊಂದಲಕ್ಕೆ ಕಾರಣವಾದ ಕ್ರಿಶ್ಚಿಯನ್ ಉಪಜಾತಿಗಳನ್ನ ಕೈಬಿಡಲಾಗಿದೆ.

# ಉಗ್ರರ ಸಮಾಧಿ ತೆರವು ಕೋರಿ ಪಿಐಎಲ್ ಸಲ್ಲಿಕೆ



**ನವದೆಹಲಿ:** ತಿಹಾರ್ ಜೈಲಿನ ಆವರಣದಿಂದ ಭಯೋತ್ಪಾದಕರಾದ ಮೊಹಮ್ಮದ್ ಅಫ್ಜಲ್ ಗುರು ಮತ್ತು ಮೊಹಮ್ಮದ್ ಮಕ್ಬೂಲ್ ಭಟ್ ಅವರ ಸಮಾಧಿಗಳನ್ನು ತೆಗೆದುಹಾಕಬೇಕೆಂದು ಒತ್ತಾಯಿಸಿ ದೆಹಲಿ ಹೈಕೋರ್ಟ್‌ನಲ್ಲಿ ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆ (ಪಿಐಎಲ್) ಸಲ್ಲಿಸಲಾಗಿದೆ. ವಿಶ್ವ ವೇದಿಕ್ ಸನಾತನ ಸಂಘ ಸಲ್ಲಿಸಿರುವ ಅರ್ಜಿಯಲ್ಲಿ, ಸರ್ಕಾರಿ ಸ್ವಾಮ್ಯದ ಜೈಲಿನೊಳಗೆ ಈ ಸಮಾಧಿಗಳು ಮುಂದುವರಿಯುವುದು ಕಾನೂನುಬಾಹಿರ, ಸಂವಿಧಾನಬಾಹಿರ ಮತ್ತು ಸಾರ್ವಜನಿಕ ಹಿತಾಸಕ್ತಿಗೆ ವಿರುದ್ಧವಾಗಿದೆ ಎಂದು ವಾದಿಸಲಾಗಿದೆ.

Published and Owned by : **PRATHIBHA M.S.**, Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**